₹ 4 | ಪುಟ: 4 | ಸಂಪುಟ: 4 | ಸಂಚಿಕೆ 67 | newsbelagavi@gmail.com | 9900332089 | 9900332089



# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ
BELAGAVI VARADI KANNADA DAILY
ಕನ್ನಡ ದಿನಪತ್ರಿಕೆ
Volume : 4 | Issue: 67 | Thursday, 27, APRIL, 2023 | RNI: KARKAN/2020/79084 | Regn,No:G-2/PMG/KA/NK/BM/139/2021-23 | 24

## ಹುಕ್ಕೇರಿ ಕ್ಷೇತ್ರದ ಸಮಗ್ರ ನೀರಾವರಿಗೆ ಬದ್ಧ: ಸಿಎಂ

ಹುಕ್ಕೇರಿ: ಕ್ಷೇತ್ರವು ಸಂಪೂರ್ಣ ನೀರಾವರಿ ಮಾಡಬೇಕೆಂದು ಕನಸ್ಸು ಕಡಿಂದ ಉಮೇಶ ಕತ್ತಿ ಅವರು ಅಡಿಸಿದ್ದೇಶ್ವರ ಹಾಗೂ ಶಂಕರಲಿಂಗ ಯಾತ ನೀರಾವರಿಗಳಿಗೆ ಹಣ ಮಂಜೂರು ಮಾಡಿಸಿಕೊಂಡಿದ್ದಾರೆ. ಉಮೇಶ ಕತ್ತಿ ಅವರ ಕನಸ್ಸು ನನಸ್ಸಾಗುವ ಸಮಯ ಬಂದಾಗ ಅವರಿಲ್ಲದ ನೆನೆಪು ನೆಮ್ಮೆಲ್ಲರನ್ನು ಕಾಡುತ್ತಿದೆ. ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿವರು ಭಾವುಕರಾದರು.



ಅವರು ಪಟ್ಟಣದ ಬಿಜೆಪಿ ಅಭ್ಯರ್ಥಿ ನಿಖಿಲ ಕತ್ತಿ ಅವರ ಚುನಾವಣೆ ಪ್ರಚಾರದ ರ್‍ಯಾಲಿಯಲ್ಲಿ ಮಾತನಾಡಿದರು.

ಉಮೇಶ ಕತ್ತಿಅವರುಯಾವುದೇ ಸಚಿವ ಸ್ಥಾನ ನೀಡಿದರೂ ನಿಭಾಯಿಸಬಲ್ಲ ಶಕ್ತಿಯಾಗಿದ್ದರು. ರೈತರಗೋಸ್ಕರ ಸದಾ ಚಿಂತನಶೀಲರಾಗಿದ್ದ ಅವರು ರೈತರ ಬೆಳೆದ ಕಬ್ಬು ನುರಿಸುವುದಕ್ಕಾಗಿ ತಾಲೂಕಿನ ಎರಡು ಸಕ್ಕರೆ ಕಾರ್ಖಾನೆ ನಿರ್ಮಿಸಿದ್ದಾರೆ, ರಾಜ್ಯದಲ್ಲಿರುವ ಏಕೈಕ ವಿದ್ಯುತ್ ಸಹಕಾರಿ ಸಂಘ ಬೆಳೆಸಿ ರೈತರಿಗೆ ಹಾಗೂ ಗ್ರಾಹಕರಿಗೆ ವಿದ್ಯುತ್ ಕೊರತೆಯಾಗಿದಂತೆ ನೋಡಿ ಕೊಳ್ಳುತ್ತಿರುವ ಕತ್ತಿ ಸಹೋದರರ ಕಾರ್ಯರಾಜ್ಯಕ್ಕೆ ಮಾದರಿಯಾಗಿದೆ. ಬಿಜೆಪಿ ಮತ್ತೇಅಧಿಕಾರಕ್ಕೆ ಬರುವುದಕ್ಕೆ ಅಭ್ಯರ್ಥಿ ನಿಖಿಲ ಕತ್ತಿ ಅವರನ್ನು ಹೆಚ್ಚಿನ ಮತಗಳಿಂದ ಆಯ್ಕೆ ಮಾಡಬೇಕೆಂದು ವಿನಂತಿಸಿಕೊಂಡರು.

ಪಕ್ಷದ ಅಭ್ಯರ್ಥಿ ನಿಖಿಲ ಉಮೇಶ ಕತ್ತಿ ಮಾತನಾಡಿ ನಮ್ಮತಂದೆ ಮಾಡಿದಅಭಿವೃದ್ಧಿ ಕಾರ್ಯಗಳು ನನ್ನಗೆ ಶ್ರೀರಕ್ಷೆಯಾದೆ. ಕಣಗಲಾದಲ್ಲಿ ಕೈಗಾರಿಕೆ ಉದ್ಯಮ, ಹಾಗೂ ಡ್ಯಾಂ.ದಲ್ಲಿ ಕಾಶಿ ಉದ್ಯಾನವನ, ಎರಡು ಏತನೀರಾಗಳ ಕಾಮಗಾರಿಗಳು ಪ್ರಗತಿಯಲ್ಲಿವೆ. ಇವುಗಳ ಅಭಿವೃದ್ಧಿಗೆ ಮತದಾರರ ಸಹಕಾರಅವಶ್ಯಕತೆ ಇದೆ, ಅದಕ್ಕಾಗಿ ನನ್ನಗೆ ಮತಹಾಬೇಕೆಂದು ವಿನಂತಿಸಿಕೊಂಡರು.

> ಪಂಚಮಸಾಲಿ ಸಮಾಜದವರಿಗೆ ಶೇ 7ರಷ್ಟು ಮೀಸಲಾತಿ ನೀಡಲಾಗಿದೆ. ವಿದ್ಯಾರ್ಥಿಗಳಿಗೆ ಡಿಗ್ರಿವರಗೆ ಉಚಿತ ಶಿಕ್ಷಣ ನೀಡಲಾಗುವುದು ರಾಜ್ಯದ ಅಭಿವೃದ್ದಿಗಾಗಿ ಡಬ್ಬಲ್ ಇಂಜೆನ್ ಸುಭದ್ರ ಸರ್ಕಾರ ಮತ್ತೊಮ್ಮೆ ನಿರ್ಮಾಣಕ್ಕಾಗಿ ಬಿಜೆಪಿ ಅಭ್ಯರ್ಥಿ ನಿಖಿಲ ಕತ್ತಿಅವರನ್ನು ಬೆಂಬಲಿಸಿ.
>
> **–ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ.**

ಚಿಕ್ಕೋಡಿ ಬಿಜೆಪಿ ಅಭ್ಯರ್ಥಿ ರಮೇಶ ಕತ್ತಿ ಮಾತನಾಡಿ ನನ್ನ ಸಹೋದರ ಉಮೇಶ ಕತ್ತಿ ಅವರು ಸ್ಥಾನದಲ್ಲಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರನ್ನು ಕಾನುತ್ತಿದ್ದೇವೆ ಕ್ಷೇತ್ರದ ಹಾಗೂ ರಾಜ್ಯದ ಸಂಪೂರ್ಣ ಅಭಿವೃದ್ದಿಗೆ ಮತದಾರರು ನಿಖಿಲ ಕತ್ತಿಪರ ಬಿಜೆಪಿಗೆ ಮತಹಾಕಬೇಕೆಂದು ವಿನಂತಿಸಿದರು.

ಹುಕ್ಕೇರಿಕ್ಷೇತ್ರದ ಬಿಜೆಪಿ ಅಭ್ಯರ್ಥಿ ನಿಖಿಲ ಪರ ಮತಯಾಚನೆಗೆ ನಿಗದಿಪಡಿದ 11.30 ಸಮಯಕ್ಕೆ ಬರಬೇಕಾಗಿದ್ದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿಅವರು 1.30ಕ್ಕೆ ಅಗಮಿಸಿದ 2ಗಂಟೆ ತಡಮಾಡಿ ಬಂದರು.

ಬಿಸಿಲಿನ ತಾಪಕ್ಕೆಕಾರ್ಯಕರ್ತರು ಕೇಲ ಕಾರ್ಯಕರ್ತರು ಬಂದದಾರಿ ಸುಂಕವಿಲ್ಲದಂತೆ ಮನೆಗಳಿಗೆ ತೆರಳಿದರು.

ಶಾಸಕರಾದ ಶಶಿಕಲಾ ಜೊಲ್ಲೆ, ಅಭಯ ಪಾಟೀಲ, ಜಿಲ್ಲಾ ಮುಖಂಡರಾದ ಎಂ,ಬಿ. ಜಿರಲೆ, ರಾಜೇಶ ನೇರ್ಲಿ, ರಾಚಯ್ಯಾ ಹಿರೇಮಠ, ಪವನ ಕತ್ತಿ, ಮತ್ತಿತರರು ಉಪಸ್ಥಿತರಿದ್ದರು.

## ಸುಭದ್ರ ಸರ್ಕಾರ ರಚಿಸಲು ಕಾಂಗ್ರೆಸ್‌ಗೆ ಮತ ನೀಡಿ

### ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ

ಚಿಕ್ಕೋಡಿ: ಕರ್ನಾಟಕದಲ್ಲಿ ಸುಭದ್ರ ಸರ್ಕಾರ ರಚಿಸಿ, ಒಳ್ಳೆಯ ಆಡಳಿತ ನಡೆಸಲು ಮತದಾರರು ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿ 150 ಸೀಟುಗಳನ್ನು ಗೆಲ್ಲಿಸಲು ಮುಂದಾಗಬೇಕು ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕರೆ ನೀಡಿದರು.



ಪಟ್ಟಣದ ಆರ್ಡಿ. ಹೈಸ್ಕೂಲ್ ಗ್ರೌಂಡ್ ನಲ್ಲಿ ಹಮ್ಮಿಕೊಂಡಿದ್ದ ಕರ್ನಾಟಕ ವಿಧಾನಸಭಾ ಚುನಾವಣೆಯ ಕಾಂಗ್ರೆಸ್ ಪಕ್ಷದ ಪ್ರಚಾರ ಸಭೆಯಲ್ಲಿ ಅವರು ಮಾತನಾಡಿ, ರೈತರ ಆದಾಯ ದುಪ್ಪಟ್ಟು ಮಾಡುತ್ತೇನೆಂದು ಹೇಳಿದ ಪ್ರಧಾನಿ ಮೋದಿ ಅವರು ರೈತರ ಸಾಲವನ್ನೇ ದುಪ್ಪಟ್ಟು ಮಾಡಿದ್ದಾರೆ. ಅಲ್ಲದೇ ಎರಡು ವರ್ಷದಲ್ಲಿ ಎಲ್ಲ ಅಗತ್ಯ ವಸ್ತುಗಳ ಬೆಲೆ ಗಗಣಕ್ಕೇರಿವೆ. ಬಿಜೆಪಿ ಸರ್ಕಾರ ಎಲ್ಲದರ ಮೇಲೆ ಜಿಎಸ್ ಟಿ ಹೇರಿ ಬಡ ಜನ ಬೀದಿಗೆ ಬೀಳುವಂತೆ ಮಾಡಿದ್ದಾರೆ. ಮುಂದೊಂದು ದಿನ ಉಸಿರಾಡುವ ಗಾಳಿಗೂ ಪ್ರಧಾನಿ ಅವರು ಜಿಎಸ್ ಟಿ ಹಾಕಿದರೆ ಅಚ್ಚರಿ ಪಡಬೇಕಿಲ್ಲ ಎಂದು ಪ್ರಧಾನಿ ಮೋದಿ ವಿರುದ್ದ ವ್ಯಂಗ್ಯ ವಾಡಿದರು.

70 ವರ್ಷದಲ್ಲಿ ಕಾಂಗ್ರೆಸ್ ಪಕ್ಷ ಏನು ಮಾಡಿದ್ದಾರೆಂದು ಬಿಜೆಪಿಯವರು ಕೇಳುತ್ತಾರೆ. ದೇಶದಲ್ಲಿ ಕಾಂಗ್ರೆಸ್ ನೇತೃತ್ವದ ಸರ್ಕಾರವೇ ಅಣೆಕಟ್ಟುಗಳನ್ನು ಕಟ್ಟಿದೆ. 9 ವರ್ಷ ದೇಶದಲ್ಲಿ ಆಡಳಿತ ನಡೆಸುತ್ತಿರುವ ನೀವು ಎಷ್ಟು ಡ್ಯಾಂಗಳನ್ನು ಕಟ್ಟಿದ್ದೀರಿ ಎಂದು ಪ್ರಧಾನಿ ವಿರುದ್ಧ ವಾಗ್ದಾಳಿ ನಡೆಸಿದ ಅವರು, ಸದ್ಯ ಭ್ರಷ್ಟ ಬಿಜೆಪಿಯವರು ಐಟಿ, ಇಡಿ ಅಂತಾ ನಮ್ಮ ಶಾಸಕರಿಗೆ ಬೆದರಿಕೆ ಹಾಕಿ ಖರೀದಿಸಲು ಯತ್ನಿಸುತ್ತಾರೆ. ಶಾಸಕರನ್ನು ಖರೀದಿ ಮಾಡಿ ಅನೇಕ ರಾಜ್ಯಗಳಲ್ಲಿ ಬಿಜೆಪಿಯವರು ಸರ್ಕಾರ ರಚಿಸಿದ ಉದಾಹರಣೆಗಳು ಇವೆ. ಅದೇ ರೀತಿ ಪ್ರಧಾನಿ ಮೋದಿ ಅವರು ಭ್ರಷ್ಟಾಚಾರ ಬಗ್ಗೆ ಮಾತನಾಡುತ್ತಾರೆ. ಆದರೆ ರಾಜ್ಯದಲ್ಲಿ ಭ್ರಷ್ಟಾಚಾರ ನಡೆದರೂ ಮೌನ ವಹಿಸಿರುವುದು ವಿಷಾದಕರವಾಗಿದೆ ಎಂದರು.

ಪ್ರಾಸ್ತಾವಿಕವಾಗಿ ಮಾತಾನಾಡಿದ ಪ್ರಕಾಶ್ ಹುಕ್ಕೇರಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ನಮ್ಮ ಹೆಮ್ಮೆಯ ನಾಯಕರು, ನಮ್ಮ ಕುಟುಂಬದ ಮೇಲೆ ಅಪಾರ ಪ್ರೀತಿ, ವಿಶ್ವಾಸ ಇಟ್ಟಿದ್ದಾರೆ. ನಾನು ಸಂಸದ ಇದ್ದಾಗ ನಮ್ಮ ಭಾಗಕ್ಕೆ ಎರಡು ಕೇಂದ್ರೀಯ ವಿದ್ಯಾಲಯಗಳನ್ನು ಮಂಜೂರು ಮಾಡಿಕೊಟ್ಟು ಕೀರ್ತಿ ಖರ್ಗೆ ಅವರಿಗೆ ಸಲ್ಲುತ್ತದೆ ಎಂದ ಅವರು, 2013 ರಿಂದ ಇಲ್ಲಿಯವರೆಗೆ ಚಿಕ್ಕೋಡಿ–ಸದಲಗಾ ಕ್ಷೇತ್ರದಲ್ಲಿ ಕಾಂಗ್ರೆಸ್ ಬಾವುಟ ಹಾರಿಸಿದ್ದು, ಈ ಭಾರೀಯೂ ಗಣೇಶ ಹುಕ್ಕೇರಿ ಗೆಲುವು ಸಾಧಿಸುವುದು ಖಚಿತವೆಂದು ಹೇಳಿದರು.



ಬೆಳಗಾವಿ ವಿಮಾನ ನಿಲ್ದಾಣದಲ್ಲಿ ಆಕಸ್ಮಿಕವಾಗಿ ಭೇಟಿಯಾದ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರೊಂದಿಗೆ ಸಿದ್ದರಾಮಯ್ಯ ಅವರ ಕುಶಲೋಪಹರಿ.

## ಲಕ್ಷ್ಮಣ ಸವದಿಗೆ ಸವಾಲು ಹಾಕಿದ ಬಿಜೆಪಿ ಅಭ್ಯರ್ಥಿ ಕುಮಟಳ್ಳಿ

ಅಥಣಿ: ವಿಧಾನಸಭಾ ಚುನಾವಣೆ ಅಖಾಡ ರಂಗೇರಿದ್ದು, ಅಥಣಿ ಬಿಜೆಪಿ ಅಭ್ಯರ್ಥಿ ಮಹೇಶ್ ಕುಮಟಳ್ಳಿ, ಮಾಜಿ ಡಿಸಿಎಂ, ಕಾಂಗ್ರೆಸ್ ಅಭ್ಯರ್ಥಿ ಲಕ್ಷ್ಮಣ ಸವದಿಗೆ ಸವಾಲು ಹಾಕಿದ್ದಾರೆ.



ಅಥಣಿಯಲ್ಲಿ ಚುನಾವಣಾ ಪ್ರಚಾರ ನಡೆಸಿದ ಮಹೇಶ್ ಕುಮಟಳ್ಳಿ, ಲಕ್ಷ್ಮಣ ಸವದಿ ವಿರುದ್ಧ ವಾಗ್ದಾಳಿ ನಡೆಸಿದರು. ನಿಮ್ಮ ಉಪಕಾರ ನಮ್ಮ ಮೇಲಿಲ್ಲ, ನಾವು ಘಂಟಾಘೋಷವಾಗಿ ಹೇಳಬೇಕಾಗುತ್ತದೆ. ನಮ್ಮಿಂದ ನೀವು ಇಂದು ಎಂಎಲ್ ಸಿ ಆದ್ರಿ. ರಾಜ್ಯದ ಡಿಸಿಎಂ ಆದ್ರಿ. ಆದರೆ ನನ್ನ ವಿರುದ್ಧ 50 ಕೋಟಿ ಆರೋಪ ಮಾಡಿದ್ದಿರಿ. ಇದಕ್ಕೆ ಜನರು ತಕ್ಕ ಉತ್ತರ ನೀಡಲಿದ್ದಾರೆ ಎಂದು ಕಿಡಿಕಾರಿದರು.

50 ಕೋಟಿ ಕೊಟ್ಟಿದ್ದು ನಿಜವೇ ಆಗಿದ್ದರೆ ನೀವೇ ಸಮಯ ನಿಗದಿ ಮಾಡಿ, ಸಿದ್ದೇಶ್ವರ ದೇವಸ್ಥಾನಕ್ಕೆ ಬರಲು ನಾನು ತಯಾರಿದ್ದೇನೆ. ಒಂದು ವೇಳೆ ನೀವು ಬಾರದಿದ್ದರೂ ನಾನೇ ಹೋಗಿ ದೇವಸ್ಥಾನದಲ್ಲಿ ಕಾಲು ಬಿದ್ದು ಬರುವೆ ಎಂದು ಹೇಳುವ ಮೂಲಕ ಪರೋಕ್ಷವಾಗಿ ಆಣೆ ಪ್ರಮಾಣದ ಸವಾಲು ಹಾಕಿದ್ದಾರೆ.

## ಯಡಿಯೂರಪ್ಪ ವಿರುದ್ಧ ಧಿಕ್ಕಾರ ಕೂಗಿದ ಲಕ್ಷ್ಮಣ ಸವದಿ ಬೆಂಬಲಿಗರು

ಅಥಣಿ: ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ ವಿರುದ್ಧ ಮಾಜಿ ಡಿಸಿಎಂ ಲಕ್ಷ್ಮಣ ಸವದಿ ಬೆಂಬಲಿಗರು ಘೋಷಣೆ ಕೂಗಿದ ಘಟನೆ ಬೆಳಗಾವಿ ಜಿಲ್ಲೆಯ ಅಥಣಿ ಕ್ಷೇತ್ರದಲ್ಲಿ ನಡೆದಿದೆ.



ಅಥಣಿ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಮಹೇಶ್ ಕುಮಟಳ್ಳಿ ಪರ ಚುನಾವಣಾ ಪ್ರಚಾರಕ್ಕೆ ಆಗಮಿಸುತ್ತಿದ್ದಂತೆಯೇ ಕಾಂಗ್ರೆಸ್ ಅಭ್ಯರ್ಥಿ ಲಕ್ಷ್ಮಣ ಸವದಿ ಬೆಂಬಲಿಗರು ಯಡಿಯೂರಪ್ಪ ಮೋಸಗಾರ ಎಂದು ಧಿಕ್ಕಾರ ಕೂಗಿದ್ದಾರೆ. ಯಡಿಯೂರಪ್ಪನವರು ಒಂದಲ್ಲ ಇನ್ನೂ ಹತ್ತು ಬಾರಿ ಅಥಣಿಗೆ ಬಂದರೂ ಲಕ್ಷ್ಮಣ ಸವದಿ ಗೆಲ್ಲುತ್ತಾರೆ. ಯಡಿಯೂರಪ್ಪ ಮೋಸಗಾರ ಎಂದು ಕಾಗ್ರೆಸ್ ಕಾರ್ಯಕರ್ತರು ಘೋಷಣೆ ಕೂಗಿದ್ದಾರೆ.

## ಯಡಿಯೂರಪ್ಪಗೆ ಟಾಂಗ್ ನೀಡಿದ ಜಗದೀಶ್ ಶೆಟ್ಟರ್

ಹುಬ್ಬಳ್ಳಿ: ವಿಧಾನಸಭಾ ಚುನಾವಣಾ ಅಖಾಡ ಕ್ಷಣ ಕ್ಷಣಕ್ಕೂ ರಂಗೆರುತ್ತಿದ್ದು, ಬಿಜೆಪಿ ಬಿಟ್ಟು ಕಾಂಗ್ರೆಸ್ ಗೆ ಸೇರ್ಪಡೆಯಾಗಿರುವ ಜಗದೀಶ್ ಶೆಟ್ಟರ್ ಸೋಲಿಸಲು ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಪಣ ತೊಟ್ಟಿದ್ದಾರೆ. ಈ ನಿಟ್ಟಿನಲ್ಲಿ ಹುಬ್ಬಳ್ಳಿ ಸಾಲು ಸಾಲು ಸಭೆ, ವರಿಷ್ಠರಿಂದ ಮತಯಾಚನೆ ಮೂಲಕ ರಣತಂತ್ರ ಹೆಣೆಯುತ್ತಿದ್ದಾರೆ. ತತ್ವ ಸಿದ್ಧಾಂತಗಳಿಲ್ಲದ ಪಕ್ಷ ಕಾಂಗ್ರೆಸ್ ಜೊತೆ ಕೈ ಜೋಡಿಸಿರುವ ಶೆಟ್ಟರ್ ಅವರನ್ನು ಸೋಲಿಸುವುವ ಜವಾಬ್ದಾರಿ ನಾನು ತೆಗೆದುಕೊಂಡಿದ್ದೇನೆ ಎಂದು ಗುಡಿಗಿದ್ದಾರೆ. ಯಡಿಯೂರಪ್ಪ ಹೇಳಿಕೆಗಳಿಗೆ ಜಗದೀಶ್ ಶೆಟ್ಟರ್ ಕೌಂಟರ್ ಕೊಟ್ಟಿದ್ದಾರೆ.



ಹುಬ್ಬಳ್ಳಿಯಲ್ಲಿ ಮಾತನಾಡಿದ ಜಗದೀಶ್ ಶೆಟ್ಟರ್, ನನ್ನನ್ನು ಸೋಲಿಸಲು ಹಿಂದಿನಿಂದ ಸಭೆ ನಡೆಸುವುದು, ಹೇಳಿಕೆಗಳನ್ನು ಕೊಡುವುದು ಕಾರ್ಯಕರ್ತರನ್ನು ಎತ್ತಿಕಟ್ಟುವುದು ಮಾಡುವುದು ಬಿಟ್ಟು ನೀವೇ ನೇರವಾಗಿ ಬನ್ನಿ. ಯಾರೇ ಬಂದರು ಭಯ ಪಡುವ ಪ್ರಶ್ನೆಯೇ ಇಲ್ಲ. ಹುಬ್ಬಳ್ಳಿಯ ಜನ ನನ್ನ ಕೈಬಿಡುವುದಿಲ್ಲ ಎಂದು ತಿಳಿಸಿದ್ದಾರೆ. ನಾನು ಬಿಜೆಪಿ ತೊರೆದು ಕಾಂಗ್ರೆಸ್ ಸೇರಿದ್ದಕ್ಕೆ ನನ್ನ ತತ್ವ ಸಿದ್ಧಾಂತಗಳ ಬಗ್ಗೆ ಪ್ರಶ್ನೆ ಮಾಡುವ ಯಡಿಯೂರಪ್ಪನವರೇ ನೀವು ಅಂದು ಬಿಜೆಪಿ ಬಿಟ್ಟು ಕೆಜೆಪಿ ಕಟ್ಟಿದಾಗ ನಿಮ್ಮ ತತ್ವ, ಸಿದ್ಧಾಂತ ಎಲ್ಲಿ ಹೋಗಿತ್ತು ಎಂದು ಪ್ರಶ್ನಿಸಿದ್ದಾರೆ. ಅಲ್ಲದೇ ನೈತಿಕತೆ ಇಲ್ಲ ಎಂದು ಶೆಟ್ಟರ್ ವಿರುದ್ಧ ವಗದಾಳಿ ನಡೆಸುವ ಬಿಜೆಪಿ ನಾಯಕರಿಗೂ ತಿರುಗೇಟು ನೀಡಿರುವ ಜಗದೀಶ್ ಶೆಟ್ಟರ್, ಸಿಡಿ ಸ್ಟೇ ತಂದ ಮಂತ್ರಿಗಳಿಗೆ ಟಿಕೆಟ್ ಕೊಟ್ಟಿದ್ದೀರಾ. 6–7 ಮಂತ್ರಿಗಳು ಸಿಡಿ ಕೇಸ್ ನಲ್ಲಿ ಕೋರ್ಟ್ ನಿಂದ ಸ್ಟೇ ತಂದಿದ್ದಾರೆ. ಅಂತವರಿಗೆ ಟಿಕೆಟ್ ನೀಡಲಾಗಿದೆ. 80 ಕ್ರಿಮಿನಲ್ ಕೇಸ್ ಇದ್ದವರಿಗೆ ಟಿಕೆಟ್ ಕೊಟ್ಟಿದ್ದಾರೆ ತತ್ವ, ಸಿದ್ಧಾಂತಗಳು, ನೈತಿಕತೆಗಳು ಇಲ್ಲಿ ಅನ್ವಯಿಸಲ್ವಾ? ಇದು ಯಾವ ನೈತಿಕತೆ? ಪಕ್ಷಕ್ಕಾಗಿ ಪ್ರಾಮಾಣಿಕವಾಗಿ ದುಡಿದು, ನಿಷ್ಠೆಯಿಂದ ಇರುವವರಿಗೆ ಅವಮಾನ ಮಾಡಿದ್ದೀರಿ. ಅನಿವಾರ್ಯವಾಗಿ ಪಕ್ಷ ಬಿಟ್ಟು ನಮ್ಮ ಭದ್ರತೆ ನಾವು ನೋಡಿಕೊಳ್ಳಬೇಕಾಯಿತು. ಈಗ ಆರೋಪ ಮಾಡಿ ಪ್ರಯೋಜನವಿಲ್ಲ ಚುನಾವಣೆ ಎದುರಿಸಬೇಕಾಗಿದೆ. ಹುಬ್ಬಳ್ಳಿ–ಧಾರವಾಡ ಸೆಂಟ್ರಲ್ ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲ್ಲಲಿದೆ ಎಂದು ಹೇಳಿದರು.

## ಬಿಜೆಪಿಗೆ ತಕ್ಕ ಪಾಠ ಕಲಿಸಿ: ಮಾಜಿ ಸಿಎಂ ಸಿದ್ದರಾಮಯ್ಯ

ರಾಯಬಾಗ: ರಾಜ್ಯದಲ್ಲಿರುವ ಭ್ರಷ್ಟ ಮತ್ತು ಕೋಮುವಾದಿಗಳ ಬಿಜೆಪಿ ಪಕ್ಷಕ್ಕೆ ರಾಜ್ಯದ ಜನರು ಬೇಸತ್ತಿದ್ದು, ಈ ಬಾರಿ ಕಾಂಗ್ರೆಸ್ ಅಧಿಕಾರಕ್ಕೆ ತರುವ ಮುಖಾಂತರ ಬಿಜೆಪಿ ಕಿತ್ತೊಗೆಯುವ ಕೆಲಸ ಮಾಡಬೇಕು ಎಂದು ಮಾಜಿ ಸಿಎಂ ಸಿದ್ದರಾಮಯ್ಯ ಹೇಳಿದರು.



ಪಟ್ಟಣದ ಆರ್ವಿ.ಆರ್.ಕಾಲೇಜು ಮೈದಾನದಲ್ಲಿ ನಡೆದ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರ ಸಮಾವೇಶಕ್ಕೆ ಚಾಲನೆ ನೀಡಿ ಅವರು ಮಾತನಾಡಿ, ಬಿಜೆಪಿ ಎಂದೂ ಬಡವರು,ರೈತರ ಮತ್ತು ದೀನದಲಿತರ ಪರವಾಗಿ ಕೆಲಸ ಮಾಡಿಲ್ಲ. ರಾಜ್ಯವನ್ನು ಸಾಲದಲ್ಲಿ ಮುಳುಗಿಸಿರುವುದೆ ಬಿಜೆಪಿ ಸರಕಾರ ಎಂಬುದನ್ನು ನಾವು ಮರೆಯಬಾರದು. ರಾಜ್ಯವನ್ನು ಆರ್ಥಿಕವಾಗಿ ಸರ್ವನಾಶ ಮಾಡಿದೆ. ನಾನು ರಾಜ್ಯದಲ್ಲಿ ಮುಖ್ಯಮಂತ್ರಿಯಾಗಿದ್ದಾಗ ಜಾರಿಗೆ ತಂದಿರುವ ಅನ್ನಭಾಗ್ಯ, ಕ್ಷೀರಭಾಗ್ಯ ಸೇರಿದಂತೆ ಹಲವಾರು ಯೋಜನೆಗಳನ್ನು ಒಂದೊಂದಾಗಿ ಕಿತ್ತೆಸೆಯುವ ಕೆಲಸ ಮಾಡಿದ್ದಾರೆ ಎಂದು ಬಿಜೆಪಿ ಸರಕಾರದ ವಿರುದ್ಧ ಆಕ್ರೋಶ ವ್ಯಕ್ತ ಪಡಿಸಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಅಕಾರಕ್ಕೆ ಬಂದರೇ ಅನ್ನಭಾಗ್ಯ ಯೋಜನೆ ಮರ ಜಾರಿಗೆ ತರುತ್ತೆವೆ.

ಮನೆಯ ಯಜಮಾನಿಗೆ ಪ್ರತಿತಿಂಗಳು 2000ರೂ.ಗಳನ್ನು ನೀಡುತ್ತೇವೆ.

ಈ ಬಾರಿ ರಾಜ್ಯದಲ್ಲಿ ಕಾಂಗ್ರೆಸ್ ಪರವಾದ ಗಾಳಿ ಬೀಸುತ್ತಿದ್ದು, ಕಾಂಗ್ರೆಸ್ ಪಕ್ಷ ಅಕಾರಕ್ಕೆ ಬರುವುದರಲ್ಲಿ ಸಂದೇಹವಿಲ್ಲ ಎಂದು ಹೇಳಿದರು.


ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ ಜಾರಕಿಹೊಳಿ, ಶಾಸಕಿ ಲಕ್ಷ್ಮೀ ಹೆಬ್ಬಾಳಕರ, ಮಾಜಿ ಸಚಿವ ಪ್ರಕಾಶ ಹುಕ್ಕೇರಿ, ಮಾಜಿ ಶಾಸಕ ಶಾಮರಾವ ಘಾಟಗೆ, ಮಾಜಿ ಸಂಸದ ಅಮರಸಿಂಹ ಪಾಟೀಲ ಮಾತನಾಡಿದರು.

ಕಾಂಗ್ರೆಸ್ ಅಭ್ಯರ್ಥಿ ಮಹಾವೀರ ಮೋಹಿತೆ ಮಾತನಾಡಿ, ಕ್ಷೇತ್ರದ ಮತದಾರರು ನಿಮ್ಮ ಮನೆಯ ಆಳಾಗಿ ಸೇವೆ ಮಾಡಲು ಇದೊಂದು ಭಾರಿ ಅವಕಾಸ ಮಾಡಿಕೊಡುವಂತೆ ಮನವಿ ಮಾಡಿದರು.

ಈ ವೇಳೆ ಡಾ. ಎನ್.ಎ. ಮಗದುಮ್ಮ, ಸಂಜು ಬಾನೆ, ಯುವ ನಾಯಕ್ ರಾಹುಲ ಜಾರಕಿಹೊಳಿ, ಸದಾಶಿವ ದೇಶಿಂಗೆ,ಅರ್ಜುನ ನಾಯಿಕವಾಡಿ, ಅಣ್ಣಾಸಾಬ ಕೋಣೆ, ರಾಜುಗೌಡ ಪಾಟೀಲ, ಶಂಕರಗೌಡ ಪಾಟೀಲ, ಸದಾಶಿವ ರಾಠೋಡ, ಗಣೇಶ ಮೋಹಿತೆ, ಅಪ್ಪಾಸಾಬ ಕುಲಗೂಡೆ, ರಾಜು ಕೋಟಗಿ ಮುಂತಾದವರು ಉಪಸ್ಥಿತರಿದ್ದರು. ಲಕ್ಷ್ಮಣರಾವ ಚಿಂಗಳೆ ಸ್ವಾಗತಿಸಿದರು.

## ನಕ್ಸಲರ ಅಟ್ಟಹಾಸಕ್ಕೆ 11 ಯೋಧರು ಹುತಾತ್ಮ

ದಾಂತೇವಾಡ: ಛತ್ತಿಸ್ ಗಢದಲ್ಲಿ ನಕ್ಸಲರು ಅಟ್ಟಹಾಸ ಮೆರೆದಿದ್ದು, ಐಇಡಿ ಸ್ಫೋಟದಲ್ಲಿ 11 ಯೋಧರು ಹುತಾತ್ಮರಾಗಿರುವ ಘಟನೆ ನಡೆದಿದೆ.



ಛತ್ತೀಸ್ ಗಢದ ದಾಂತೇವಾಡ ಜಿಲ್ಲೆಯ ಅರನಪುರದಲ್ಲಿ ಈ ಘಟನೆ ನಡೆದಿದೆ. ಡಿ ಆರ್ ಜಿ ಸಿಬ್ಬಂದಿ ತೆರಳುತ್ತಿದ್ದ ವಾಹನವನ್ನು ನಕ್ಸಲರು ಸ್ಫೋಟಿಸಿದ್ದಾರೆ ಎಂದು ತಿಳಿದುಬಂದಿದೆ.

ಘಟನೆಯಲ್ಲಿ ಡಿ ಆರ್ ಜಿ ಸಿಬ್ಬಂದಿ ವಾಹನ ಚಾಲಕ ಸೇರಿ 10 ಯೋಧರು ಹುತಾತ್ಮರಾಗಿದ್ದಾರೆ. ನಕ್ಸಲರ ವಿರುದ್ಧ ಡಿ ಆರ್ ಜಿ ಸಿಬ್ಬಂದಿ ಕಾರ್ಯಾಚರಣೆ ನಡೆಸಿತ್ತು. ಈ ವೇಳೆ ನಕ್ಸಲರು ಯೋಧರ ವಾಹನವನ್ನೇ ಸ್ಫೋಟಿಸಿದ್ದಾರೆ ಎಂದು ತಿಳಿದುಬಂದಿದೆ.

## ಲೂಟಿ ಹೊಡೆದಿದ್ದೇ ಬಿಜೆಪಿ ಸಾಧನೆ: ಪ್ರಿಯಾಂಕಾ ಗಾಂಧಿ ಟೀಕೆ

ಶೃಂಗೇರಿ: ಬಿಜೆಪಿ ಸರ್ಕಾರ ರಾಜ್ಯದಲ್ಲಿ 1.50 ಲಕ್ಷ ಕೋಟಿ ಹಣವನ್ನು ಲೂಟಿ ಮಾಡಿದೆ ಎಂದು ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ವಾಗ್ದಾಳಿ ನಡೆಸಿದ್ದಾರೆ. ಶೃಂಗೇರಿಯಲ್ಲಿ ಪಕ್ಷದ ಪರವಾಗಿ ಪ್ರಚಾರ ನಡೆಸಿದ ಅವರು ಬಿಜೆಪಿ ಸರಕಾರ ಎಸಗಿರುವ ದ್ರೋಹದ ಪಟ್ಟಿ ಮಾಡಿದರು.

ಇಲ್ಲಿ ಅಡಿಕೆ ಬೆಳೆಗಾರರಿಗೆ ಸರಿಯಾದ ಬೆಲೆ ಸಿಗುತ್ತಿಲ್ಲ, ನಿಮ್ಮ ಸಾಲವನ್ನು ಮನ್ನಾ ಮಾಡುವುದಿಲ್ಲ. ನಿಮ್ಮ ಮೇಲೆ ಜಿಎಸ್ ಟಿ ಹಾಕುತ್ತಿದ್ದಾರೆ. ನೀವು ಗ್ಯಾಸ್ ಸಿಲಿಂಡರ್ ಗೆ, ಅಡುಗೆ ಅನಿಲ, ದಿನಸಿ ಪದಾರ್ಥಗಳಿಗೆ ಎಷ್ಟು ಹಣ ನೀಡುತ್ತಿದ್ದೀರಿ ಯೋಚಿಸಿ ಎಂದರು.

ನಾನು ಶಾರದಾಂಬೆ ದರ್ಶನ ಮಾಡಿಕೊಂಡು ಬಂದಿದ್ದೇನೆ. ಅಲ್ಲಿಗೆ ಹೋಗಿದ್ದಾಗ ಶಂಕರಾಚಾರ್ಯರು ಇಂದಿರಾ ಗಾಂಧಿ ಅವರು ಇಲ್ಲಿ ಚುನಾವಣೆ ಸ್ಪರ್ಧಿಸಿದ್ದರಲ್ಲವೇ ಎಂದು ಕೇಳಿದರು. ನಾನು ಹೌದು, ಚಿಕ್ಕಮಗಳೂರಿನಿಂದ ಸ್ಪರ್ಧಿಸಿದ್ದರು ಎಂದು ಹೇಳಿದೆ. ನನಗೆ ಮತ್ತು ನನ್ನ ಸಹೋದರನಿಗೆ ಅವರು ಆಶೀರ್ವಾದ ಮಾಡಿದರು ಎಂದರು.



ನಾವು ಸತ್ಯದ ಪರವಾಗಿ ಹೋರಾಟ ಮಾಡುತ್ತಿದ್ದು, ಭಗವಂತನ ಆಶೀರ್ವಾದ ನಮ್ಮ ಮೇಲಿದೆ. ಇನ್ನು ಕರ್ನಾಟಕದ ಚುನಾವಣೆ ಕೂಡ ಸತ್ಯದ ಪರವಾದ ಹೋರಾಟವಾಗಿದೆ.

ಮೈಸೂರಿನಲ್ಲಿ ಹೋಟೆಲ್ ಮಾಲೀಕರ ಮಗಳು ಮಾತನಾಡಿಸಿದರು. ಆಗ ನಾನು ಆಕೆಗೆ ನೀವು ಏನು ಮಾಡುತ್ತಿದ್ದೀರಿ ಎಂದು ಕೇಳಿದ್ದಕ್ಕೆ ಇನ್ಫೋಸಿಸ್ ಕಂಪನಿಯಲ್ಲಿ ಕೆಲಸ ಮಾಡುತ್ತಿರುವುದಾಗಿ ಹೇಳಿದರು.

ನನಗೆ ಬಹಳ ಹೆಮ್ಮೆ ಎನಿಸಿತು, ಇದು ನಿಜವಾದ ಕರ್ನಾಟಕ ಎನಿಸಿತು. ಪರಿಶ್ರಮ, ಪ್ರಾಮಾಣಿಕತೆಯಿಂದ ನಮ್ಮ ಪರಂಪರೆ ಮುಂದುವರಿಸುತ್ತಾ, ತಮ್ಮ ಸಂಸ್ಕೃತಿ, ಸಭ್ಯತೆ ಉಳಿಸಿ ಬೆಳೆಸಿಕೊಂಡು ಭವಿಷ್ಯದ ಕಡೆ ನೋಡುವುದು ಕರ್ನಾಟಕ ರಾಜ್ಯ ಎಂದರು. }ಕೊನೆಯ ಪುಟಕ್ಕೆ

## ಬಿಜೆಪಿಯಲ್ಲಿ ಗುಲಾಮ ನಾಗಿರಬೇಕೆ: ಶೆಟ್ಟರ್ ಪ್ರಶ್ನೆ

ಹುಬ್ಬಳ್ಳಿ: 6 ಸಲ ಶಾಸಕನಾಗಿ ಆಯ್ಕೆಯಾಗಿದ್ದೇನೆ. ದೊಡ್ಡ ನಾಯಕನಾಗಿ ಬೆಳೆದಿದ್ದೇನೆ. ಇಷ್ಟು ವರ್ಷಗಳ ಕಾಲ ರಾಜಕೀಯದಲ್ಲಿ ಗೆದ್ದ ನನ್ನನ್ನು ಒಂದು ಕ್ಷಣದಲ್ಲಿ ಹೊಸಕಿಹಾಕಿದರೆ ಸುಮ್ಮನೆ ಇರಬೇಕಾ? ಗುಲಾಮನ ರೀತಿಯಲ್ಲಿ ಇರಬೇಕಾ?' ಎಂದು ಜಗದೀಶ ಶೆಟ್ಟರ್ ಬಿಜೆಪಿ ವರಿಷ್ಠರ ವಿರುದ್ಧ ಹರಿಹಾಯ್ದರು.



ನಗರದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ನನಗೆ ಏಕೆ ಟಿಕೆಟ್ ನಿರಾಕರಿಸಲಾಯಿತು ಎನ್ನುವುದನ್ನು ಇದುವರೆಗೆ ಹೇಳಿಲ್ಲ. ಅಮಿತ್ ಶಾ ಅವರು ಕೂಡ ಏನೂ ಹೇಳಿಲ್ಲ. ಹೇಳಿದ್ದರೆ ಪಕ್ಷ ಬಿಡುತ್ತಿರಲಿಲ್ಲ' ಎಂದು ಹೇಳಿದರು.

ನಾನು ಬಡಪಾಯಿ. ಗೌರವದಿಂದ ನಡೆಸಿಕೊಳ್ಳಲಿಲ್ಲವೆಂದು ಬಿಜೆಪಿ ಬಿಟ್ಟು ಹೊರಬಂದೆ. ನಾನೊಬ್ಬನೇ ಅಲ್ಲ, ಹಲವು ಮುಖಂಡರು ಪಕ್ಷ ಬಿಟ್ಟುಹೋಗಿದ್ದಾರೆ. ಆದರೂ, ನನ್ನನ್ನೇ ಏಕೆ ಟಾರ್ಗೆಟ್ ಮಾಡಲಾಗುತ್ತಿದೆ' ಎಂದು ಶೆಟ್ಟರ್ ಅಳಲು ತೋಡಿಕೊಂಡರು.

ಸೆಂಟ್ರಲ್ ಕ್ಷೇತ್ರ ಸಣ್ಣ ಕ್ಷೇತ್ರ. ಈ ಕ್ಷೇತ್ರದಲ್ಲಿ ಬಿಜೆಪಿಯ ರಾಷ್ಟ್ರೀಯ ನಾಯಕರಾದ ಅಮಿತ್ ಶಾ, ಜೆ.ಪಿ. ನಡ್ಡಾ, ಸ್ಮೃತಿ ಇರಾನಿ ಹಾಗೂ ರಾಜ್ಯದ ಪ್ರಮುಖ ನಾಯಕರಾದ ಬಿ.ಎಸ್. ಯಡಿಯೂರಪ್ಪ ಅವರನ್ನು ಕರೆತಂದಿದ್ದಾರೆ. ನನ್ನ ಮೇಲೆ ಏಕೆ ಇಷ್ಟೊಂದು ಪ್ರಹಾರ' ಎಂದು ಪ್ರಶ್ನಿಸಿದರು.

ಪ್ರಧಾನಿ ನರೇಂದ್ರ ಮೋದಿ ಅವರನ್ನೂ ಕ್ಷೇತ್ರಕ್ಕೆ ಕರೆಸುತ್ತಿದ್ದಾರೆ ಎನ್ನುವ ಮಾಧ್ಯಮದವರು ಗಮನಕ್ಕೆ ತಂದಾಗ, 'ಅವರು ಕೇಂದ್ರದಲ್ಲಿ ಪಕ್ಷವನ್ನು ಅಧಿಕಾರಕ್ಕೆ ತರುವ ಸಾಮರ್ಥ್ಯ ಹೊಂದಿರುವವರು. ಅವರ ಎದುರು ನಾನು ಸಣ್ಣ ವ್ಯಕ್ತಿ' ಎಂದು ಉತ್ತರಿಸಿದರು. ನಾನು ಪಕ್ಷ ಬಿಟ್ಟಿರುವುದಕ್ಕಿಂತ ಕಾಂಗ್ರೆಸ್ ಸೇರಿರುವುದಕ್ಕೆ ಇವರು ಆಕ್ಷೇಪ ಎತ್ತುತ್ತಿದ್ದಾರೆ. ನಾನೊಬ್ಬನೇ ಅಲ್ಲ ಹಲವು ನಾಯಕರು ಕಾಂಗ್ರೆಸ್ ಸೇರಿಲ್ಲವೇ? ಲಕ್ಷ್ಮಣ ಸವದಿ, ಯು.ಬಿ. ಬಣಕಾರ ಸೇರಿದ್ದಾರೆ. ಇದಲ್ಲದೇ, ಆಯನೂರು ಮಂಜುನಾಥ ಅವರು ಬಿಜೆಪಿ ಬಿಟ್ಟು ಜೆಡಿಎಸ್ ಸೇರಿದ್ದಾರೆ. ಬಿ.ಎಸ್.ವೈ ಆಪ್ತ ಎನ್.ಆರ್. ಸಂತೋಷ ಅವರು ಕೂಡ ಪಕ್ಷ ಬಿಟ್ಟು, ಜೆಡಿಎಸ್ ಸೇರಿದ್ದಾರೆ' ಎಂದು ನುಡಿದರು. ಈ ರೀತಿ ಮುಖಂಡರು ಬೇರೆ ಬೇರೆ ಪಕ್ಷಕ್ಕೆ ಹೋಗುವುದು ಸಹಜ. ಆದರೆ, ಶೆಟ್ಟರ್ ಅವರು ಹೋಗಿದ್ದನ್ನೇ ದೊಡ್ಡ ಅಪರಾಧ ಎನ್ನುವಂತೆ ಬಿಂಬಿಸಲಾಗುತ್ತಿದೆ. ಒಂದು ರೀತಿ ಆಂದೋಲನದಂತೆ ನನ್ನ ವಿರುದ್ಧ ರಾಷ್ಟ್ರೀಯ ಹಾಗೂ ರಾಜ್ಯ ಮಟ್ಟದ ನಾಯಕರು ಪ್ರಚಾರ ಕೈಗೊಂಡಿದ್ದಾರೆ. ನಾನು ಪಕ್ಷಕ್ಕೆ ಏನು ಅನ್ಯಾಯ ಮಾಡಿದ್ದೇನೆ? ಏನು ದ್ರೋಹ ಮಾಡಿದ್ದೇನೆ? ಮತ್ತೊಂದು ಅವಧಿಗೆ ಸ್ಪರ್ಧಿಸಲು ಟಿಕೆಟ್ ಕೊಡಿ ಎಂದು ಕೇಳಿದ್ದೆ ತಪ್ಪಾ?' ಎಂದು ಪ್ರಶ್ನಿಸಿದರು.

## ನಟಿ ತಾರಾ ವಿರುದ್ಧ ಎಫ್‌ಐಆರ್ ದಾಖಲು

ಬೆಂಗಳೂರು: ನಟಿ ತಾರಾ ಅನುರಾಧ ಮೇಲೆ ಎಫ್ಐಆರ್ ದಾಖಲಾಗಿದೆ. ಸರಕಾರಿ ಕಾರನ್ನು ವೈಯಕ್ತಿಕ ಕೆಲಸಗಳಿಗೆ ಬಳಸಿಕೊಂಡ ಆರೋಪದಲ್ಲಿ ನಟಿಯ ವಿರುದ್ಧ ಕೇಸ್ ದಾಖಲಾಗಿದೆ.



ವಿಡಿಯೋ ಮಾಡಿ ಸಾಮಾಜಿಕ ಜಾಲತಾಣದಲ್ಲಿ ಹರಿಬಿಟ್ಟಿದ್ದ ಕೆಆರ್ ಎಸ್ ಪಕ್ಷದ ಕಾರ್ಯಕರ್ತರು ನಟಿಯ ವಿರುದ್ಧ ಕ್ರಮಕ್ಕೆ ಒತ್ತಾಯಿಸಿದ್ದಾರೆ. ವಿಡಿಯೋ ಆಧರಿಸಿ ಫ್ಲೈಯಿಂಗ್ ಸ್ಕ್ವಾಡ್ ದೂರು ದಾಖಲಿಸಿದೆ.

ದೂರು ದಾಖಲಾದ ಬಳಿಕ ತಾರಾ ಅವರ ಮನೆ ಬಳಿ ಪರಿಶೀಲನೆಯನ್ನೂ ನಡೆಸಲಾಗಿದೆ. ಅಧಿಕಾರಿಗಳು ಪರಿಶೀಲನೆ ನಡೆಸುವ ವೇಳೆ ಕಾರು ಮನೆ ಬಳಿ ಇರಲಿಲ್ಲ. ಸದ್ಯ ಪುಟ್ಟೇನಹಳ್ಳಿ ಪೊಲೀಸ್ ಠಾಣೆಯಲ್ಲಿ ನಟಿ ತಾರಾ ವಿರುದ್ಧ ಪ್ರಕರಣ ದಾಖಲಾಗಿದೆ.

## ಲಕ್ಷ್ಮಣ ಸವದಿ ಬಗ್ಗೆ ಅವರಿಗೆ ಗೊತ್ತಿರ್ಲಿಲ್ಲ: ರಮೇಶ್ ಜಾರಕಿಹೊಳಿ ವಾಗ್ದಾಳಿ

ಬೆಳಗಾವಿ: ಲಕ್ಷ್ಮಣ ಸವದಿ ಉದ್ದ ಅಂಗಿ ಹಾಕಿಕೊಂಡು ಬರುತ್ತಿದ್ದಕ್ಕೆ ದೊಡ್ಡವನು ಅಂತಾ ತಿಳಿದಿದ್ದರು. ಆದರೆ ಬಿಜೆಪಿ ನಾಯಕರಿಗೆ ಆತ ಮೋಸ ಮಾಡಿದ ಎಂದು ಮಾಜಿ ಸಚಿವ ರಮೇಶ್ ಜಾರಕಿಹೊಳಿ ವಾಗ್ದಾಳಿ ನಡೆಸಿದ್ದಾರೆ.



ಬೆಳಗಾವಿ ಅಥಣಿಯಲ್ಲಿ ಮಾತನಾಡಿದ ರಮೇಶ್ ಜರಕಿಹೊಳಿ, ಲಕ್ಷ್ಮಣ ಸವದಿಗೆ ಬಿಜೆಪಿಯಲ್ಲಿ ಏನು ಅನ್ಯಾಯ ಆಗಿತ್ತು? ಮಹೇಶ್ ಕುಮಟಳ್ಳಿಗೆ ಅನ್ಯಾಯವಾಗಿತ್ತು.

ಸವದಿ ಸೋತಿದ್ದರೂ ಆತನಿಗೆ ಎಲ್ಲಾ ಸ್ಥಾನಮಾನ ನೀಡಲಾಗಿತ್ತು. ಒಳ್ಳೆಯ ಉದ್ದೇಶಕ್ಕಾಗಿ ಡಿಸಿಎಂ ಮಾಡಿದರು. ಆದರೆ ಆತ ಪಂಚಾಯಿತಿಗೂ ಲಾಯಕ್ಕಿಲ್ಲ ಅಂತ ಅವರಿಗೆ ಗೊತ್ತಿರಲಿಲ್ಲ. ಇಷ್ಟೆಲ್ಲ ಕೊಟ್ಟಿದ್ದಾಗ್ಯೂ ಆತ ಬಿಜೆಪಿಗೆ ದ್ರೋಹ ಬಗೆದು ಹೋಗಿದ್ದಾನೆ ಎಂದು ಕಿಡಿಕಾರಿದರು.

ಸವದಿ ಶಕುನಿ ಕೆಲಸ ಮಾಡಿ ಮಾಜಿ ಸಿಎಂ ಯಡಿಯೂರಪ್ಪ ಹಾಗೂ ಹೈಕಮಾಂಡ್ ಸಂಬಂಧ ಒಡೆಯುವಂತೆ ಮಾಡಿದ. ಬಿಜೆಪಿ ನಾಯಕರಿಗೆ ಮೋಸ ಮಾಡಿದ್ದು ಲಕ್ಷ್ಮಣ ಸವದಿ ಎಂದು ಆರೋಪಿಸಿದ್ದಾರೆ.

# ಒಕ್ಕಲಿಗ ಮತ್ತು ಲಿಂಗಾಯತರಿಗೆ ಹೆಚ್ಚು ಮೀಸಲಾತಿ: ಸಿದ್ದರಾಮಯ್ಯ ಭರವಸೆ



ಮೀಸಲಾತಿ ಪ್ರಮಾಣ ಹೆಚ್ಚಿಸುವ ಮೂಲಕ ಒಕ್ಕಲಿಗ ಮತ್ತು ಲಿಂಗಾಯತರಿಗೆ ಹೆಚ್ಚು ಮೀಸಲಾತಿ ನೀಡುತ್ತೇವೆ ಎಂದು ವಿಪಕ್ಷ ನಾಯಕ ಸಿದ್ದರಾಮಯ್ಯ ಭರವಸೆ ನೀಡದ್ದಾರೆ.

ಮುಂಬರುವ ದಿನಗಳಲ್ಲಿ ರಾಜ್ಯದಲ್ಲಿ ಒಟ್ಟು ಮೀಸಲಾತಿ ಪ್ರಮಾಣ ಮತ್ತು ವಿವಿಧ ಸಮುದಾಯಗಳ ಮೀಸಲಾತಿ ಹೆಚ್ಚಿಸುವ ಕುರಿತು ಸಿದ್ದರಾಮಯ್ಯನವರ ಪತ್ರಿಕಾ ಹೇಳಿಕೆ ನೀಡಿದ್ದಾರೆ.

ಮುಸ್ಲಿಮರಿಗೆ ಮೀಸಲಾತಿ ನೀಡಲು ಒಕ್ಕಲಿಗರ ಇಲ್ಲವೇ ಲಿಂಗಾಯತರ ಮೀಸಲಾತಿಯನ್ನು ಕಡಿತಗೊಳಿಸುತ್ತೀರಾ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಹಾ ಕಾಂಗ್ರೆಸ್ ಪಕ್ಷವನ್ನು ಪ್ರಶ್ನಿಸಿದ್ದಾರೆ.

ಈ ಪ್ರಶ್ನೆಯಲ್ಲಿಯೇ ಜಾತಿ–ಜಾತಿ ಮತ್ತು ಧರ್ಮ–ಧರ್ಮದ ನಡುವೆ ಜಗಳ ಹಚ್ಚುವ ದುಷ್ಟ ಆಲೋಚನೆ ಇದೆ ಎನ್ನುವುದನ್ನು ಅರ್ಥಮಾಡಿಕೊಳ್ಳದಷ್ಟು ಕರ್ನಾಟಕದ ಜನತೆ ದಡ್ಡರಲ್ಲ. ಈ ರಾಜ್ಯದ ಒಕ್ಕಲಿಗರು ಮತ್ತು ಲಿಂಗಾಯತರು ಸೇರಿದಂತೆ ಈ ರಾಜ್ಯದ ಮಹಾ ಜನತೆ ಕಿತ್ತು ತಿನ್ನುವ ದುಷ್ಟರಲ್ಲ ಹಂಚಿ ತಿನ್ನುವ ಔದಾರ್ಯ ಸಜ್ಜನರು ಎನ್ನುವುದನ್ನು ಅಮಿತ್ ಶಹಾ ಅವರಿಗೆ ವಿನಮ್ರವಾಗಿ ತಿಳಿಸಬಯಸುತ್ತೇನೆ ಎಂದಿದ್ದಾರೆ.

ಒಕ್ಕಲಿಗ, ಲಿಂಗಾಯತ ಇಲ್ಲವೇ ಇತರ ಅರ್ಹ ಜಾತಿಗಳಿಗೆ ಮೀಸಲಾತಿ ನೀಡುವುದಕ್ಕೆ ನಮ್ಮ ಪಕ್ಷದ ವಿರೋಧ ಇಲ್ಲ. ನಮ್ಮ ಪಕ್ಷ ಮೀಸಲಾತಿ ಹೆಚ್ಚಳದ ಪರವಾಗಿದೆ. ಬಿಜೆಪಿ ಕನ್ನಡಿಯೊಳಗಿನ ಗಂಟು ತೋರಿಸಿ ಜನರನ್ನು ತಪ್ಪು ದಾರಿಗೆಳೆಯುತ್ತಿರುವುದನ್ನಷ್ಟೇ ವಿರೋಧಿಸುತ್ತಿದ್ದೇವೆ ಎಂದು ತಿಳಿಸಿದ್ದಾರೆ.

ಒಟ್ಟು ಮೀಸಲಾತಿ ಪ್ರಮಾಣವನ್ನು ಹೆಚ್ಚಿಸುವುದೊಂದೇ ಈಗಿನ ಮೀಸಲಾತಿಯ ಗೊಂದಲ–ವಿವಾದವನ್ನು ಪರಿಹರಿಸಲು ಇರುವ ಸರಿಯಾದ ಮಾರ್ಗ. ಮೀಸಲಾತಿಗೆ ಈಗ ವಿಧಿಸಲಾಗಿರುವ ಶೇಕಡಾ 50ರ ಮಿತಿ ಸಂವಿಧಾನದಲ್ಲಿ ಹೇರಲಾದ ಮಿತಿ ಅಲ್ಲ, ಅದು ಇಂದಿರಾ ಸಹಾನಿ ಪ್ರಕರಣದಲ್ಲಿ ಸುಪ್ರೀಂ ಕೋರ್ಟ್ ನೀಡಿದ್ದ ಆದೇಶದ ಭಾಗ. ಈಗಾಗಲೇ ಕೇಂದ್ರ ಸರ್ಕಾರ ಆರ್ಥಿಕವಾಗಿ ಹಿಂದುಳಿದವ–ರಿಗೆ ಶೇಕಡಾ ಹತ್ತರಷ್ಟು ಮೀಸಲಾತಿ ನೀಡಿ ಶೇಕಡಾ 50ರ ಮಿತಿಯನ್ನು ಉಲ್ಲಂಘಿಸಿದೆ. ಈ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ಒಟ್ಟು ಮೀಸಲಾತಿ ಪ್ರಮಾಣವನ್ನು ಹೆಚ್ಚಿಸಲು ಅನುಕೂಲವಾಗುವಂತೆ ಸಂವಿಧಾನಕ್ಕೆ ತಿದ್ದುಪಡಿ ತರಬೇಕು ಎಂದು ಅವರು ಒತ್ತಾಯಿಸಿದ್ದಾರೆ

ಎಲ್ಲ ಜಾತಿಗಳಿಗೆ ಅವರ ಜನಸಂಖ್ಯೆಗೆ ಅನುಗುಣವಾಗಿ ಶಿಕ್ಷಣ ಮತ್ತು ಉದ್ಯೋಗದಲ್ಲಿ ಪ್ರಾತಿನಿಧ್ಯ ಸಿಗುವಂತೆ ಮೀಸಲಾತಿಯನ್ನು ಪರಿಷ್ಕರಿಸಿ ಜಾರಿಗೆ ತರಬೇಕು ಮತ್ತು ಈ ಮೀಸಲಾತಿಯನ್ನು ಸಂವಿಧಾನದ ಒಂಭತ್ತನೇ ಶೆಡ್ಯೂಲ್ ಗೆ ಸೇರಿಸಬೇಕು ಎಂದಿದ್ದಾರೆ.

ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದರೆ ಒಟ್ಟು ಮೀಸಲಾತಿ ಪ್ರಮಾಣವನ್ನು ಶೇಕಡಾ 50ರಿಂದ ಶೇಕಡಾ 75ರ ವರೆಗೆ ಹೆಚ್ಚಿಸಿ ಎಲ್ಲ ಸಮುದಾಯಗಳಿಗೆ ಅವರ ಜನಸಂಖ್ಯೆಗೆ ಅನುಗುಣವಾಗಿ ಶಿಕ್ಷಣ ಮತ್ತು ಉದ್ಯೋಗದಲ್ಲಿ ಮೀಸಲಾತಿಯನ್ನು ನೀಡುತ್ತೇವೆ.

ಮೀಸಲಾತಿ ಪರಿಷ್ಕರಣೆಗೆ ಕರ್ನಾಟಕ ರಾಜ್ಯಕ್ಕೆ ಹೆಚ್ಚು ಅನುಕೂಲ ಇದೆ. ಯಾಕೆಂದರೆ ನಮ್ಮಲ್ಲಿ ನ್ಯಾಯವಾದಿ ಕಾಂತರಾಜ್ ಅಧ್ಯಕ್ಷತೆಯ ಹಿಂದುಳಿದ ವರ್ಗಗಳ ಶಾಶ್ವತ ಆಯೋಗ ಮನೆ ಮನೆಗೆ ತೆರಳಿ ವೈಜ್ಞಾನಿಕವಾಗಿ ಗಣತಿ ಮಾಡಿರುವ ಸಾಮಾಜಿಕ ಮತ್ತು ಆರ್ಥಿಕ ಸಮೀಕ್ಷೆಯ ವರದಿ ಸಿದ್ಧ ಇದೆ. ಅದರ ಆಧಾರದಲ್ಲಿ ಮೀಸಲಾತಿ ರೂಪಿಸಿದರೆ ಸುಪ್ರೀಂ ಕೋರ್ಟ್ ಕೂಡಾ ಒಪ್ಪಿಕೊಳ್ಳಬಹುದು ಎಂಬ ಭರವಸೆ ನನಗಿದೆ ಎಂದಿದ್ದಾರೆ.

1994ರಲ್ಲಿ ಎಂ.ವೀರಪ್ಪ ಮೊಯಿಲಿ ಸರ್ಕಾರ ರಾಜ್ಯದ ಒಟ್ಟು ಮೀಸಲಾತಿ ಪ್ರಮಾಣವನ್ನು ಶೇಕಡಾ 73ಕ್ಕೆ ಹೆಚ್ಚಿಸಿ ಆದೇಶ ಮಾಡಿತ್ತು.

ಅದಿನ್ನು ಸುಪ್ರೀಂ ಕೋರ್ಟ್ ವಿಚಾರಣೆಯಲ್ಲಿದೆ. ಅಲ್ಲಿಯೂ ರಾಜ್ಯ ಸರ್ಕಾರ ಜಾತಿಗಣತಿಯ ವರದಿಯನ್ನು ಮುಂದಿಟ್ಟು ಮೀಸಲಾತಿ ಹೆಚ್ಚಳಕ್ಕೆ ಅನುಮತಿ ಕೋರಿದರೆ ನ್ಯಾಯಾಲಯ ಖಂಡಿತ ಒಪ್ಪಿಗೆ ನೀಡಬಹುದು.


ಸಾಮಾಜಿಕ ಅನ್ಯಾಯವನ್ನೇ ರಾಜ–ಕೀಯದ ಅಸ್ತ್ರವನ್ನಾಗಿ ಮಾಡಿಕೊಂಡು ಬಂದ ಭಾರತೀಯ ಜನತಾ ಪಕ್ಷಕ್ಕಾಗಲಿ, ಅದರ ಅಧ್ಯಕ್ಷರಿಗಾಗಲಿ ಸಾಮಾಜಿ–ಕ ನ್ಯಾಯ ಅರ್ಥವಾಗಲಾರದು. ನಮ್ಮದು ಕೋಮುವಾದವನ್ನು ಉಸಿರಾಡುವ ಗುಜರಾತ್ ಅಲ್ಲ, ಬಸವವಾದವನ್ನು ಮೈಗೂಡಿಸಿಕೊಂಡಿರುವ ಕರ್ನಾಟಕ ಎನ್ನುವುದನ್ನು ನೆನಪಿಸಬಯಸುತ್ತೇನೆ.

ಸಾಧನೆಯ ಬಲದಿಂದಾಗಲಿ, ಸವಕಲು ಗೊಂಡಿರುವ ಕೋಮುವಾದದಿಂದಾಗಲಿ ಚುನಾವಣೆಯನ್ನು ಎದುರಿಸಲು ಅಸಾಧ್ಯವೆಂದು ಗೊತ್ತಾದಾಗ ಅವಸರದಲ್ಲಿ ಈ ಅಡ್ಡಕಸುಬಿ ಮೀಸಲಾತಿ ನೀತಿಯನ್ನು ರಾಜ್ಯ ಸರ್ಕಾರ ಘೋಷಿಸಿತ್ತು. ಈ ಮೀಸಲಾತಿಯನ್ನು ಒಕ್ಕಲಿಗ ಇಲ್ಲವೇ ಲಿಂಗಾಯತರ ಮೇಲಿನ ಪ್ರೀತಿ ಇಲ್ಲವೇ ಕಾಳಜಿಯಿಂದ ಘೋಷಿಸಿದ್ದಲ್ಲ, ಇದರ ಹಿಂದಿನ ದುರುದ್ದೇಶ ಮುಸ್ಲಿಂ ಮತ್ತು ಒಕ್ಕಲಿಗ–ಲಿಂಗಾಯತರ ನಡುವೆ ದ್ವೇಷ ಹುಟ್ಟಿಸುವುದೇ ಆಗಿದೆ ಎಂದು ಟೀಕಿಸಿದ್ದಾರೆ.

ಅಮಿತ್ ಶಾ ಅವರ ಪ್ರಶ್ನೆಯಲ್ಲಿಯೇ ಬಿಜೆಪಿಯ ದುಷ್ಟ ಆಲೋಚನೆ ಸ್ಪಷ್ಟವಾಗಿದೆ. ಆದರೆ ನ್ಯಾಯಾಲಯದ ಮೇಲೆ ನಂಬಿಕೆ ಇಟ್ಟಿರುವ ಮುಸ್ಲಿಂಮರು ಮೀಸಲಾತಿ ರದ್ದತಿಯಿಂದ ಅಧೀರರಾಗಲಿಲ್ಲ, ಪ್ರಚೋದನೆಗೂ ಒಳಗಾಗಲಿಲ್ಲ. ಅದೇ ರೀತಿ ಇದು ಕನ್ನಡಿಯೊಳಗಿನ ಗಂಟು ಎನ್ನುವುದನ್ನು ಅರ್ಥಮಾಡಿಕೊಂಡಿರುವ ಜಾಗೃತ ಲಿಂಗಾಯತ ಮತ್ತು ಒಕ್ಕಲಿಗ ಸಮುದಾಯಗಳು ಕೂಡಾ ಹೊಸ ಮೀಸಲಾತಿ ಘೋಷಣೆಯಿಂದ ಸಂಭ್ರಮಗೊಳ್ಳಲಿಲ್ಲ. ಇದು ನಮ್ಮ ಕರ್ನಾಟಕ.

ಈಗ ನಿರೀಕ್ಷೆಯಂತೆ ಸುಪ್ರೀಂ ಕೋರ್ಟ್ ರಾಜ್ಯ ಸರ್ಕಾರಕ್ಕೆ ಕಪಾಳಮೋಕ್ಷ ಮಾಡಿದೆ. ಹೊಸ ಮೀಸಲಾತಿಯನ್ನು ಜಾರಿಗೆ ತರುವುದಿಲ್ಲ ಎಂದು ಸಾಲಿಸಿಟ–ರ್ ಜನರಲ್ ಮೂಲಕ ನ್ಯಾಯಾಲಯಕ್ಕೆ ಭರವಸೆ ನೀಡಿರುವ ಕೇಂದ್ರ ಸರ್ಕಾರದ ಗೃಹಸಚಿವರು ಚುನಾವಣಾ ಭಾಷಣದಲ್ಲಿ ಅದರ ವಿರುದ್ಧವಾಗಿ ಮಾತನಾಡುತ್ತಿದ್ದಾರೆ. ಗೃಹ ಸಚಿವ ಅಮಿತ್ ಶಾ ಅವರೇ, ಇದು ಕರ್ನಾಟಕ, ಇಲ್ಲಿ ಹೊಡೆಯುವ, ಬಡಿಯುವ, ಮುರಿಯುವ, ಸುಡುವ 'ಗುಜರಾತ್ ಮಾದರಿ' ನಡೆಯುವುದಿಲ್ಲ. ಇಲ್ಲಿ ಏನಿದ್ದರೂ ಪ್ರೀತಿಸುವ, ಪೊರೆಯುವ ಮತ್ತು ಕಟ್ಟುವ ಕರ್ನಾಟಕ ಮಾದರಿಯೇ ನಡೆಯುವುದು ಎಂದು ತಿರುಗೇಟು ನೀಡಿದ್ದಾರೆ.

## 80 ವರ್ಷ ಮೇಲ್ಪಟ್ಟ ನಾಗರಿಕರು ಮತ್ತು ಅಂಗವಿಕಲರಿಗೆ ಏ. 29ರಿಂದ ಮೇ 6ರವರೆಗೆ ಮನೆಯಿಂದಲೇ ಮತದಾನ



ಬೆಂಗಳೂರು: 80 ವರ್ಷಕ್ಕಿಂತ ಹೆಚ್ಚು ವಯಸ್ಸಾಗಿರುವವರು ಮತ್ತು ಅಂಗವಿಕಲ–ರಿಗೆ ಏಪ್ರಿಲ್ 29ರಿಂದ ಮೇ 6ರವರೆಗೆ ಮನೆಯಿಂದಲೇ ಮತ ಚಲಾಯಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿ ಮನೋಜ್ ಕುಮಾರ್ ಮೀನಾ ತಿಳಿಸಿದರು.

ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, '80 ವರ್ಷ ಮತ್ತು ಅದಕ್ಕಿಂತ ಹೆಚ್ಚು ವಯಸ್ಸಾಗಿರುವ 80,250 ಮಂದಿ ಹಾಗೂ 19,279 ಅಂಗವಿಕಲರು ಮನೆಯಿಂದಲೇ ಮತದಾನ ಮಾಡಲು ನೋಂದಣಿ ಮಾಡಿಸಿಕೊಂಡಿದ್ದಾರೆ. ಅವರ ಮನೆಗಳಿಗೆ ತೆರಳಿ ಮತಪತ್ರದ ಮೂಲಕ ಮತದಾನಕ್ಕೆ ಅವಕಾಶ ನೀಡಲಾಗುವುದು' ಎಂದರು.

ಏ.29 ರಿಂದ ಮೇ6ರ ಅವಧಿಯಲ್ಲಿ ಪ್ರತೀ ಮತದಾರರ ಮನೆಗೆ ಎರಡು ಬಾರಿ ಚುನಾವಣಾ ಸಿಬ್ಬಂದಿ ಭೇಟಿ ನೀಡುವರು. ರಾಜಕೀಯ ಪಕ್ಷಗಳ ಏಜೆಂಟರ ಸಮ್ಮುಖದಲ್ಲೇ ಗೋಪ್ಯವಾಗಿ ಮತ ಚಲಾಯಿಸಲು ಅವಕಾಶ ಕಲ್ಪಿಸಲಾಗುವುದು.

ಚುನಾವಣಾ ಸಿಬ್ಬಂದಿಯ ಭೇಟಿಯ ಮೊದಲು ಸಮಯ ತಿಳಿಸಲಾಗುವುದು. ಎರಡೂ ಬಾರಿ ಮನೆಯಲ್ಲಿರದಿದ್ದರೆ ಪುನಃ ಮತದಾನಕ್ಕೆ ಅವಕಾಶ ಇರುವುದಿಲ್ಲ.

ಮನೆಯಿಂದ ಮತ ಚಲಾಯಿಸಲು ನೋಂದಣಿ ಮಾಡಿಸಿಕೊಂಡವರಿಗೆ ಮತಗಟ್ಟೆಗೆ ಬಂದು ಮತದಾನ ಮಾಡಲು ಅವಕಾಶ ಇರುವುದಿಲ್ಲ ಎಂದು ತಿಳಿಸಿದರು

ಈ ಚುನಾವಣೆಯಲ್ಲಿ ಒಟ್ಟು 5.30 ಕೋಟಿ ಮತದಾರರು ಹಕ್ಕು ಚಲಾಯಿಸುವ ಅರ್ಹತೆ ಹೊಂದಿದ್ದಾರೆ. 263 ಹೆಚ್ಚುವರಿ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಒಟ್ಟು 58,545 ಮತಗಟ್ಟೆಗಳನ್ನು ಮತದಾನಕ್ಕೆ ಸ್ಥಾಪಿಸಲಾಗಿದೆ ಎಂದರು.

## ಶೆಟ್ಟರ್ ಸೋಲಿಸುವ ಜವಬ್ದಾರಿ ನನ್ನದು, ಲಕ್ಷ್ಮಣ ಸವದಿ ಸೋಲಿಸುವ ಜವಾಬ್ದಾರಿ ನಿಮ್ಮದು: ಬಿ ಎಸ್ ಯಡಿಯೂರಪ್ಪ



ಅಥಣಿ: ಬಿಜೆಪಿಯಲ್ಲಿ ಚುನಾವಣೆಯಲ್ಲಿ ಸ್ಪರ್ಧಿಸಲು ಟಿಕೆಟ್ ಸಿಗದೆ ಬಂಡಾಯವೆದ್ದು ಕಾಂಗ್ರೆಸ್ ಸೇರಿದ ಜಗದೀಶ್ ಶೆಟ್ಟರ್ ಮತ್ತು ಲಕ್ಷ್ಮಣ ಸವದಿ ಮೇಲೆ ಬಿಜೆಪಿ ನಾಯಕರು ಜಿದ್ದಿಗೆ ಬಿದ್ದಂತೆ ಹೇಳಿಕೆಗಳನ್ನು ನೀಡುತ್ತಿದ್ದಾರೆ. ಜಗದೀಶ್ ಶೆಟ್ಟರ್ ಮತ್ತು ಬಿಜೆಪಿ ನಾಯಕರ ಮಧ್ಯೆ ದಿನಕ್ಕೊಂದು ಸೇಡಿನ ಮಾತುಗಳು ಹೊರಬರುತ್ತಲೇ ಇವೆ.

ಮಾಜಿ ಮುಖ್ಯಮಂತ್ರಿ ಬಿ ಎಸ್ ಯಡಿಯೂರಪ್ಪ ಮಾತನಾಡಿ, ಜಗದೀಶ್ ಶೆಟ್ಟರ್ ನ್ನು ಈ ಬಾರಿ ಚುನಾವಣೆಯಲ್ಲಿ ಸೋಲಿಸಲು ಪಣತೊಟ್ಟಿರುವುದಾಗಿ ಹೇಳಿದ್ದಾರೆ. ಅಥಣಿಯಲ್ಲಿ ಮಾತನಾಡಿರುವ ಯಡಿಯೂರಪ್ಪ, ಜಗದೀಶ್ ಶೆಟ್ಟರ್ ಬೆನ್ನಿಗೆ ಚೂರಿ ಹಾಕಿದ್ದಾರೆ. ಅವರನ್ನು ಸೋಲಿಸುವ ಜವಾಬ್ದಾರಿ ನನ್ನದು ಎಂದಿದ್ದಾರೆ. ಬಿಜೆಪಿ ಶೆಟ್ಟರ್ ಅವರಿಗೆ ಎಲ್ಲಾ ಸ್ಥಾನಮಾನಗಳನ್ನು ನೀಡಿದರೂ ಪಕ್ಷ ಬಿಟ್ಟು ಹೋಗುವ ಅನಿವಾರ್ಯತೆ ಅವರಿಗೇನಿತ್ತು ಎಂದು ಪ್ರಶ್ನಿಸಿದ್ದಾರೆ.

ಇಷ್ಟೊಂದು ಸಂಖ್ಯೆಯಲ್ಲಿ ಜನ ಸೇರಿದ್ದು ನೋಡಿದರೆ ಈ ಬಾರಿ ಚುನಾವಣೆಯಲ್ಲಿ ಲಕ್ಷ್ಮಣ ಸವದಿ ಸೋಲುವುದು ಖಚಿತ. ಸೂರ್ಯ–ಚಂದ್ರ ಇರುವುದು ಎಷ್ಟು ಸತ್ಯವೋ, ರಾಜ್ಯದಲ್ಲಿ ಬಿಜೆಪಿ 130 ಕ್ಕೂ ಹೆಚ್ಚು ಸೀಟು ಪಡೆದು ಸರ್ಕಾರ ರಚಿಸುವುದು ಅಷ್ಟೇ ಸತ್ಯ. 25 ರಿಂದ 30 ಸಾವಿರ ಅಂತರದಿಂದ ಬಿಜೆಪಿ ಅಭ್ಯರ್ಥಿ ಮಹೇಶ ಕುಮಟಳ್ಳಿ ಗೆಲ್ಲಲಿದ್ದಾರೆ. ಇದನ್ನು ತಡೆಯಲು ಯಾರಿಂದಲೂ ಸಾಧ್ಯವಿಲ್ಲ ಎಂದರು.

ವಿಧಾನ ಪರಿಷತ್ ಅವಧಿ 5 ವರ್ಷ 2 ತಿಂಗಳು ಇದ್ದರೂ ಸಹ ಲಕ್ಷ್ಮಣ ಸವದಿ ಬೆನ್ನಿಗೆ ಚೂರಿ ಹಾಕಿ ಹೋಗಿದ್ದಾರೆ. ಎಲ್ಲಾ ಅಧಿಕಾರ ಅನುಭವಿಸಿಯೂ ಶೆಟ್ಟರ್ ಬಿಜೆಪಿ ತೊರೆದಿದ್ದಾರೆ. ಇಲ್ಲಿ ಶೆಟ್ಟರ್ ಅವರನ್ನು ಸೋಲಿಸುವ ಜವಬ್ದಾರಿ ನನ್ನದು, ಲಕ್ಷ್ಮಣ ಸವದಿ ಅವರನ್ನು ಸೋಲಿಸುವ ಜವಾಬ್ದಾರಿ ನಿಮ್ಮದು ಎಂದು ಜನರಿಗೆ ಕರೆ ನೀಡಿದ್ದಾರೆ.

## ಮಹಿಳಾ ನಿರುದ್ಯೋಗಿಗಳಿಗೆ 30 ದಿನಗಳ ಉಚಿತ ತರಬೇತಿ

ಬೆಳಗಾವಿ: ಬೆಳಗಾವಿ ಜಿಲ್ಲೆಯ ಗ್ರಾಮೀಣ ಪ್ರದೇಶದ ಯುವತಿಯರಿಗೆ ಮತ್ತು ಮಹಿಳಾ ನಿರುದ್ಯೋಗಿಗಳಿಗೆ ಬ್ಯೂಟಿ ಪಾರ್ಲರ ಮತ್ತು ಕಸೂತಿ (Embroidery) 30 ದಿನಗಳ ತರಬೇತಿಯನ್ನು ಮೇ.17 2023 ರಿಂದ ಹಮ್ಮಿಕೊಳ್ಳಲಾಗಿದೆ.

ಬ್ಯೂಟಿ ಪಾರ್ಲರ ಮತ್ತು ಕಸೂತಿ ತರಬೇತಿಯಲ್ಲಿ ಯಾವುದಾದರು ಒಂದು ತರಬೇತಿ ಪಡೆಯಬಹುದು.

ತರಬೇತಿಯು ಊಟ ಮತ್ತು ವಸತಿಯೊಂದಿಗೆ ಸಂಪೂರ್ಣ ಉಚಿತವಾಗಿರುತ್ತದೆ.

ತರಬೇತದಾರರಿಗೆ ಇರಬೇಕಾದ ಅರ್ಹತೆಗಳು:– 18 ರಿಂದ 45 ವಯಸ್ಸಿನವರಾಗಿರಬೇಕು, ಗಾಮೀಣ ಪ್ರದೇಶದವರಾಗಿರಬೇಕು, ಃಕಐ/ಜಾಬ್ ಕಾರ್ಡ ಹೊಂದಿರಬೇಕು.

ನೀಡಬೇಕಾದ ದಾಖಲೆಗಳು:– BPL/ ಜಾಬ್ ಕಾರ್ಡ, ಆಧಾರ ಕಾರ್ಡ, ಬ್ಯಾಂಕ ಪಾಸ್ ಬುಕ್, ಭಾವಚಿತ್ರಗಳು.

ಮೇ.15 2023, ರೊಳಗಾಗಿ ಅರ್ಜಿಯನ್ನು ಸಲ್ಲಿಸಬೇಕು. ಸಂಸ್ಥೆಯ ಅರ್ಜಿ ನಮೂನೆಯಲ್ಲಿ ಅಥವಾ ಬಿಳಿಹಾಳಿಯಲ್ಲಿ ನೇರವಾಗಿ ಕಾರ್ಯಾಲಯಕ್ಕೆ, ಪೋಸ್ಟ್ ಮುಖಾಂತರ ಅಥವಾ ಕೆಳಗೆ ನೀಡಿದ ಗೂಗಲ್ ಪಾರ್ಮ ಲಿಂಕನಲ್ಲಿ ನೀಡಬಹುದು.

ಗೂಗಲ್ ಪಾರ್ಮ ಲಿಂಕ:– **https://docs.google.com/forms/d/e/1FAIpQLSdZEI9npV5dVuQbd-qFXUGc6yt__7daI02YrhyvRSLywjlFfKA/viewform?vc=0&c=0&w=1&flr=0**

ಸಂಸ್ಥೆಯ ವಿಳಾಸ: ಕೆನರಾ ಬ್ಯಾಂಕ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ (ಸಿಬಿ ಆರ್‌ಸೆಟಿ), ಪ್ಲಾಟ ನಂ. ಸಿ ಎ –03 (ಪಾರ್ಟ) ಕಣಬರ್ಗಿ ಇಂಡಸ್ಟ್ರಿಯಲ್ ಎರಿಯಾ, ಆಟೋ ನಗರ. ಬೆಳಗಾವಿ – 590015.

ದೂರವಾಣಿ ಸಂಪರ್ಕ ಸಂಖ್ಯೆಗಳು: 0831–2440644, 8296792166, 9845750043, 8050406866, 8867388906, 9449860564 ಗೆ ಬೆಳ್ಳಿಗ್ಗೆ 9.30 ಗಂಟೆಯಿಂದ ಸಾಯಂಕಾಲ 6 ವರೆಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಬೆಳಗಾವಿ ನಗರದಲ್ಲಿ ಎರಡು ದಿನಗಳ ಕಾಲ ನೀರು ಸರಬರಾಜಿನಲ್ಲಿ ವ್ಯತ್ಯಯ

ಬೆಳಗಾವಿ: ಹಿಡಕಲ ಕಚ್ಚಾ ನೀರು ಸರಬರಾಜಿನ 1000 ಎಮ್. ಎಮ್. MS ಮುಖ್ಯ ಕೊಳವೆಯು ಅಂಕಲಗಿ ಹತ್ತಿರ ಗಣನೀಯ ಪ್ರಮಾಣದಲ್ಲಿ ಸೋರಿಕೆ ಉಂಟಾಗಿದ್ದು, ಏಪ್ರಿಲ್.26 2023 ರಂದು ದುರಸ್ಥಿ ಕಾರ್ಯ ಕೈಗೊಳ್ಳಲಾಗುವುದು.

ಇದರಿಂದ ಪ್ರಸ್ತುತ ಇರುವ ನೀರು ಸರಬರಾಜು ಷೆಡ್ಯೂಲ್ ಮುಂದಿನ ಎರಡು ದಿನಗಳಿಗೆ ಮುಂದುವರಿಯುತ್ತದೆ. ಏ.26, ಮತ್ತು 27. 2023 ರವರೆಗೆ ಎರಡು ದಿನಗಳ ಕಾಲ ಬೆಳಗಾವಿ ನಗರದ ಕೆಳಕಂಡ ಪ್ರದೇಶಗಳಲ್ಲಿ ನೀರು ಸರಬರಾಜು ಮಾಡುವ ಷೆಡ್ಯೂಲ್‌ನಲ್ಲಿ ವ್ಯತ್ಯಯ ಉಂಟಾಗುವುದು.

ಸರಬರಾಜು ವ್ಯತ್ಯಯ ಉಂಟಾಗುವ ದಕ್ಷಿಣ –ಪ್ರದೇಶಗಳು: ಬ್ರಹ್ಮ ನಗರ, ಮಜಗಾಂವ, ಭಾರತ್ ನಗರ, ಕಪಿಲೇಶ್ವರ ಕಾಲೋನಿ, ದಕ್ಷಿಣ ಡೆಮೊ ವಲಯ, ಆರ್‌ಸಿ ನಗರ 1 ಮತ್ತು 2ನೇ ಹಂತಕ್ಕೆ ಒಳಪಡುವ ಉಪ ಪ್ರದೇಶಗಳು, ನಜರ್ ಕ್ಯಾಂಪ್, ಸಮೃದ್ಧಿ ಕಾಲೋನಿ, ಯಳ್ಳೂರು ರಸ್ತೆ, ರಾನಡೆ ಕಾಲೋನಿ, ಹಿಂದವಾಡಿ, ನಾನಾವಾಡಿ. ಚಿದಂಬರ್ ನಗರ, ಶಹಾಪುರ, ವಡಗಾಂವ್, ಹಳೆ ಬೆಳಗಾವಿ.

ಸರಬರಾಜು ವ್ಯತ್ಯಯ ಉಂಟಾಗುವ ಉತ್ತರ– ಪ್ರದೇಶಗಳು: ಸಹ್ಯಾದ್ರಿ ನಗರ, ಕುವೆಂಪು ನಗರ, ಟಿವಿ ಕೇಂದ್ರ, ಸದಾಶಿವ ನಗರ, ಬಸವ ಕಾಲೋನಿ, ಕಲ್ಮೇಶ್ವರ ನಗರ, ಸುಭಾಸ್ ನಗರ, ಅಶೋಕ್ ನಗರ, ಎಂಎಂ ಬಡಾವಣೆ ಏರಿಯಾ, ಹೊಸ ಗಾಂಧಿ ನಗರ, ಕಣಬರ್ಗಿ, ಕುಡಚಿ ಹಾಗೂ ಸುಭಾಷ್ ನಗರ, ವೀರಭದ್ರ ನಗರ, ಅಲರವಾಡ ಎಂಇಎಸ್ ಕಂಟೋನ್ಮೆಂಟ್ ಮತ್ತು ಸೈನಿಕ ನಗರ

ಕಂಟೋನ್ಮೆಂಟ್ ಪ್ರದೇಶ, ಹಿಂಡಾಲ್ಕೊ ಕಾರ್ಖಾನೆ,. ಕೆಎಐಡಿಬಿ ಕೈಗಾರಿಕಾ ಪ್ರದೇಶ, ಎನ್–ರೂಟ್ ವಿಲೇಜ್ ಟ್ಯಾಪಿಂಗ್ಸ್, ಡಿಫೈಯನ್ಸ್ ಏರಿಯಾ, ಸೈನಿಕ್ ನಗರ, ಕೆಎಲ್‌ಇ ಆಸ್ಪತ್ರೆ, ಬಿಮ್ಸ್ ಆಸ್ಪತ್ರೆ. ಆರ್.ಸಿ ನಗರ ಹಾಗೂ ಎಲ್ಲಾ ಸಗಟು ನೀರು ಪೂರೈಕೆ ಸಹಿತ.

ಆದ್ದರಿಂದ ಸಾರ್ವಜನಿಕರು ಇಂತಹ ಅನಿವಾರ್ಯ ಸಮಯದಲ್ಲಿ ಮೇ॥. ಎಲ್ & ಟಿ ಯೊಂದಿಗೆ ಸಹಕರಿಸಬೇಕು ಎಂದು ಮಹಾನಗರ ಪಾಲಿಕೆ ಮತ್ತು ಕೆ.ಯು.ಐ.ಡಿ.ಎಫ್.ಸಿ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಹಾಲಕ್ಷ್ಮಿ ಏತ ನೀರಾವರಿ ಯೋಜನೆ ನಾವೇ ಮಂಜೂರು ಮಾಡಿದ್ದು, ನಾವೇ ಮುಕ್ತಾಯ ಮಾಡುತ್ತೇವೆ ಸಿಎಂ ಬೊಮ್ಮಾಯಿ



ಮೇ 10 ರಂದು ನಡೆಯುವ ರಾಜ್ಯ ವಿಧಾನಸಭೆ ಚುನಾವಣೆಯಲ್ಲಿ ಐತಿಹಾಸಿಕ ತೀಪು ಬರಲಿದೆ. ರಾಜ್ಯದಲ್ಲಿ ಮತ್ತೊಮ್ಮೆ ಬಿಜೆಪಿ ಸರ್ಕಾರ ರಚನೆಗೊಂಡು ಜನಕಲ್ಯಾಣದ ಕೆಲಸ ಪ್ರಾರಂಭವಾಗುತ್ತವೆ. ಚಿಕ್ಕೋಡಿಯ ಮಹಾಲಕ್ಷ್ಮಿ ಏತ ನೀರಾವರಿ ಯೋಜನೆ ನಾವೇ ಮಾಡಿದ್ದು, ಮುಂದೆಯು ನಾವೇ ಮುಕ್ತಾಯ ಮಾಡುತ್ತೇವೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದರು.

ಚಿಕ್ಕೋಡಿ ತಾಲೂಕಿನ ನವಲಿಹಾಳ ಗ್ರಾಮದಲ್ಲಿ ಬಿಜೆಪಿ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದರು. ಈ ಭಾಗದ ಮಹಾಲಕ್ಷ್ಮೀ ಏತ ನೀರಾವರಿ ಯೋಜನೆ ಮಂಜೂರು ಮಾಡಿ ಜನರ ಬಳಿ ಮತ ಕೇಳಲು ಬಂದಿದ್ದೇವೆ. ನೀರಾವರಿ ಯೋಜನೆ ನಾವೇ ಆರಂಭಿಸಿ ರೈತರಿಗೆ ನೀರು ಕೊಡಲಿದ್ದೇವೆ. ಮೊದಲ ಹಂತದಲ್ಲಿ 200 ಕೋಟಿ ರೂ ಅನುದಾನ ನೀಡಿದ್ದೇವೆ ಎಂದರು.

ಅಧಿಕಾರದ ಚುಕ್ಕಾಣಿ ಹಿಡಿಯಬೇಕೆಂದು ಕಾಂಗ್ರೆಸ್ ಪಕ್ಷ ಜನರಿಗೆ ಸುಳ್ಳಿನ ಗ್ಯಾರಂಟಿ ಕಾರ್ಡ ನೀಡಿ ಭರವಸೆ ನೀಡುತ್ತಿದ್ದಾರೆ.ಅವರು ಚುನಾವಣೆಯವರೆಗೆ ಗ್ಯಾರಂಟಿ ಮುಗಿದ ಬಳಿಕ ಗಳಗಂಟಿ ಎಂದು ಲೇವಡಿ ಮಾಡಿದರು.

ವಿಧಾನ ಪರಿಷತ್ ಮಾಜಿ ಸದಸ್ಯ ಮಹಾಂತೇಶ ಕವಟಗಿಮಠ ಮಾತನಾಡಿ. ಉತ್ತರ ಕರ್ನಾಟಕದ 14 ನೀರಾವರಿ ಯೋಜನೆಗೆ ಅನುದಾನ ಕೊಟ್ಟಿದ್ದು ಬಸವರಾಜ ಬೊಮ್ಮಾಯಿ ಅವರಿಗೆ ಸಲ್ಲುತ್ತದೆ. ಬೊಮ್ಮಾಯಿ ಅವರು ಮಹಾಲಕ್ಷ್ಮೀ ಏತ ನೀರಾವರಿ ಯೋಜನೆಗೆ ಅನುದಾನ ನೀಡಿ ಈ ಭಾಗದ ರೈತರ ಹಿತ ಕಾಪಾಡಿದ್ದಾರೆ ಎಂದರು.

ಸಂಸದ ಅಣ್ಣಾಸಾಹೇಬ ಜೊಲ್ಲೆ, ಅಭ್ಯರ್ಥಿ ರಮೇಶ ಕತ್ತಿ ಮಾತನಾಡಿದರು. ಈ ಸಂದರ್ಭದಲ್ಲಿ ಬಿಹಾರದ ಶಾಸಕ ಸಂ–ಜಯ ಚೌರಾಸಿ, ನ್ಯಾಯವಾದಿ ಎಂ.ಬಿ.ಜಿರಲಿ. ಮಾಜಿ ಶಾಸಕ ಬಾಳಾಸಾಹೇಬ ವಡ್ಡರ ಸೇ–ರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ರಮೇಶ ಜಾರಕಿಹೊಳಿ ಹಣೆ ಬರಹ ಚೆನ್ನಾಗಿದೆ : ಶಾಸಕ ಬಾಲಚಂದ್ರ ಜಾರಕಿಹೊಳಿ



ಗೋಕಾಕ: 20 ವರ್ಷಗಳಿಂದ ಗೋಕಾಕದಲ್ಲಿ ಅಬಿವೃದ್ದಿ ಆಗಿಲ್ಲ ಎಂದು ವಿರೋದ ಮಾಡುತ್ತಿರುವವರಿಗೆ ನಾವು ವೇದಿಕೆ ಹಾಕುತ್ತೆವೆ ಬಹಿರಂಗವಾಗಿ ಚರ್ಚೆ ಮಾಡೋಣ ಎಂದು ಅರಬಾವಿ ಶಾಸಕ ಬಾಲಚಂದ್ರ ಜಾರಕಿಹೊಳಿಯವರು ಗೋಕಾಕದ ಹೊರವಲಯದಲ್ಲಿರುವ ಶ್ರೀ ಬಸವೇಶ್ವರ ಸಭಾ ಭವನದಲ್ಲಿ ನಡೆದ ಗೋಕಾಕ ಮತಕ್ಷೇತ್ರದ ಚುನಾವಣೆ ಪ್ರಚಾರದಲ್ಲಿ ರಮೇಶ ಜಾರಕಿಹೊಳಿ ವಿರುದ್ದ ಸುಳ್ಳು ಅಪಪ್ರಚಾರ ಮಾಡುತ್ತಿರುವವರಿಗೆ ವೇದಿಕೆಗೆ ಬರಲು ಆಹ್ವಾನ ನೀಡುವ ಮೂಲಕ ಎಚ್ಚರಿಸಿದರು. ಚುನಾವಣೆಯಲ್ಲಿ ಮತ ಪಡೆಯಲು ಸುಳ್ಳು ಪ್ರಚಾರ ಮಾಡುವುದು ಸರಿಯಲ್ಲ,ರಮೇಶ ಜಾರಕಿಹೊಳಿಯವರು ಅಬಿವೃದ್ದಿ ಮಾಡಿಲ್ಲ ಎಂದು ಸುಳ್ಳು ಹೇಳಿ ಮತ ಪಡೆಯಲು ಪ್ರಯತ್ನಿಸಬೇಡಿ,ಅವರು ತಮ್ಮ ಕ್ಷೇತ್ರದಲ್ಲಿ ಸಾಕಷ್ಟು ಅಬಿವೃದ್ದಿ ಕೆಲಸ ಮಾಡಿದ್ದಾರೆಂದು ಬಾಲಚಂದ್ರ ಜಾರಕಿಹೊಳಿ ಇವರು ಸಹೋದರ ಪರ ಬ್ಯಾಟ ಬಿಸಿದರು. ರಮೇಶ ಜಾರಕಿಹೊಳಿಯವರ ಹಣೆಬರಹ ಚೆನ್ನಾಗಿದೆ ಅವರು ಆರು ಬಾರಿ ಶಾಸಕರಾಗಿ ಮಂತ್ರಿಯಾಗಿದ್ದವರು,ಇನ್ನು ಕೆಲವು ಮುಖಂಡರುಗಳಿಂದಅಸಮಾಧಾನ ಇದ್ದೆ ಇರುತ್ತದೆ ಸಮಾಧಾನ ಮಾಡಲು ನಾನು ಬರುತ್ತೇನೆಂದು ಮತದಾರ ಮನವೊಲಿಕೆ ಮಾಡಿದರು. ಮೊದಲಿನಿಂದಲು ರಮೇಶ ಜಾರಕಿಹೊಳಿಯನ್ನ ಗೆಲ್ಲಿಸುತ್ತಾ ಬಂದಿದ್ದೀರಿ. ಈ ಬಾರಿಯೂ ಕೂಡ ಗೆಲ್ಲಿಸಿ ಎಂದು ಮತದಾರರಲ್ಲಿ ವಿನಂತಿಸಿದರು.

## ಕೃಷ್ಣಾ ನದಿಗೆ ಮತ್ತು ಹಿರಣ್ಯಕೇಶಿ ನದಿಗೆ ನೀರು ಬಿಡಲು ಸಮ್ಮತಿ




ವಿಜಯಪುರ: ವಿಜಯಪುರಕ್ಕೆ ಆಗಮಿಸಿದ್ದ ಮಹಾರಾಷ್ಟ್ರದ ಉಪಮುಖ್ಯಮಂತ್ರಿಗಳಾದ ದೇವೇಂದ್ರ ಫಡ್ನವೀಸ್ ಜಿ ಅವರನ್ನು ಚಿಕ್ಕೋಡಿ ಸಂಸದ ಅಣ್ಣಾಸಾಹೇಬ ಜೊಲ್ಲೆ ಅವರು ಭೇಟಿಯಾಗಿ, ಮಹಾರಾಷ್ಟ್ರದಿಂದ ಕೃಷ್ಣಾ ನದಿಗೆ ನೀರು ಬಿಡುವಂತೆ ಮನವಿ ಮಾಡಿದರು.

ಕೃಷ್ಣಾ ಮತ್ತು ಹಿರಣ್ಯಕೇಶಿ ನದಿಗೆ ನೀರು ಬಿಡಲು ಮಹಾರಾಷ್ಟ್ರ ಡಿಸಿಎಂ ದೇವೆಂದ್ರ ಫಡ್ನವಿಸ ಸಮ್ಮತಿ ಸೂಚಿಸಿದ್ದಾರೆ ಎಂದು ಚಿಕ್ಕೋಡಿ ಸಂಸದ ಅಣ್ಣಾಸಾಹೇಬ ಜೊಲ್ಲೆ ಹೇಳಿದರು.ಅವರು ಚಿಕ್ಕೋಡಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ವಿಜಯಪುರಕ್ಕೆ ಆಗಮಿಸಿದ್ದ ಮಹಾರಾಷ್ಟ್ರದ ಉಪಮುಖ್ಯಮಂತ್ರಿಗಳಾದ ದೇವೇಂದ್ರ ಫಡ್ನವೀಸ್ ಜಿ ಅವರನ್ನು ಭೇಟಿಯಾಗಿ, ಮಹಾರಾಷ್ಟ್ರದಿಂದ ಕೃಷ್ಣಾ ನದಿಗೆ ನೀರಿನ ಒಳಹರಿವು ಕಡಿಮೆಯಾದ ಹಿನ್ನೆಲೆಯಲ್ಲಿ ನೀರಿನ ಸಮಸ್ಯೆಯನ್ನು ನೀಗಿಸುವ ನಿಟ್ಟಿನಲ್ಲಿ ಹೆಚ್ಚಿನ ನೀರನ್ನು ಬಿಡುವಂತೆ ಮಾನ್ಯ ಉಪಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು ಎಂದು ತಿಳಿಸಿದರು.

ಬೇಸಿಗೆ ಜಾನುವಾರುಗಳಿಗೆ ಕುಡಿಯಲು ನೀರಿಲ್ಲದೇ ಪರದಾಡುವ ಸ್ಥಿತಿ ನಿರ್ಮಾಣವಾಗಿದೆ. ರೈತರ ಬೆಳೆಗಳಿಗೂ ನೀರಿನ ಸಮಸ್ಯೆ ಎದುರಾಗಿ ಕೃಷಿಕರು ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಮನವರಿಗೆ ಮಾಡಿದ ಹಿನ್ನಲೆಯಲ್ಲಿ ಸಕಾರಾತ್ಮಕವಾಗಿ ಸ್ಪಂದಿಸಿದ ಉಪಮುಖ್ಯಮಂತ್ರಿಗಳು, ಸಂಬಂಧಪಟ್ಟ ಅಧಿಕಾ–ರಿಗಳಿಗೆ ತಿಳಿಸಿ ತಕ್ಷಣವೇ ಕೋಯ್ನಾ ಮತ್ತು ವಾರಣಾ ಜಲಾಶಯಗಳಿಂದ ಕೃಷ್ಣಾ ನದಿಗೆ 3 ಟಿಎಮ್‌ಸಿ ನೀರು ಮತ್ತು ಚಿತ್ರಾ ಅಣೆಕಟ್ಟಿನಿಂದ ಹಿರಣ್ಯಕೇಶಿಗೆ 1 ಟಿ.ಎಂ.ಸಿ ನೀರು ಬಿಡುವಂತೆ ಸೂಚಿಸಿದ್ದು, ಅವರಿಗೆ ಕ್ಷೇತ್ರದ ಜನರ ಪರವಾಗಿ ಧನ್ಯವಾದಗಲನ್ನು ತಿಳಿಸಿದರು.

## ಅರವಿಂದ ಬೆಲ್ಲದರ ಗೆಲುವಿನ ಅಂತರ ಹೆಚ್ಚಾಗಲಿದೆ: ಸ್ಮೃತಿ ಇರಾನಿ



ಧಾರವಾಡ: ಹುಬ್ಬಳ್ಳಿ, ಧಾರವಾಡದಲ್ಲಿ ಕಾಂಕ್ರೀಟ್ ರಸ್ತೆಗಳನ್ನು ನಿರ್ಮಾಣ ಮಾಡುವ ಮೂಲಕ ಅರವಿಂದ ಬೆಲ್ಲದ ಅವರು ಕಾಂಕ್ರೀಟ್ ರಸ್ತೆಗಳ ಜನಕ ಎನಿಸಿಕೊಂಡಿದ್ದಾರೆ ಎಂದು ಕೇಂದ್ರ ಸಚಿವೆ ಸ್ಮೃತಿ ಇರಾನಿ ಹೇಳಿದರು.

ಧಾರವಾಡದ ಜೆಎಸ್‌ಎಸ್ ಸನ್ನಿಧಿ ಕಲಾಕ್ಷೇತ್ರದಲ್ಲಿ ಹಮ್ಮಿಕೊಂಡಿದ್ದ ಮಹಿಳಾ ಸಮಾವೇಶದಲ್ಲಿ ಮಾತನಾಡಿದ ಅವರು, ನಾನು ಇಲ್ಲಿ ಕೇಂದ್ರ ಸಚಿವೆಯಾಗಿ ಮಾತನಾಡುತ್ತಿಲ್ಲ. ಬದಲಾಗಿ ಸಾಮಾನ್ಯ ಮಹಿಳೆಯಾಗಿ ಮಾತನಾಡುತ್ತಿದ್ದೇನೆ. ಕೋವಿಡ್ ಸಮಯದಲ್ಲಿ ಪ್ರಧಾನಿ ಮೋದಿ ಅವರು ಈ ದೇಶವನ್ನು ಸಮರ್ಥವಾಗಿ ಮುನ್ನಡೆಸಿಕೊಂಡು ಬಂದರು. ಈ ಬಾರಿ ಮತ್ತೂ ಬಿಜೆಪಿಯ ಗೆಲುವು ಖಚಿತ. ಮಹಿಳೆಯರು ತಮ್ಮ ಉಜ್ವಲ ಭವಿಷ್ಯಕ್ಕಾಗಿ ಬಿಜೆಪಿಗೆ ಬೆಂಬಲಿಸಬೇಕು. ಬಿಜೆಪಿಯೇ ಭರವಸೆಯಾಗಿದೆ ಎಂದರು. ಕೋವಿಡ್ ಸಮಯದಲ್ಲಿ ಕಾಂಗ್ರೆಸ್ ನಾಯಕರು ಪರಾರಿಯಾಗಿದ್ದರು. ಆದರೆ, ಈಗ ಮತ ಕೇಳಲು ಬರುತ್ತಿದ್ದಾರೆ. ಗಾಂಧಿ ಕುಟುಂಬದ ಕುಡಿ ರಾಹುಲ್ ಕ್ಷೇತ್ರದಲ್ಲೇ ವಿದ್ಯುತ್, ಶೌಚಾಲಯ ಹಾಗೂ ಸೂರು ಕೂಡ ಇರಲಿಲ್ಲ. ಈಗ ದೇಶ ಮೋದಿ ನೇತೃತ್ವದಲ್ಲಿ ಎಲ್ಲವನ್ನೂ ಕೊಟ್ಟು ಇತರ ದೇಶಗಳಿಗಿಂತ ಮುಂದಿನ ಸ್ಥಾನದಲ್ಲಿ ಮುನ್ನಡೆಯುತ್ತಿದೆ ಎಂದರು.ಹುಬ್ಬಳ್ಳಿಯಲ್ಲೇ ನಮ್ಮ ಕೆಲ ನಾಯಕರಿಗೆ ಎಲ್ಲ ಸ್ಥಾನಮಾನ ಕೊಟ್ಟರೂ ಅಧಿಕಾರ ಕೊಟ್ಟರೂ ಈಗ ಬೇರೆಯವರನ್ನು ಅಪ್ಪಿಕೊಂಡು ಹೋಗಿದ್ದಾರೆ. ನಮ್ಮವರೇ ನಮ್ಮ ಬೆನ್ನಿಗೆ ಚೂರಿ ಹಾಕುವ ಕೆಲಸ ಮಾಡಿದ್ದಾರೆ. ನಾನು ಯಾರ ಬಗ್ಗೆ ಮಾತನಾಡುತ್ತಿದ್ದೇನೆ ಎಂದು ನಿಮಗೆಲ್ಲರಿಗೂ ಗೊತ್ತಿದೆ ಎಂದು ಜಗದೀಶ ಶೆಟ್ಟರ್ ಅವರಿಗೆ ಪರೋಕ್ಷವಾಗಿ ಕುಟುಕಿದರು.ತಮ್ಮ ಕುಟುಂಬ ಹಾಗೂ ಧರ್ಮಕ್ಕೆ ಆಗದೇ ಇರುವಂತವರು ಜನರಿಗೆ ಏನು ಮಾಡುತ್ತಾರೆ. ಜನತೆ ಅಂತವರಿಗೆ ತಕ್ಕ ಪಾಠ ಕಲಿಸಬೇಕು. ನಮ್ಮ ಜೊತೆ ಇದ್ದಾ ಮುಖ್ಯಮಂತ್ರಿ ಆಗಿದ್ದರು. ಈಗ ತಮ್ಮ ದುರಾಸೆಯ ಬೇಯಿಸಿಕೊಳ್ಳಲು ಬೇರೆಯವರ ಗುಂಪು ಸೇರಿದ್ದಾರೆ ಎಂದರು.

# ಜೆಡಿಎಸ್ ಗಟ್ಟಿ ನೆಲೆ ಸಾಲವಾಡಗಿ ಗ್ರಾಮವಾಗಿದೆ: ರಾಜುಗೌಡ



ತಾಳಿಕೋಟೆ: ಈ ಹಿಂದೆ ಜೆಡಿ–ಎಸ್ ಪಕ್ಷದ ಭದ್ರಕೋಟೆಯಾಗಿದ್ದ ಬ.ಸಾಲವಾಡಗಿ ಗ್ರಾಮ ಮತ್ತೇ ತನ್ನ ನೆಲೆಯನ್ನು ಉಳಿಸಿಕೊಂಡಿದೆ ಒಂದು ಸಮಯದಲ್ಲಿ ರಾಜ–ಕೀಯವಾಗಿ ಶಕ್ತಿಯನ್ನು ಹೊಂದಿದಂತಹ ಗ್ರಾಮವಾಗಿದೆ ಎಂದು ದೇವರ ಹಿಪ್ಪರಗಿ ಮತಕ್ಷೇತ್ರದ ಜೆಡಿಎಸ್ ಅಭ್ಯರ್ಥಿ ರಾಜುಗೌಡ ಪಾಟೀಲ(ಕು.ಸಾಲವಾಡಗಿ) ಅವರು ಹೇಳಿದರು.

ಬುಧವಾರರಂದು ಬ.ಸಾಲವಾಡಗಿ ಗ್ರಾಮದಲ್ಲಿ ಬಿಜೆಪಿ ಮುಖಂಡರಾದ ಮಲ್ಲನಗೌಡ ಪೊಲೀಸ್‌ಪಾಟೀಲ, ರಾಜುಗೌಡ ಕೊಳೂರ ಅವರ ನೇತೃತ್ವದಲ್ಲಿ ಜೆಡಿಎಸ್ ಪಕ್ಷ ಸೇರ್ಪಡೆ ಕಾರ್ಯಕ್ರಮದಲ್ಲಿ ನೇತೃತ್ವವಹಿಸಿ ಮಾತನಾಡುತ್ತಿದ್ದ ಅವರು ದೇವರ ಹಿಪ್ಪರಗಿ ಮತಕ್ಷೇತ್ರದಲ್ಲಿ ಎಲ್ಲ ಗ್ರಾಮಗಳಲ್ಲಿ ಜ್ಯಾತ್ಯಾತೀತವಾಗಿ ಜೆಡಿಎಸ್ ಪಕ್ಷಕ್ಕೆ ಬೆಂಬಲಿಸುತ್ತಾ ಸಾಗಿದ್ದಾರೆ ಅಲ್ಲದೇ ನನಗೆ ಭವ್ಯವಾಗಿ ಸ್ವಾಗತಿಸುವದರೊಂದಿಗೆ ನನಗೆ ಬೆಂಬಲಿಸುತ್ತಿರುವದು ನನಗೆ ಸಂತೋಷನ್ನು ಕೊಟ್ಟಿದೆ ಚುನಾವಣೆಯಲ್ಲಿ ಕೆಲವರು ಆಸೆ ಆಮಿಷ ತೋ–ರಿಸಲು ಬರುತ್ತಾರೆ ಅದಕ್ಕೆ ಯಾರೂ ತಲೆಕಡಿಸಿಕೊಳ್ಳಬಾರದು.

ಎಲ್ಲರೂ ಒಗ್ಗಟ್ಟಾಗಿ ಚುನಾವಣೆಯಲ್ಲಿ ಜೆಡಿಎಸ್ ಪಕ್ಷಕ್ಕೆ ಮತದಾನ ಮಾಡಬೇಕು ಜೆಡಿಎಸ್ ಪಕ್ಷ ಪ್ರಾದೇಶಿಕ ಪಕ್ಷವಾಗಿದೆ ರೈತರಪರವಾದಂತಹ ಪಕ್ಷವಾಗಿದೆ ಈ ಹಿಂದೆ ಜೆಡಿಎಸ್ ಅಧಿಕಾರದಲ್ಲಿದ್ದಾಗ ಈ ರಾಜ್ಯದ ಅಭಿವೃದ್ದಿಯಾಗಿದೆ ರೈತರ ಪರವಾದ ಕೆಲಸ ಕಾರ್ಯಗಳು ಆಗಿವೆ ಜನರ ಪ್ರೀತಿ ವಿಸ್ವಾಸಕ್ಕೆ ಪಾತ್ರವಾದ ಪಕ್ಷವಾಗಿದೆ ಬರುವ ದಿನಗಳಲ್ಲಿ ಜೆಡಿಎಸ್ ಅಧಿಕಾರಕ್ಕೆ ತರಬೇಕಿದೆ ಉಚಿತವಾಗಿ ಕನ್ನಡ ಮತ್ತು ಇಂಗ್ಲೀಷ ಮಾಧ್ಯಕ್ಷ ಶಿಕ್ಷಣ, ಗ್ರಾಮೀಣ ಪ್ರದೇಶದಲ್ಲಿ 30 ಹಾಸಿಗೆಯ ಉಚಿತ ವೈಧ್ಯಕೀಯ ಸೇವೆ ಸಿಗಬೇಕೆಂಬುದು ಹಾಗೂ ಪ್ರತಿ ಏಕರೆಗೆ 10 ಸಾವಿರ ರೂ. ರೈತರಿಗೆ ಬೀಜ ಗೊಬ್ಬರ ಖರೀದಿಗೆ ಕೊಡುವಂತಹ ಜೆಡಿ–ಎಸ್ ಪ್ರನಾಳಿಕೆಯಲ್ಲಿ ಅಳವಡಿಸಲಾಗಿದೆ ಮಹಿಳೆಯರ ಸ್ವಸಹಾಯ ಗುಂಪಿನ ಸಾಲವನ್ನು ಮನ್ನಾ ಮಾಡುವಂತಹ ಯೋಜನೆಯನ್ನು ಹಾಕಿಕೊಳ್ಳಲಾಗಿದೆ.

ಬಿಜೆಪಿ ಸರ್ಕಾರ ಅಲ್ಪ ಸಂಖ್ಯಾತ ಮಿಸಲಾತಿಯನ್ನು ಕಿತ್ತುಕೊಂಡಿದೆ ಎಂದು ಆರೋಪಿಸಿದ ಅವರು ದೇವರ ಹಿಪ್ಪರಗಿಗೆ ಅಮಿಷಾ ಅವರು ಆಗಮಿಸಿ ಮಾತನಾಡಿದ್ದರಲ್ಲಿ ಕಾಂಗ್ರೆಸ್ ಆಟಕ್ಕುಂಟು ಲೆಕ್ಕಕ್ಕಿಲ್ಲಾ ಬಿಜೆಪಿಗೆ ಎದುರಾಳಿ ಜೆಡಿಎಸ್ ಪಕ್ಷವಾಗಿದೆ ಅದನ್ನು ಸೋಲಿಸಬೇಕಾಗಿದೆ ಎಂದು ಹೇಳಿದ್ದಾರೆ ಹಿಂದೆ ಸಿದ್ದರಾಮಯ್ಯನವರು ಬಂದಾಗೂ ಕೂಡಾ ಜೆಡಿಎಸ್ ಪಕ್ಷ ಸೋಲಿಸಿ ಎಂದು ಹೇಳಿದ್ದಾರೆ ಇವರು ಮಾತು ಕೇಳುವ ಜನ ದೇವರ ಹಿಪ್ಪರಗಿ ಮತಕ್ಷೇತ್ರದಲ್ಲಿಲ್ಲಾ ಜನರೂ ಈಗಾಗಲೇ ತಿರ್ಮಾನ ಮಾಡಿದ್ದಾಗಿದೆ ರಾಜುಗೌಡ ಮನೆಮಗನಾಗಿದ್ದಾನೆ.

ಅವನನ್ನು ಈಭಾರಿ ಗೆಲ್ಲಿಸೇ ತೀರುತ್ತೇವೆಂದು ತಿರ್ಮಾನಿಸಿದ್ದಾಗಿದೆ ಇದರಲ್ಲಿ ಬ.ಸಾಲವಾಡಗಿ ಗ್ರಾಮ ಅತೀ ಹೆಚ್ಚು ಮತದಾನ ಮಾಡುವ ಮೂಲಕ ತಿರುಚುವ ಬಿಜೆಪಿ–ಕಾಂಗ್ರೆಸ್ ನಾಯಕರಿಗೆ ಶಕ್ತಿಯನ್ನು ತೋ–ರಿಸಬೇಕೆಂದು ಮನವಿ ಮಾಡಿದ ಅವರು ಬರುವ ಚುನಾವಣೆಯಲ್ಲಿ ಜೆಡಿಎಸ್ ಪಕ್ಷಕ್ಕೆ ಆಶಿರ್ವದಿಸಿ ಎರಡು ಭಾರಿ ನಾನು ಸೋಲುಂಡರೂ ನಿಮ್ಮಿಂದ ದೂರವಾಗಿಲ್ಲಾ ಯಾವಾಗಲೂ ನಿಮ್ಮ ಜೊತೆಯಾಗಿ ನಿಮ್ಮ ಮನೆಯ ಮಗನಾಗಿ ಎಲ್ಲದರಲ್ಲಿಯೂ ಭಾಗಿಯಾಗಿದ್ದೇನೆ ಈ ಭಾರಿ ತಮಗೆ ಆಶಿರ್ವದಿಸಬೇಕೆಂದು ಮನವಿ ಮಾಡಿದರು.

# ಗ್ರಾಮೀಣ ಕ್ಷೇತ್ರದ ವಿವಿಧೆಡೆ ಲಕ್ಷ್ಮೀ ಹೆಬ್ಬಾಳಕರ್ ಅಬ್ಬರದ ಪ್ರಚಾರ: ಎಲ್ಲೆಡೆ ಹಬ್ಬದ ವಾತಾವರಣದಲ್ಲಿ ಸ್ವಾಗತ

ಬೆಳಗಾವಿ: ಬೆಳಗಾವಿ ಗ್ರಾಮೀಣ ಕ್ಷೇತದ ವಿವಿಧೆಡೆ ಕಾಂಗ್ರೆಸ್ ಅಭ್ಯರ್ಥಿ, ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಅಬ್ಬರದ ಪ್ರಚಾರ ಮುಂದುವರಿಸಿದ್ದಾರೆ.

ಬುಧವಾರ ಕ್ಷೇತ್ರದ ತುಮ್ಮರುಗುದ್ದಿ, ಸೋಮನಟ್ಟಿ, ಭೀಮಗಡ, ಕರಿಕಟ್ಟಿ, ಸಿದ್ದನಳ್ಳಿ, ಖನಗಾಂವ್ (ಬಿಕೆ ಮತ್ತು ಕೆ–ಎಚ್) ಮೊದಲಾದೆಡೆ ಪ್ರಚಾರ ನಡೆಸಿದರು. ಎಲ್ಲೆಡೆ ಜನರು ಹಬ್ಬದ ವಾತಾವರಣದಲ್ಲಿ ಲಕ್ಷ್ಮೀ ಹೆಬ್ಬಾಳಕರ್ ಅವರನ್ನು ಸ್ವಾಗತಿಸಿದರು. ಮಹಿಳೆಯರು ಆರತಿ ಬೆಳಗಿ ಬರಮಾಡಿ ಕೊಳ್ಳುತ್ತಿದ್ದರು. ವೃದ್ದರು ಮನೆಯ ಮಗಳೇ ಬಂದ ರೀತಿಯಲ್ಲಿ ಸಂಭ್ರಮ ಪಡುತ್ತಿರುವ ದೃಷ್ಯ ಸಾಮಾನ್ಯವಾಗಿತ್ತು.

ಯಾವುದೇ ಕಾರಣ–ಕ್ಕೂ ನಿಮ್ಮಂತ ಶಾಸಕರನ್ನು ಕಳೆದುಕೊಳ್ಳುವುದಿಲ್ಲ. ಈ ಬಿರು ಬಿಸಿಲಿನಲ್ಲಿ ನೀವು ಓಡಾಡುವುದು ಬೇಡ, ನಿಮ್ಮನ್ನು ಗೆಲ್ಲಿಸಿಕೊಂಡು ಬರುವ ಜವಾಬ್ದಾರಿ ನಮಗೆ ಬಿಡಿ ಎಂದು ಜನರು ವಿನಂತಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಲಕ್ಷ್ಮೀ ಹೆಬ್ಬಾಳಕರ್, ಕ್ಷೇತ್ರದ ಎಲ್ಲೆಡೆ ಜನರೂ ನನ್ನನ್ನು ಅಕ್ಕ, ತಂಗಿ, ತಾಯಿ, ಮಗಳು ಎನ್ನುವ ರೀತಿಯಲ್ಲಿ ಕಾಣುತ್ತಿದ್ದಾರೆ. ಇಡೀ ಕ್ಷೇತ್ರವೇ ನನ್ನ ಕುಟುಂಬ ಎಂದು ಕಂಡಿದ್ದೇನೆ.





ನಿಮ್ಮಂತಹ ಜನರನ್ನು ಪಡೆದ ನಾನೇ ಧನ್ಯ. ಕ್ಷೇತ್ರದಾದ್ಯಂತ ಅಪಾರ ಬೆಂಬಲ ವ್ಯಕ್ತವಾಗುತ್ತಿದ್ದು, ಕಳೆದ ಬಾರಿಗಿಂತ ಈ ಬಾರಿ ಹೆಚ್ಚಿನ ಅಂತರದಿಂದ ಗೆಲ್ಲುವುದು ನಿಶ್ಚಿತ.

ವಿರೋಧಿಗಳೇ ಇಲ್ಲ ಎನ್ನುವಂತಹ ವಾತಾವರಣ ಎಂದು ವಿನಂತಿಸಿದರು.

ಪ್ರವಾಹ, ಕೊರೋನಾದಂತಹ ಸಂಕಷ್ಟ ಪರಿಸ್ಥಿತಿಯಲ್ಲೂ ಎಂದೂ ನಾನು ಮತ್ತು ನನ್ನ ಸಹೋದರ ಚನ್ನರಾಜ ಹಟ್ಟಿಹೊಳಿ ಹಾಗೂ ಮಗ ಮೃಣಾಲ ಹೆಬ್ಬಾಳಕರ್ ಮನೆಯಲ್ಲಿ ಕೂಡ್ರಲಿಲ್ಲ. ಕ್ಷೇತ್ರದ ಜನರ ಸೇವೆಯಲ್ಲಿ ತೊಡಗಿ ಕೊಂಡಿದ್ದೇವೆ.

ವೈದ್ಯಕೀಯ ನೆರವು, ಆರ್ಥಿಕ ನೆರವು ಸೇರಿದಂತೆ ಸಾಧ್ಯವಾದ ಎಲ್ಲ ರೀತಿಯಿಂದ ಸಹಾಯ ಮಾಡಿದ್ದೇವೆ. ಮನೆಯ ಮಗಳಾಗಿ ನನ್ನ ಜವಾಬ್ದಾ–ರಿಯನ್ನು ನಿರ್ವಹಿಸಿದ್ದೇನೆ. ಹಾಗಾಗಿ ನೀವೆಂದೂ ನನ್ನ ಕೈಬಿಡುವುದಿಲ್ಲ ಎನ್ನುವ ವಿಶ್ವಾಸ, ನಂಬಿಕೆ ನಿಮ್ಮ ಮೇಲಿದೆ ಎಂದು ಭಾವುಕರಾಗಿ ಹೇಳಿದರು.

ಈ ಬಾರಿ ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಬರುವುದು ಖಚಿತ. ನಮ್ಮದೇ ಸರಕಾರ ಬಂದಲ್ಲಿ ಇನ್ನೂ ಹೆಚ್ಚಿನ ಕೆಲಸ ತರಲು ಸಹಾಯವಾಗಲಿದೆ. ಜನರ ಸಹಕಾರದೊಂದಿಗೆ ಕ್ಷೇತ್ರವನ್ನು ರಾಜ್ಯದಲ್ಲೇ ಮಾದರಿಯಾಗಿ ಅಭಿವೃದ್ಧಿಪಡಿಸುವ ಯೋಜನೆ ರೂಪಿಸಲಾಗುವುದು ಎಂದು ಅವರು ತಿಳಿಸಿದರು.


ಕಳೆದ 5 ವರ್ಷದಲ್ಲಿ ನಾನು ಮಾಡಿದ ಅಭಿವೃದ್ಧಿ ನೋಡಿ ಮತ ನೀಡಿ. ಮೊದಲ ಅವಧಿಯಲ್ಲಿ ಕ್ಷೇತ್ರಕ್ಕೆ ಮೂಲ ಭೂತ ಸೌಲಭ್ಯಗಳನ್ನು ತರುವುದಕ್ಕೆ ಆದ್ಯತೆ ನೀಡಿದ್ದೇನೆ.

ಮುಂದಿನ ದಿನಗಳಲ್ಲಿ ಅನೇಕ ದೊಡ್ಡ ದೊಡ್ಡ ಯೋಜನೆಗಳನ್ನು ತರುವ ಉದ್ದೇಶವಿದೆ. ಶೈಕ್ಷಣಿಕವಾಗಿಯೂ ಕ್ಷೇತ್ರವನ್ನು ಅಭಿವೃದ್ಧಿ ಪಡಿಸಲಾಗುವುದು.

ಯುವಕ–ರಿಗೆ ಹೆಚ್ಚಿನ ಪ್ರಮಾಣದಲ್ಲಿ ಉದ್ಯೋಗಾವಕಾಶವಾಗುವಂತಹ ಯೋಜನೆಗಳನ್ನು ತರಲಾಗುವುದು ಎಂದು ಲಕ್ಷ್ಮೀ ಹೆಬ್ಬಾಳಕರ್ ಪ್ರಚಾರದ ವೇಳೆ ಭರವಸೆ ನೀಡಿದರು.

ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ಶೇಖರ್ ಹೊಸೂರಿ, ಶಿವಶಂಕರ ಮಳಗಲಿ, ಕಲ್ಲಪ್ಪ ಶಿಣಗಿ, ಸತ್ಯಪ್ಪ ನಂದ್ಯಾಗೋಳ, ಗಂಗಾರಾಮ ಯದ್ದಲಗುಡ್ಡ, ಕಲ್ಲಪ್ಪ ಸುತಗಟ್ಟಿ, ವಿಲ್ಸನ್ ಮಹಾರ್, ಮಲ್ಲಪ್ಪ ಗೊಸಾಂವಿ, ಶಿವಶಂಕರ ಪಾಟೀಲ, ಶಿವಾಜಿ ತಳವಾರ, ಶೇಖರ ಶಿಣಗಿ, ಲಕ್ಷ್ಮಣ ಕೆಂಪದಿನ್ನಿ, ಲಕ್ಷ್ಮಣ ಹೊಂಕಳಿ, ಚನ್ನಬಸ್ಸು ಧರನಟ್ಟಿ, ಮಹಾದೇವ ಬುಡ್ರಿ, ಲಗಮಣ್ಣ ಸುಲಧಾಳ, ಯಲ್ಲಪ್ಪ ಅಮಾನಿ ಹಾಗೂ ಹಲವಾರು ಸ್ಥಳೀಯ ಮುಖಂಡರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಕಾಂಗ್ರೆಸ್ ಪಕ್ಷ ಶಿಲಾನ್ಯಾಸಗಳ ಸರಕಾರ: ಯೋಗಿ ಟೀಕೆ



ಬೆಂಗಳೂರು: ಮೋದಿಜಿ ಅವರ ಟೀಂ ಇಂಡಿಯಾದಲ್ಲಿ ಕರ್ನಾಟಕದ ಗರಿಷ್ಠ ಆಟಗಾರರು ಇರುವಂತೆ ನೋಡಿಕೊಳ್ಳಿ. ಇದಕ್ಕಾಗಿ ಇಲ್ಲಿನ ಅಭ್ಯರ್ಥಿಗಳನ್ನು ನೀವೆಲ್ಲರೂ ಗೆಲ್ಲಿಸಿ ಹಾಗೂ ರಾಜ್ಯದಲ್ಲಿ ಬಿಜೆಪಿ ಸರಕಾರ ಸ್ಥಾಪಿಸಿ ಎಂದು ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು ಮನವಿ ಮಾಡಿದರು.

ಮಂಡ್ಯದಲ್ಲಿ ಇಂದು ಸಾರ್ವಜನಿಕ ಸಭೆಯಲ್ಲಿ ಮಾತನಾಡಿದ ಅವರು, ಆದಿಚುಂಚನಗಿರಿ ಮಠ ಇಲ್ಲಿದೆ. ಭೈರೇಶ್ವರ ಸ್ವಾಮಿ ಅಲ್ಲಿ ನೆಲೆಸಿದ್ದಾರೆ. ಕರ್ನಾಟಕ–ಉತ್ತರ ಪ್ರದೇಶದ ನಡುವಿನ ಸಂಬಂಧಗಳನ್ನು ಗಮನಿಸಿ ನನಗೆ ಸಂತಸವಾಗುತ್ತದೆ ಎಂದರು. ಪ್ರಧಾನಿ ಮೋದಿಜಿ ಅವರ ಏಕ್ ಭಾರತ್ ಶ್ರೇಷ್ಠ ಭಾರತ್ ಪರಿಕಲ್ಪನೆಯನ್ನು ಸಾಕಾರಗೊಳಿಸಲು ಬಿಜೆಪಿಗೆ ಮತ ಕೊಡಿ; ಬಿಜೆಪಿಯನ್ನೇ ಗೆಲ್ಲಿಸಿ ಎಂದು ಮನವಿ ಮಾಡಿದರು.

ಕರ್ನಾಟಕದ ಬಿಜೆಪಿ ಸರಕಾರವು ರಾಷ್ಟ್ರೀಯ ಶಿಕ್ಷಣ ನೀತಿಯನ್ನು ತ್ವರಿತವಾಗಿ ಅನುಷ್ಠಾನಕ್ಕೆ ತಂದಿದೆ. ಯುವಜನರಿಗಾಗಿ ಅನೇಕ ಯೋಜನೆಗಳು ಜಾ–ರಿಯಾಗಿವೆ. ಇದಕ್ಕಾಗಿ ಕರ್ನಾಟಕಕ್ಕೆ ಅಭಿನಂದನೆಗಳು ಎಂದು ತಿಳಿಸಿದರು.

ಡಬಲ್ ಎಂಜಿನ್ ಸರಕಾರದಿಂದ ಸಮೃದ್ಧಿ, ಸುರಕ್ಷತೆ ಸಿಗುತ್ತದೆ. ಏಕ್ ಭಾರತ್, ಶ್ರೇಷ್ಠ ಭಾರತ್ ಪರಿಕಲ್ಪನೆಯನ್ನು ಜಾರಿ ಮಾಡಲು ಬಿಜೆಪಿಗೇ ಮತ ಕೊಡಿ. ಮೋದಿಜಿ ಟೀಂ ಇಂಡಿಯದ ಕ್ಯಾಪ್ಟನ್ ಆಗಿದ್ದಾರೆ. ಮೋದಿಜಿ ಅವರ ಟೀಂ ಇಂಡಿಂ–ಯದಲ್ಲಿ ಕರ್ನಾಟಕದ ಗರಿಷ್ಠ ಆಟಗಾರರು ಇರುವಂತೆ ನೋಡಿಕೊಳ್ಳಿ. ಕಾಂಗ್ರೆಸ್ ಪಕ್ಷದ ಫೇಯಿಲ್ಡ್ ಎಂಜಿನ್ ದೂರವಿಡಿ. ಕರ್ನಾಟಕದಲ್ಲಿ ಬಿಜೆಪಿ ಸರಕಾರ ಮತ್ತೆ ಕೆಲಸ ಮಾಡುವಂತಾಗಲಿ ಎಂದು ವಿಶ್ವಾಸದಿಂದ ನುಡಿದರು. ಮಂಡ್ಯವು ಕೃಷಿ, ಕಾರ್ಖಾನೆಗಳಿಗೆ ಪ್ರಖ್ಯಾತ. ಕರ್ನಾಟಕವು ವಿಕಾಸದ ಹಾದಿಯಲ್ಲಿ ಮುನ್ನಡೆಯಲು ಕರ್ನಾಟಕದಲ್ಲೂ ಡಬಲ್ ಎಂಜಿನ್ ಸರಕಾರವನ್ನು ಮತ್ತೆ ಸ್ಥಾಪಿಸಿ. ರಾಮಜನ್ಮಭೂಮಿ ಆಂದೋಲನದಲ್ಲಿ ನೀವೂ ಪಾಲ್ಗೊಂಡಿದ್ದೀರಿ. 2024ರ ಜನವರಿಯಲ್ಲಿ ರಾಮಮಂದಿರ ಪೂರ್ಣಗೊಂಡು ಉದ್ಘಾಟನೆ ಆಗಲಿದೆ. ಇದೊಂದು ಮಹತ್ವದ ದಿನವಾಗಲಿದೆ. ನೀವೆಲ್ಲರೂ ಅಲ್ಲಿಗೆ ಬನ್ನಿ ಎಂದು ಆಹ್ವಾನಿಸಿದರು.

ಬ್ರಿಟನ್ ದೇಶವನ್ನು ಹಿಂದಿಕ್ಕಿ ನಾವು ದೊಡ್ಡ ಆರ್ಥಿಕ ವ್ಯವಸ್ಥೆಯಾಗಿ ಹೊರಹೊಮ್ಮಿದ್ದೇವೆ. ನಮ್ಮ ದೇಶ ಮತ್ತು ನಮ್ಮ ಪ್ರಧಾನಿಯವರು ಜಗತ್ತಿನಲ್ಲಿ ವಿಶಿಷ್ಟ ಸ್ಥಾನ ಪಡೆದಿದ್ದಾರೆ. ಕರ್ನಾಟಕದ ಬೆಂಗಳೂರು ಐಟಿ ಕ್ಷೇತ್ರದಲ್ಲಿ ಪ್ರಮುಖ ಕೇಂದ್ರವಾಗಿದೆ ಎಂದು ಮೆಚ್ಚುಗೆ ಸೂಚಿಸಿದರು. ನಮ್ಮ ಬಳಿ ಶಕ್ತಿ ಇದೆ. 2014ರಲ್ಲಿ ಮೋದಿಜಿ ಅವರಿಗೆ ನಾಯಕತ್ವ ಲಭಿಸಿತು. ಆ ಬಳಿಕ ಅಭಿವೃದ್ಧಿ ನಿರಂತರವಾಗಿತ್ತು. ಕಾಂಗ್ರೆಸ್ ಪಕ್ಷದ್ದು ಕೇವಲ ಶಿಲಾನ್ಯಾಸಗಳ ಪಂಚವಾರ್ಷಿಕ ಯೋಜನೆಯ ಸರಕಾರವಾಗಿತ್ತು. ಇದು ಕಾಂಗ್ರೆಸ್ನ ಅಸಲಿ ನೀತಿ ಎಂದು ಟೀಕಿಸಿದರು.

ಇವತ್ತು ಮೂಲಸೌಕರ್ಯಗಳ ಅಭಿವೃದ್ಧಿ ನಿರಂತರವಾಗಿದೆ. ಶಿಲಾನ್ಯಾಸದ ದಿನವೇ ಭವಿಷ್ಯದ ಉದ್ಘಾಟನೆಯ ದಿನವೂ ನಿಗದಿ ಆಗುತ್ತಿದೆ. ಪರಿವರ್ತನೆಯ ಯುಗ ಆರಂಭವಾಗಿದೆ ಎಂದ ಅವರು, ಭಾರತ ಕೃಷಿ ಪ್ರಧಾನ ದೇಶವಾಗಿದೆ. ಆದರೆ, ಇಲ್ಲಿನ ರೈತರು ಆತ್ಮಹತ್ಯೆ ಹಾದಿ ಹಿಡಿದಿದ್ದರು. ರೈತರಿಗೆ ಕಿಸಾನ್ ಸಮ್ಮಾನ್ ಮೂಲಕ ನಿಧಿ ನೀಡಿದ ಮೇರು ವ್ಯಕ್ತಿ ಮೋದಿಜಿ ಎಂದು ಶ್ಲಾಘಿಸಿದರು. ಎಂಎಸ್ಪಿ, ಸಿಂಚಾಯಿ ಯೋಜನೆ, ವಿಮೆ ಮೊದಲಾದ ಯೋಜನೆಗಳನ್ನು ಜಾರಿ ಮಾಡಿದ್ದಾರೆ ಎಂದು ತಿಳಿಸಿದರು. ಬಿಜೆಪಿಯ ಡಬಲ್ ಎಂಜಿನ್ ಸರಕಾರದ ಸುರಕ್ಷತೆ, ಅಭಿವೃದ್ಧಿಯ ಭರವಸೆ ಉತ್ತರ ಪ್ರದೇಶದಲ್ಲಿದೆ. ಪಿಎಫ್ಐ ಸಂಘಟನೆಯನ್ನು ನಿಷೇಧಿಸುವ ಕೆಲಸವನ್ನು ಬಿಜೆಪಿ ಮಾಡಿದೆ. ಕಾಂಗ್ರೆಸ್ ಪಕ್ಷವು ಪಿಎಫ್ಐ ತುಷ್ಟೀಕರಣ ಕಾರ್ಯ ಮಾಡುತ್ತಿದೆ ಎಂದು ಆಕ್ಷೇಪಿಸಿದರು.

ಧರ್ಮದ ಆಧಾರದಲ್ಲಿ ಮೀಸಲಾತಿ ಸಂವಿಧಾನ ವಿರೋಧಿ ಎಂದು ಟೀಕಿಸಿದ ಅವರು, 1947ರಲ್ಲಿ ಭಾರತದ ವಿಭಜನೆ ಆಗಿತ್ತು. ಮತ್ತೆ ಅಂಥ ದಿನವನ್ನು ನಾವು ಎದುರು ನೋಡಲು ಬಿಜೆಪಿ ಅವಕಾಶ ಕೊಡುವುದಿಲ್ಲ ಎಂದು ಎಚ್ಚರಿಸಿದರು. ತುಷ್ಟೀಕರಣದ ಬದಲು ಸಶಕ್ತೀಕರಣದ ಕಡೆ ನಾವು ಗಮನ ಕೊಡುತ್ತೇವೆ ಎಂದರು. ಕನ್ನಡದಲ್ಲೇ ಭಾಷಣ ಆರಂಭಿಸಿದ ಅವರು, ಜೈ ಭಾರತ ಜನನಿಯ ತನುಜಾನೆ, ಜೈ ಕರ್ನಾಟಕ ಮಾತೆ ಎನ್ನುವ ಮೂಲಕ ಭಾಷಣ ಮುಕ್ತಾಯಗೊಳಿಸಿದರು. ಬಿಜೆಪಿ ಕರ್ನಾಟಕ ಘಟಕವು ನನಗೆ ಇಲ್ಲಿ ಬರಲು ಅವಕಾಶ ನೀಡಿದೆ. ಇದರಿಂದ ಸಂತಸವಾಗಿದೆ ಎಂದರು. ತ್ರೇತಾಯುಗದಿಂದ ಉತ್ತರ ಪ್ರದೇಶ ಮತ್ತು ಕರ್ನಾಟಕದ ನಡುವೆ ಸಂಬಂಧ ಇದೆ. ಭಗವಾನ್ ಹನುಮಾನ್ ಅವರ ಜನ್ಮಭೂಮಿ ಕರ್ನಾಟಕ ಎಂದ ಅವರು, ಈ ಎರಡು ರಾಜ್ಯಗಳ ನಡುವೆ ವಿಶಿಷ್ಟ ಸಂಬಂಧವಿದೆ ಎಂದರು.

ಸಚಿವರಾದ ಡಾ.ಕೆ.ಸಿ.ನಾರಾಯಣಗೌಡ, ಡಾ.ಸಿ.ಎನ್.ಅಶ್ವತ್ಥನಾರಾಯಣ್, ಸಂಸದರಾದ ಸುಮಲತಾ ಅಂಬರೀಷ್ ಅವರು ಮಾತನಾಡಿ, ಮಂಡ್ಯ ಮತ್ತು ಹಳೆ ಮೈಸೂರು ಭಾಗದಲ್ಲಿ ಬಿಜೆಪಿ ಅತಿ ಹೆಚ್ಚು ಸ್ಥಾನಗಳನ್ನು ಗಳಿಸಿ ರಾಜ್ಯದಲ್ಲಿ ಅಧಿಕಾರಕ್ಕೆ ಬರಲಿದೆ ಎಂದು ತಿಳಿಸಿದರು. ಅತಂತ್ರ ಫಲಿತಾಂಶ ಬರಲಿ ಎಂದು ಒಂದು ಪಕ್ಷ ಕಾದು ಕುಳಿತಿ–ದೆ ಎಂದು ಸುಮಲತಾ ಅವರು ವ್ಯಂಗ್ಯವಾಡಿದರು. ರಾಜ್ಯದ ಸಚಿವರಾದ ಡಾ.ಕೆ.ಸಿ.ನಾರಾಯಣಗೌಡ, ಡಾ.ಸಿ.ಎನ್.ಅಶ್ವತ್ಥನಾರಾಯಣ್, ರಾಜ್ಯ ಉಪಾಧ್ಯಕ್ಷ ನಿರ್ಮಲ್ಕುಮಾರ್ ಸುರಾಣ, ಅಭ್ಯರ್ಥಿ ಇಂಡ್ಲವಾಡು ಸಚ್ಚಿದಾನಂದ, ಅಭ್ಯರ್ಥಿಗಳು, ಸ್ಥಳೀಯ ಮುಖಂಡರು ಮತ್ತು ಕಾರ್ಯಕರ್ತರು ಭಾಗವಹಿಸಿದ್ದರು.

## ಚುನಾವಣೆ: ಅಭ್ಯರ್ಥಿಗಳ ಲೆಕ್ಕಪತ್ರ ಪರಿಶೀಲನೆ: ದಿನಾಂಕ ನಿಗದಿ

ಬೆಳಗಾವಿ: 12–ಬೆಳಗಾವಿ ದಕ್ಷಿಣ ವಿಧಾನಸಭಾ ಮತಕ್ಷೇತ್ರದ ವೆಚ್ಚ ವೀಕ್ಷಕರು ಚುನಾವಣಾ ಅಭ್ಯರ್ಥಿಗಳ ವೆಚ್ಚ ವಹಿಗಳನ್ನು ಚುನಾವಣಾ ಅವಧಿಯಲ್ಲಿ ಒಟ್ಟು ಮೂರು ಬಾರಿ ಪರಿಶೀಲನೆ ಕೈಗೊಳ್ಳುತ್ತಾರೆ. ಸದರಿ ಸಭೆಗಳಲ್ಲಿ ಅಭ್ಯರ್ಥಿ ಅಥ–ವಾ ಚುನಾವಣಾ ಏಜಂಟರು, ಖುದ್ದು ಹಾಜರಾಗಿ ವೆಚ್ಚದ ವಹಿಗಳನ್ನು ಮತ್ತು ದಾಖಲೆಗಳನ್ನು ಪರಿಶೀಲನೆ ಮಾಡಿಕೊಳ್ಳಬೇಕಾಗಿರುತ್ತದೆ ಎಂದು 12–ಬೆಳಗಾವಿ ದಕ್ಷಿಣ ವಿಧಾನಸಭಾ ಮತಕ್ಷೇತ್ರ ಚುನಾವಣಾಧಿಕಾರಿಗಳು ಹಾಗೂ ಮಹಾನಗರ ಪಾಲಿಕೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಭ್ಯರ್ಥಿಗಳ ವೆಚ್ಚವಹಿಗಳನ್ನು ಪರಿಶೀಲಿಸುವ ದಿನಾಂಕಗಳು:

ಏಪ್ರಿಲ್. 27 2023 ರಂದು ಬೆಳಿಗ್ಗೆ 10 ಗಂಟೆಗೆ– ಅನೇಕ್ಸ ಕಟ್ಟಡ ಮಹಾನಗರ ಪಾಲಿಕೆ ಬೆಳಗಾವಿ

ಮೇ.2 2023 ರಂದು ಬೆಳಿಗ್ಗೆ 10 ಗಂಟೆಗೆ– ಅನೇಕ್ಸ ಕಟ್ಟಡ ಮಹಾನಗರ ಪಾಲಿಕೆ ಬೆಳಗಾವಿ

ಮೇ.7 2023 ರಂದು ಬೆಳಿಗ್ಗೆ 10 ಗಂಟೆಗೆ– ಅನೇಕ ಕಟ್ಟಡ ಮಹಾನಗರ ಪಾಲಿಕೆ ಬೆಳಗಾವಿ

ಸದರಿ ಸಭೆಗಳಿಗೆ ಅಭ್ಯರ್ಥಿ ಅಥವಾ ಚುನಾವಣಾ ಏಜಟರು ಖುದ್ದು ಹಾಜರಾಗಿ ವೆಚ್ಚದ ವಹಿಗಳನ್ನು ಹಾಗೂ ವೆಚ್ಚದ ದಾಖಲೆಗಳನ್ನು ಪರಿಶೀಲನೆ ಮಾಡಿಕೊಳ್ಳಬೇಕು ಎಂದು ಬೆಳಗಾವಿ ಚುನಾವಣಾಧಿಕಾರಿಗಳು ತಿಳಿಸಿದ್ದಾರೆ.

## ಶ್ರೀ ಜಗದ್ಗುರು ರೇಣುಕ ಮಂದಿರದ ನವೀನ ಗೋಪುರ ಕಳಸಾರೋಹಣ

ಹಾವೇರಿ: ನಗರದ ಶ್ರೀ ಜಗದ್ಗುರು ರೇಣುಕ ಮಂದಿರದ ಪುನರ್ ನವೀಕರಣಗೊಂಡ ಕಟ್ಟಡ ಉದ್ಘಾಟನೆ ಮತ್ತು ನವೀನ ಗೋಪುರ ಕಳಸಾರೋಹಣ ಹಾಗೂ ಸಂಸ್ಕೃತಿ ಸಂವರ್ಧನಾ ಸಮಾರಂಭ ಮೇ 1 ಸೋಮವಾರದಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳ ಸಾನ್ನಿಧ್ಯದಲ್ಲಿ ಜರುಗಲಿದೆ.

ಬೆಳಿಗ್ಗೆ 10–45ಕ್ಕೆ ಶ್ರೀ ರಂಭಾಪುರಿ ಜಗದ್ಗುರುಗಳ ಸಾನ್ನಿಧ್ಯದಲ್ಲಿ ಜರುಗುವ ಸಂಸ್ಕೃತಿ ಸಂವರ್ಧನಾ ಸಮಾರಂಭದಲ್ಲಿ ಹಾವೇರಿ–ಕರ್ಜಗಿ ಗೌರಿಮಠದ ಶಿವಯೋಗಿ ಶಿವಾಚಾರ್ಯರು ಹಾಗೂ ಬಂಕಾಪುರ ಅರಳೆಲೆಮಠದ ರೇವಣಸಿದ್ಧ ಶಿವಾಚಾರ್ಯರು ಉಪದೇಶಾಮೃತ ನೀಡುವರು.

ಹಾವೇರಿ ಹರಸೂರು ಬಣ್ಣದಮಠದ ಅಭಿನವರುದ್ರ ಚನ್ನಮಲ್ಲಿಕಾರ್ಜುನ ಶಿವಾಚಾರ್ಯರು ಮತ್ತು ಕೂಡಲ ಗುರುನಂಜೇಶ್ವರ ಮಠದ ಗುರುಮಹೇಶ್ವರ ಶಿವಾಚಾರ್ಯರು ನುಡಿ ನೈವೇದ್ಯ ಸಲ್ಲಿಸುವರು.

ನೆಗಳೂರು ಸಂಸ್ಥಾನ ಹಿರೇಮಠದ ಗುರುಶಾಂತೇಶ್ವರ ಶಿವಾಚಾರ್ಯರು ನಾಂದಿ ನುಡಿ ಸೇವೆ ಸಲ್ಲಿಸುವರು.

ಈ ಸಮಾರಂಭದಲ್ಲಿ ಸಮಸ್ತ ಸದ್ಭಕ್ತ ಜನತೆ ಪಾಲ್ಗೊಳ್ಳುವಂತೆ ಶ್ರೀ ಜಗದ್ಗುರು ರೇಣುಕ ಮಂದಿರ ಸೇವಾ ಸಮಿತಿಯವರು ಕೋರಿದ್ದಾರೆ.

## ಇಂದು ಮತದಾರರ ಜಾಗೃತಿಗಾಗಿ ಕುಂಭಮೇಳ ಜಾಥಾ

ಬೆಳಗಾವಿ: 2023 ನೇ ಸಾಲಿನ ಸ್ವೀಪ್ ಕಾರ್ಯಕ್ರಮದಡಿ ಜಿಲ್ಲಾ ಸ್ವೀಪ್ ಸಮಿತಿ ಬೆಳಗಾವಿ ವತಿಯಿಂದ ಏಪ್ರಿಲ್.27 2023 ರಂದು ಬೆಳಿಗ್ಗೆ 10 ಗಂಟೆಗೆ "ಮತದಾರರ ಜಾಗೃತಿಗಾಗಿ ಕುಂಭಮೇಳ ಜಾಥಾ" ಹಮ್ಮಿಕೊಳ್ಳಲಾಗಿದೆ.

ಜಾಥಾವು ಚನ್ನಮ್ಮ ವೃತ್ತ ಕಾಕತಿವೇಸ್ ಇಂದ ಪ್ರಾರಂಭಗೊಂಡು ಶನಿವಾರಬೂಟ್ ರಸ್ತೆ ಖಡೇಬಜಾರ (ಮಂಗಲದೀಪ ರಸ್ತೆ) । ರಾಮದೇವ ಗಲ್ಲಿ – ಕಿರ್ಲೋಸ್ಕರ್ ರೋಡ್ – ಬೋಗಾರವೆಸ್ ವರೆಗೆ ನಡೆಯಲಿದೆ ಎಂದು ಜಿಲ್ಲಾ ಪಂಚಾಯತ, ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಣಕು ಮತದಾನಕ್ಕೆ ಲಿಂಗತ್ವ ಅಲ್ಪಸಂಖ್ಯಾತರಿಂದ ಚಾಲನೆ




ಕೊಪ್ಪಳ : ಗಂಗಾವತಿ ತಾಲೂಕಿನ ಬಸಾಪಟ್ಟಣ ಗ್ರಾಮದಲ್ಲಿ ಏಪ್ರಿಲ್ 25ರಂದು ಮತದಾನ ಜಾಗೃತಿ ಹಾಗೂ ಇವಿಎಂ, ವಿವಿ ಪ್ಯಾಟ್ ಪ್ರಾತ್ಯಕ್ಷಿಕೆ ಕಾರ್ಯಕ್ರಮ ಜರುಗಿತು.

ಮತದಾನ ಜಾಗೃತಿ ಕಾರ್ಯಕ್ರಮಕ್ಕೆ ಲಿಂಗತ್ವ ಅಲ್ಪಸಂಖ್ಯಾತರಾದ ಶರಣಮ್ಮ ಅವರು ಅಣಕು ಮತದಾನ ಮಾಡುವ ಮೂಲಕ ಚಾಲನೆ ನೀಡಿದರು. ಬಳಿಕ ಮಾತನಾಡಿ, ನಮ್ಮ ಮತ ನಮ್ಮ ಹಕ್ಕಾಗಿದೆ.

ನಮ್ಮ ಮತವನ್ನು ಮಾರಾಟ ಮಾಡಿಕೊಳ್ಳದೇ ನಾವು ಹಕ್ಕು ಚಲಾಯಿಸಬೇಕು. ಯಾವುದೇ ಆಸೆ, ಆಮೀಷಕ್ಕೆ ಒಳಗಾಗಬಾರದು. ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಬೇಕು ಎಂದರು.

ಸ್ವೀಪ್ ಸಂಕಲನ ವಿಷಯ ನಿರ್ವಾಹಕ ಜುಬೇರ್ ನಾಯ್ಕ್, ಗ್ರಾ.ಪಂ. ಅಭಿವೃದ್ಧಿ ಅಧಿಕಾರಿ ಇಂದಿರಾ ಅವರು ಮತದಾನ ಮಹತ್ವ ಕುರಿತು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ತಾಲೂಕು ಐಇಸಿ ಸಂಯೋಜಕರು, ಗ್ರಾಪಂ ಕಾರ್ಯದರ್ಶಿಗಳು, ಎಲ್ಲಾ ಸಿಬ್ಬಂದಿಗಳು, ಎನ್.ಆರ್.ಎಲ್.ಎಂ ಸಂಜೀವಿನಿ ಯೋಜನೆ ಸ್ವಸಹಾಯ ಸಂಘದ ಮಹಿಳೆಯರು ಉಪಸ್ಥಿತರಿದ್ದರು.



ಬೆಳಗಾವಿ: ವಿಧಾನಸಭೆ ವಿರೋಧ ಪಕ್ಷದ ನಾಯಕರಾದ ಸಿದ್ದರಾಮಯ್ಯ ಅವರು ಬುಧವಾರ ಬೆಳಗಾವಿಯ ಕಿತ್ತೂರಿನ ನೇಗಿನಾಳ ಗ್ರಾಮಕ್ಕೆ ಭೇಟಿ ನೀಡಿ ಮಾಜಿ ಸಚಿವ ಡಿ.ಬಿ.ಇನಾಮದಾರ ಅವರ ಪಾರ್ಥಿವ ಶರೀರದ ದರ್ಶನ ಪಡೆದು ಅಂತಿಮ ನಮನ ಸಲ್ಲಿಸಿದರು.

# ಬೆಳಗಾವಿ ದಕ್ಷಿಣ ಅಭ್ಯರ್ಥಿ ಶ್ರೀ ಅಭಯ ಪಾಟೀಲರವರ ಸೈಕಲ್ ರ‍್ಯಾಲಿ

ಬೆಳಗಾವಿ: ಬೆಳಗಾವಿ ದಕ್ಷಿಣ ಮತಕ್ಷೇತ್ರದ ಭಾಜಪಾದ ಅಧಿಕೃತ ಅಭ್ಯರ್ಥಿಯಾದ ಶ್ರೀ ಅಭಯ ಪಾಟೀಲರವರು ಬುಧವಾರ ಬೆಳಗ್ಗೆ 7:00 ಗಂಟೆಗೆ ಸೈಕಲ್ ಸವಾರಿಯ ಮೂಲಕ ಮತಯಾಚನೆ ನೆಡೆಸಿದರು.





ದತ್ತ ಮಂದಿರ ಪ್ರಾರಂಭವಾಗಿ ಭವಾನಿ ನಗರ ಮಾರ್ಗವಾಗಿ ರೇಣುಕಾ ಗಲ್ಲಿ, ಲಕ್ಷ್ಮಿ ಗಲ್ಲಿ, ಗಣೇಶ ಗಲ್ಲಿಯ ಮುಖ್ಯ ರಸ್ತೆ ಭವನಿ ನಗರ ದಿಂದ ಗೋಡ್ಸೆ ನಗರ, ದೇವಕರ್ ನಗರ, ಎಕೆವಾ ಪಾರ್ಕ, ಚೌಂಗಲೇವಾಡಿ, ವ್ಯಾಕ್ಸಿನ್ ಡಿಪೋ, ರಾಯ್ ರೋಡ್, ಅಕರೇಕರ್ ರೋಡ್ ಮಾರ್ಗವಾಗಿ ರಾನಡೆ ರೋಡ್, ಗಜಾನನ ಮಹಾರಾಜನಗರ, ಶಾಂತಿ ಕಾಲೋನಿ, ಶಿವಾಜಿ ಮಹಾರಾಜ ಕಾಲೋನಿ, ಗಾಂಧಿ ಕಾಲೋನಿ, ಎಸ್ ವಿ, ಕಾಲೋನಿ, ಮರಾಠಾ ಕಾಲೊನಿ, ಕರೇಪ್ಪಾ ಕಾಲೋನಿ, ಗಿನಂಡೆ ಕಾಲೋನಿ ಮಾರ್ಗವಾಗಿ ನಾನಾವಾಡಿ ವರೆಗೆ ಸೈಕಲ್ ಸವಾರಿ ಮಾಡುವ ಮತ ಪ್ರಚಾರ ನೆಡೆಸಲಾಯಿತು. ಈ ಸಂದರ್ಭದಲ್ಲಿ ನೂರಾರು ಸಂಖ್ಯೆಯಲ್ಲಿ ಕಾರ್ಯಕರ್ತರು, ನಗರಸೇವಕರು ಉಪಸ್ಥಿತರಿದ್ದರು.

# ಮಹೀಂದ್ರಾ ಬೊಲೆರೊ ಮಾಕ್ಸಿ ಪಿಕ್– ಅಪ್' ಶ್ರೇಣಿ ಬಿಡುಗಡೆ

ಹುಬ್ಬಳ್ಳಿ: ಭಾರತದ ನಂ.1 ಪಿಕಪ್ಬ್ರ್ಯಾಂಡ್ ಎನಿಸಿರುವ ಬೊಲೆರೊ ಪಿಕ್ಅಪ್' ತಯಾರಕ ಸಂಸ್ಥೆ ಮಹೀಂದ್ರಾ & ಮಹೀಂದ್ರಾ' (ಎಂ & ಎಂ) ಇಂದುತನ್ನ ಹೊಚ್ಚಹೊಸ ಬೊಲೆರೊ ಪಿಕ್–ಅಪ್' ಶ್ರೇಣಿಯನ್ನು ಬಿಡುಗಡೆ ಮಾಡಿದೆ. ರೂ.7.85 ಲಕ್ಷ (ಎಕ್ಸ್ಶೋರೂಂ) ಬೆಲೆಯಲ್ಲಿ ಪ್ರಾರಂಭವಾಗುವ ಹೊಚ್ಚಹೊಸ ಬೊಲೆರೊ ಮ್ಯಾಕ್ಸ್ಪಿಕ್–ಅಪ್' ಶ್ರೇಣಿಯನ್ನು ಗ್ರಾಹಕರು ಮತ್ತು ಆಪರೇಟರ್ಗಳಿಗೆ ಅಭೂತಪೂರ್ವ ಮೌಲ್ಯವರ್ಧನೆ ನೀಡಲು ಶಕ್ತಿಯುತ ವೈಶಿಷ್ಟ್ಯಗಳು ಹಾಗೂ ಕಾರ್ಯ ಕ್ಷಮತೆಯೊಂದಿಗೆ ವಿನ್ಯಾಸ ಗೊಳಿಸಲಾಗಿದೆ.

ಹಗುರವಾದ, ದೃಢವಾದ ಮತ್ತು ಬಹುಮುಖವಾದ, ಹೊಚ್ಚಹೊಸ ಬೊಲೆರೊ ಮ್ಯಾಕ್ಸ್ಪಿಕ್– ಅಪ್' ಶ್ರೇಣಿಯು ಪೇಲೋಡ್ಸಾಮರ್ಥ್ಯ, ಇಂಧನ ದಕ್ಷತೆ, ಸುರಕ್ಷತೆ ಮತ್ತು ಒಟ್ಟಾರೆ ಚಾಲನಾ ಅನುಭವಕ್ಕಾಗಿ ಹೊಸಮಾನ ದಂಡಗಳನ್ನು ನಿಗದಿಪಡಿಸುತ್ತದೆ. ಹಿಂದೆಂದಿಗಿಂತಲೂ ಹೆಚ್ಚಿನ ಮೌಲ್ಯವನ್ನು ನೀಡಲು ಇದು' ಸ್ಮಾರ್ಟ ಎಂಜಿನಿಯರಿಂಗ್' ಅನ್ನು ಸಹಒಳಗೊಂಡಿದೆ. ಹೊಚ್ಚ ಹೊಸ ಬೊಲೆರೊ ಮಾಕ್ಸ್ಪಿಕ್–ಅಪ್' ಶ್ರೇಣಿಯನ್ನು ಕನಿಷ್ಠ 24,999 ರೂ.ಗಳ ಡೌನ್ಪೇಮೆಂಟ್




ಪಾವತಿಸಿ ಕಾಯ್ದಿರಿ ಸಬಹುದು. ತಡೆರಹಿತ ಖರೀದಿ ಮತ್ತು ಮಾಲೀಕತ್ವದ ಅನುಭವಕ್ಕಾಗಿ ಆಕರ್ಷಕ ಹಣಕಾಸು ಯೋಜನೆಗಳನ್ನು ಸಹ ಮಹೀಂದ್ರಾ' ನೀಡುತ್ತದೆ.

ಹೊಚ್ಚ ಹೊಸ ಬೊಲೆರೊ ಮ್ಯಾಕ್ಸ್ಪಿಕ್–ಅಪ್' ಶ್ರೇಣಿಯು ಹೊಸವೇದಿಕೆ ಯೊಂದಿಗೆ ಕ್ರಾಂತಿ–ಕಾರಿ ಬದಲಾವಣೆಯ ಭರವಸೆ ನೀಡುತ್ತದೆ. ಜೊತೆಗೆ ಬೊಲೆರೊ' ವಂಶವಾಹಿಗೆ ಸಮಾನಾರ್ಥಕ ವಾಗಿರುವ ದೃಢತೆ, ಕಠಿಣ–ತೆ, ವಿಶ್ವಾಸಾರ್ಹತೆ, ಕಡಿಮೆ ನಿರ್ವಹಣಾ ವೆಚ್ಚ ಮತ್ತು ಹೆಚ್ಚಿನ ಮರುಮಾರಾಟ ಮೌಲ್ಯ ಮುಂತಾದ ಪ್ರಮುಖ ಮೌಲ್ಯಗಳು ಮತ್ತು ಸಾಮರ್ಥ್ಯಗಳನ್ನು ಹೊಂದಿದೆ. ಇದು ದೇಶಾದ್ಯಂತ ನಗರ ರಸ್ತೆಗಳು ಮತ್ತು ಹೆದ್ದಾ–ರಿಗಳಲ್ಲಿ ಪ್ರಾಬಲ್ಯ ಹೊಂದಿರುವ ಬೊಲೆರೊ ದಸರಳ ಮತ್ತು ಕಾಲಾತೀತ ವಿನ್ಯಾಸವನ್ನೂ ಸಹ ಒಳಗೊಂಡಿದೆ.

ಎಂ&ಎಂ ಆಟೋ ಮೋಟಿ ವ್ವಿಭಾಗದ ಅಧ್ಯಕ್ಷ ವೀಜಯನ ಕ್ರಾಅವರು ಮಾತನಾಡಿ, "ಭಾರತ ಸರಕಾರದ' ಮೇಕ್ ಇನ್ ಇಂಡಿಯಾ' ಉಪಕ್ರಮಕ್ಕೆ ಅತ್ಯಂತ ಬದ್ಧವಾಗಿರುವ ಕಂಪನಿ ನಮ್ಮದಾಗಿದೆ. ಗ್ರಾಹಕ ಕೇಂದ್ರಿತವಾಗಿರುವುದು ಮಾತ್ರವಲ್ಲದೆ ಭಾರತದ ಆರ್ಥಿಕ ಬೆಳವಣಿಗೆಗೆ ಕೊಡುಗೆ ನೀಡುವ ನಮ್ಮ ಬದ್ಧತೆಯನ್ನು ನಮ್ಮ ಉತ್ಪನ್ನಗಳು ಪ್ರತಿ ಬಿಂಬಿಸುತ್ತವೆ. ಅಂತಹ ಉತ್ಪನ್ನಗಳ ಅಭಿವೃದ್ಧಿ ಮತ್ತು ಉತ್ಕೃಷ್ಟತೆಯಲ್ಲಿ ನಾವು ಅಪಾರ ಹೆಮ್ಮೆ ಹೊಂದಿದ್ದೇವೆ.ಮಹೀಂದ್ರಾ ಸಂಸ್ಥೆಯು ಬೆಳವಣಿಗೆಮತ್ತುಸಮೃದ್ಧಿಯನ್ನುಶಕ್ತಗೊಳಿಸುವಂತಹ ವಾಹನಗಳನ್ನು ಒದಗಿಸುವ ಮೂಲಕ ನಮ್ಮ ಗ್ರಾಹಕರ ಜೀವನವನ್ನು ಶ್ರೀಮಂತಗೊಳಿಸಲು ನಾವುನಿರಂತರವಾಗಿ ಪ್ರಯತ್ನಿಸುತ್ತೇವೆ. ಹೊಚ್ಚ ಹೊಸ ಬೊಲೆರೊ ಮ್ಯಾಕ್ಸ್ಪಿಕ್–ಅಪ್' ಶ್ರೇಣಿಯು ಅತ್ಯಾಧುನಿಕ ವೈಶಿಷ್ಟ್ಯಗಳು, ಸಾಟಿಯಿಲ್ಲದಶಕ್ತಿ, ಗ–ರಿಷ್ಠ ಪೇಲೋಡ್ಸಾಮರ್ಥ್ಯಗಳು ಮತ್ತುಹೆಚ್ಚಿನ ಮೈಲೇಜ್ಅನ್ನು ನೀಡುತ್ತದೆ. ವಾಹನದ ಪ್ರತಿ ಪ್ರಯಾಣವು ಚಾಲಕರಿಗೆ ಉತ್ಪಾದಕತೆ ಮತ್ತು ಆಯಾ ಸಮುಕ್ತತೆಯ ಭರವಸೆ ನೀಡುತ್ತದೆ. ನೈಜ ಮ್ಯಾಕ್ಸಿಮಮ್' ಅನುಭವವನ್ನು ಹುಡುಕುತ್ತಿರುವ ಯಾರಿಗಾದರೂ ಇದುಯೋಗ್ಯ ಆಯ್ಕೆಯಾಗಿ ನಿಲ್ಲುತ್ತದೆ. ಈಉತ್ಪನ್ನ ಶ್ರೇಣಿ ಯೊಂದಿಗೆಗ್ರಾಹಕರಿಗೆ ಸಾಟಿಯಿಲ್ಲದ ಮೌಲ್ಯವನ್ನು ತಲುಪಿಸುವ ಮತ್ತು ಪಿಕ್–ಅಪ್ವಿಭಾಗದಲ್ಲಿ ಉತ್ಕೃಷ್ಟತೆಯ ಹೊಸಮಾನದಂಡಗಳನ್ನು ಸ್ಥಾಪಿಸುವ ಮಹೀಂದ್ರಾದ ಅಚಲ ಬದ್ಧತೆಯನ್ನು ಪ್ರದರ್ಶಿಸಲು ನಾವು ಹರ್ಷಿತರಾಗಿದ್ದೇವೆ,"– ಎಂದರು. ಹೊಚ್ಚ ಹೊಸ ಬೊಲೆರೊ ಮಾಕ್ಸ್ಪಿಕ್–ಅಪ್' ಶ್ರೇಣಿಯು HD ಸರಣಿ (HD 2.0L, 1.7 L ಮತ್ತು 1.7, 1.3) ಹಾಗೂ City ಸರಣಿ (City 1.3, 1.4, 1.5 ಮತ್ತು City CNG) ಎಂಬ ಎರಡು ಸರಣಿಗಳಲ್ಲಿ ಲಭ್ಯವಿದೆ. ಅಲ್ಲದೆ, ,ಹೊಸ ಶ್ರೇಣಿಯು ಹೆಚ್ಚಿನ ಪೇಲೋ ಡ್ಸಾಮರ್ಥ್ಯ, ಉತ್ತಮ ಮೈಲೇಜ್ಮತ್ತು ಕಾರ್ಯ ಕ್ಷಮತೆ, ಸುಧಾರಿತ ಆರಾಮದಾಯಕತೆ, ಸುರಕ್ಷತೆ ಮತ್ತು ಹೆಚ್ಚು ವಿಶ್ವಾಸಾರ್ಹತೆ ಹಾಗೂ ಪರಿಣಾಮ ಕಾರಿ ಸಾರಿಗೆ ಪರಿಹಾರವನ್ನು ಒದಗಿಸುತ್ತದೆ.




## 12 ನೇ ತರಗತಿ ಪಾಸಾದ ಸಚಿವರು!

ಲಖನೌ: ನಿನ್ನೆ ಉತ್ತರ ಪ್ರದೇಶದ 12 ನೇ ತರಗತಿಯ ಬೋರ್ಡ್ ಪರೀಕ್ಷೆಯ (ಇಂಟರ್ ಮಿಡೀಯೆಟ್) ಫಲಿತಾಂಶ ಪ್ರಕಟಗೊಂಡಿತು.

ವಿಶೇಷವೆಂದರೆ ಈ ಪರೀಕ್ಷೆಯನ್ನು ಎದುರಿಸಿದ ಉತ್ತರ ಪ್ರದೇಶದ ಇಬ್ಬರು ಮಾಜಿ ಶಾಸಕರು ತೇರ್ಗಡೆಯಾಗಿದ್ದಾರೆ.

ಹೌದು, ಬಿಜೆಪಿ ಮಾಜಿ ಶಾಸಕ ರಾಜೇಶ್ ಮಿಶ್ರಾ ಅವರು ತಮ್ಮ 51 ನೇ ವಯಸ್ಸಿನಲ್ಲಿ ಕಲಾ ವಿಭಾಗದ 12 ನೇ ತರಗತಿ ಪಾಸಾಗಿದ್ದಾರೆ.ಅವರು ಗರಿಷ್ಠ 500 ಅಂಕಗಳಿಗೆ 263 ಅಂಗಳನ್ನು ಪಡೆದು ತೇರ್ಗಡೆ ಹೊಂದಿದ್ದಾರೆ.

# ಪ್ರಾದೇಶಿಕ ಜೆಡಿಎಸ್ ಪಕ್ಷದಿಂದ ಮಾತ್ರ ಕನ್ನಡಿಗರ ಉನ್ನತಿ

ಬೆಳಗಾವಿ: ನಗರದ ಖಾಸಗಿ ಸ್ಥಳದಲ್ಲಿ ಪ್ರಚಾರ ನಿಮಿತ್ತ ಆಗಮಿಸಿದ ಬೆಳಗಾವಿಯ ಉತ್ತರ ಮತಕ್ಷೇತ್ರದ ಜೆಡಿಎಸ್ ಅಭ್ಯರ್ಥಿಯಾದ ಶಿವಾನಂದ ಮುಗಳಿಹಾಳ ಅವರು ಈ ಮೇಲಿನಂತೆ ಹೇಳಿದ್ದಾರೆ..

ಶಿವಾನಂದ ಮುಗಳಿಹಾಳ ಅವರು ಜಿಲ್ಲಾ ರೈತ ಹೋರಾಟಗಾರರಾಗಿ, ರೈತ ಮುಖಂಡರಾಗಿ ಹಲವಾರು ವರ್ಷಗಳಿಂದ ರೈತಸೇವೆಯಲ್ಲಿ ತೊಡಗಿದ್ದು, ಜೆಡಿಎಸ್ ಪಕ್ಷದ ರೈತಪರ ಮತ್ತು ಕನ್ನಡಪರ ಕಾಳಜಿಯಿಂದ ಕೆಲವು ದಿನಗಳ ಹಿಂದೆಯಷ್ಟೇ ಪಕ್ಷವನ್ನು ಸೇರಿಕೊಂಡಿದ್ದಾರೆ.

ಎರಡೂ ರಾಷ್ಟ್ರೀಯ ಪಕ್ಷಗಳು ಕರ್ನಾಟಕದ ಜನರನ್ನು ಸುಳ್ಳು



ಹೇಳಿ ಮೋಸ ಮಾಡುತ್ತಿವೆ ಹಾಗೂ ದೋಚುತ್ತಿವೆ.

ಬಿಜೆಪಿ ಪಕ್ಷ ಕೇಂದ್ರ ಹಾಗೂ ರಾಜ್ಯದಲ್ಲಿ ಭ್ರಷ್ಟಾಚಾರಕ್ಕೆ ಹೆಸರುವಾಸಿ ಆಗಿ, ಜಿಎಸ್ಟಿ ಹಾಗೂ ಬೆಲೆಯೇರಿಕೆ ಮಾಡಿ, ಜನರನ್ನು ಲೂಟಿ ಮಾಡುತ್ತಿದೆ, ಮತ್ತೆ ವಿರೋಧ ಪಕ್ಷವಾದ ಕಾಂಗ್ರೆಸ್ ಇದನ್ನು ತಡೆಯುವದನ್ನು ಬಿಟ್ಟು ಸುಮ್ಮನೆ ಕುಳಿತಿದೆ. ಆದರೆ ನಮ್ಮ ಜೆಡಿಎಸ್ ಪಕ್ಷ ರಾಜ್ಯದ ಜನರ ಏಳಿಗೆ ಬಯಸುವ ಪಕ್ಷ, ನಾಡು ನುಡಿ ಜಲ, ರೈತರು, ಬಡವರು, ಮಹಿಳೆಯರು, ಹೀಗೆ ಎಲ್ಲಾ ರಂಗದ ಅಭಿವೃದ್ಧಿಗಾಗಿ ಶ್ರಮಿಸುವ ಪಕ್ಷವೆಂದರೆ ಅದು ಜೆಡಿ–ಎಸ್ ಪಕ್ಷ ಎಂದರು.

ಜನರಿಗೂ ಈಗ ಅರಿವಾಗಿದೆ, ಜೆಡಿಎಸ್ ಎಂಬ ಪ್ರಾದೇಶಿಕ ಪಕ್ಷ ಅಧಿಕಾರದಲ್ಲಿ ಇದ್ದರೆ ತಮಗೆ ಹಾಗೂ ರಾಜ್ಯಕ್ಕೆ ಎಷ್ಟು ಉಪಯೋಗ ಆಗುತ್ತೆ ಎಂಬ ಮನವರಿಕೆ ಆಗಿದ್ದು, ಈ ಚುನಾವಣೆಯಲ್ಲಿ ನಮ್ಮ ಜೆಡಿಎಸ್ ಪಕ್ಷಕ್ಕೆ ಅತ್ಯಂತ ಯಶಸ್ವಿ ಫಳಿತಾಂಶ ಜನ ನೀಡುತ್ತಾರೆ ಎಂಬ ನಂಬಿಕೆ ಇದೆ ಎಂದರು.

# ಅಕ್ಕಪಕ್ಕದ ಮನೆ ಕಿರುಕುಳಕ್ಕೆ ಗೃಹಿಣಿ ಆತ್ಮಹತ್ಯೆ



ಬೆಂಗಳೂರು: ನೀರು ತುಂಬುವ ವಿಚಾರಕ್ಕೆ ಆರಂಭವಾದ ಗಲಾಟೆ ಗೃಹಿಣಿಯೊಬ್ಬಳು ಮೃತಪಟ್ಟಿರುವ ಘಟನೆ ಬೆಂಗಳೂರಿನ ಯಲಹಂಕ ಠಾಣಾ ವ್ಯಾಪ್ತಿಲ್ಲಿ ನಡೆದಿದೆ.

ಸರಸ್ವತಿ (35) ಎಂಬಾಕೆ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾರೆ. ಸರಸ್ವತಿ ಹಾಗೂ ಆಕೆಯ ಪತಿ ಕೋಗಿಲು ಮುಖ್ಯರಸ್ತೆಯ ಶ್ರೀನಿವಾಸಪುರದಲ್ಲಿರುವ ಸರ್ಕಾರಿ ವಸತಿ ಸಮುಚ್ಚಯದ ಮನೆಯಲ್ಲಿ ವಾಸವಿದ್ದು, ಬೇಸಿಗೆ ಕಾರಣ ನೀರಿನ ಅಭಾವ ಉಂಟಾಗುತ್ತಿದೆ ಎಂದು ಸರಸ್ವತಿ ಪ್ರಶ್ನಿಸಿದಾಗ, ಮನ ಬಂದಂತೆ ಬೈದು, ಚಾರಿತ್ರ್ಯವಧೆ ಮಾಡಿದ್ದಾರೆ. ಎರಡೂ ಮನೆಯವರ ನಡುವೆ ಗಲಾಟೆ ಠಾಣೆಯ ಮೆಟ್ಟಲೇರಿದಾಗ ಪೊಲೀಸರು ಬುದ್ದಿವಾದ ಹೇಳಿ ಕಳಿಸಿದ್ದಾರೆ. ಏಪ್ರಿಲ್ 21ರಂದು ಸಿನಿಮಾ ಕೆಲಸದ ನಿಮಿತ್ತ ನಾಗರಾಜ್ ಧಾರವಾಡಕ್ಕೆ ಹೋದಾಗ ನೀರಿನ ವಿಚಾರವಾಗಿ ಗಲಾಟೆ ಆರಂಭವಾಗಿದೆ. ಈ ವೇಳೆ ಶ್ರೀನಿವಾಸ್, ಅವರ ಪತ್ನಿ ಭವಾನಿ ಹಾಗೂ ಶಿಲ್ಪಾ ಎಂಬಾಕೆ ಸರಸ್ವತಿಗೆ ಮನಬಂದಂತೆ ನಿಂದಿಸಿ, ಹಲ್ಲೆ ಮಾಡಿದ್ದಾರೆ ಎಂಬ ಆರೋಪಿವಿದೆ.

ಹೀಗಾಗಿ ಮನನೊಂದ ಸರಸ್ವತಿ ಗಂಡನಿಗೆ ಕರೆ ಮಾಡಿ 'ನನ್ನಿಂದ ಇನ್ನು ಸಹಿಸಲು ಸಾಧ್ಯವಿಲ್ಲ, ನೀನು ಬೇರೆ ಕಡೆ ಮನೆ ಮಾಡುತ್ತಿಲ್ಲ, ನಾನು ಸಾಯುತ್ತಿದ್ದೇನೆ' ಎಂದಿದ್ದಾಳೆ. ಗಾಬರಿಗೊಂಡ ನಾಗರಾಜ್ ಪಕ್ಕದ ಮನೆಯವರಿಗೆ ಕರೆ ಮಾಡಿ ಕಳಿಸುವಷ್ಟರಲ್ಲಿ ಸರಸ್ವತಿ ಆತ್ಮಹತ್ಯೆಗೆ ಶರಣಾಗಿದ್ದಾಳೆ. ಪತ್ನಿಯ ಸಾವಿಗೆ ಕಾರಣವಾದ ಶ್ರೀನಿವಾಸ್, ಭವಾನಿ ಹಾಗೂ ಶಿಲ್ಪಾಳ ವಿರುದ್ಧ ನಾಗರಾಜ್ ಯಲಹಂಕ ಠಾಣೆಗೆ ದೂರು ನೀಡಿದ್ದು, ಪ್ರಕರಣ ದಾಖಲಾಗಿದೆ.

# ಆದ್ಯ ಶ್ರೀ ಶಂಕರಾಚಾರ್ಯರ ಜನ್ಮದಿನೋತ್ಸವ ಕಾರ್ಯಕ್ರಮ




ಬೆಳಗಾವಿ: ಶ್ರೀ ಶಂಕರಾಚಾರ್ಯ ಸೇವಾ ಸಮಿತಿ ವಿಶ್ವಕರ್ಮ ಹೌಸಿಂಗ್ ಸೊಸೈಟಿ, ರಾಣಿ ಚೆನ್ನಮ್ಮ ನಗರ ವತಿಯಿಂದ ಮನೋಪ್ರಭ ಮಂಗಲ ಕಾರ್ಯಾಲಯದಲ್ಲಿ ಇದೇ ದಿ. 25 ಮಂಗಳವಾರದಂದು ಆದ್ಯ ಶ್ರೀ ಶಂಕರಾಚಾರ್ಯ ಜನ್ಮದಿನೋತ್ಸವವನ್ನು ಹಮ್ಮಿಕೊಂಡಿದ್ದರು.

ಈ ಸಂದರ್ಭದಲ್ಲಿ ಲಘು ರುದ್ರ, ಸೌಂದರ್ಯ ಲಹರಿ ಪಾರಾಯಣ ಮತ್ತು ಶ್ರೀಮತಿ ಅಲಕ ತಾಯಿ ಇನಾಮದಾರ ಅವರಿಂದ ಶ್ರೀ ಶಂಕರಾಚಾರ್ಯರ ಕುರಿತು ಪ್ರವಚನ ಗುರುಗಳಿಗೆ ವಿಶೇಷ ಪೂಜೆ ಅಲಂಕಾರ ಮಹಾಪ್ರಸಾದವನ್ನು ಹಮ್ಮಿಕೊಳ್ಳಲಾಗಿತ್ತು.

ಶ್ರೀ ಶಂಕರಾಚಾರ್ಯ ಸೇವಾ ಸಮಿತಿ ವಿಶ್ವಕರ್ಮ ಹೌಸಿಂಗ್ ಸೊಸೈಟಿ ರಾಣಿ ಚೆನ್ನಮ್ಮ ನಗರ ವತಿಯಿಂದ ಸಮಿತಿಯ ಉಪಾಧ್ಯಕ್ಷ ವಿಲಾಸ ಬದಾಮಿ ರುದ್ರಾಭಿಷೇಕವನ್ನು ನೆರವೇರಿಸಿಕೊಟ್ಟರು

ಅಪಾರ ಸಂಖ್ಯೆಯಲ್ಲಿ ಬಂದು ಭಕ್ತರು ಭಾಗವಹಿಸಿದ್ದರು.. ಕಾರ್ಯಕ್ರಮದಲ್ಲಿ ಶ್ರೀ ಅನಂತ ಚಿಂಚಣಿ, ರಾಕೇಶ್ ದೇಶಪಾಂಡೆ, ವಿಲಾಸ್ ಬದಾಮಿ, ಮಾಲ್ತೇಶ್ ಪಾಟೀಲ, ಉದಯ ದೇಶಪಾಂಡೆ, ವಿದ್ಯಾ ದೇಶಪಾಂಡೆ. ವಿಕಾಸ್ ತೆರಣಿಕರ ಮತ್ತು ಕಾರ್ಯಕಾರಣಿ ಮಂಡಳಿಯ ಎಲ್ಲಾ ಸದಸ್ಯರು ಮೊದಲಾದ ಗಣ್ಯರು ಉಪಸ್ಥಿತ–ರಿದ್ದರು.

# ಪಕ್ಷತೇರ ಅಭ್ಯರ್ಥಿ ಪ್ರಮೋದ ಮುತಾಲಿಕ ಮತಯಾಚನೆ



ಕಾರ್ಕಳ : ದೇಶ ಹಾಗೂ ಧಾರ್ಮಿಕತೆ ಮನೋಭಾವನೆಯುಳ್ಳ ಕ್ಷೇತ್ರದ ಜನರು ಮುಗ್ದರು ಆದರೆ ಇಲ್ಲಿ ಅಭಿವೃದ್ದಿ ಎಂಬುವುದು ಮ–ರಿಚಿಕೆಯಾಗಿದೆ. ಎಂದು ಕಾರ್ಕಳ ವಿಧಾನ ಸಭಾಕ್ಷೇತ್ರಕ್ಕೆ ಪಕ್ಷತೇರ ಅಭ್ಯರ್ಥಿಯಾಗಿ ಸ್ಪರ್ಧಿಸಿದ ಪ್ರಮೋದ ಮುತಾಲಿಕ ಹೇಳಿದರು.

ಅವರು ಕಾರ್ಕಳ ವಿಧಾನ ಸಭಾಕ್ಷೇತ್ರದ ಪರಪು ಗ್ರಾಮದಲ್ಲಿ ಮತಯಾಚನೆ ಸಂಧರ್ಭದಲ್ಲಿ ಮಾತನಾಡಿ ಕ್ಷೇತ್ರದಲ್ಲಿಜನರಿಗಾಗಿ ಕೃಷಿ ಉತ್ಪನಗಳ ಮಾರಾಟಕ್ಕಾಗಿ ಮಾರುಕಟ್ಟೆ ಸೌಲಭ್ಯವಿಲ್ಲ ,ಆರೋಗ್ಯಕಾಗಿ ಬೃಹತಚಿಕಿತ್ಸೆಗೆ ಆಸ್ಪತ್ರೆಗಳಿಲ್ಲ ವೃತಪರ ಉದ್ಯೋಗಕ್ಕಾಗಿ ನಿರ್ಮಸು ಕೊಳ್ಳವಕ್ಕೆ ಸೌಲಭ್ಯ ವಿಲ್ಲ ಕಳೆದ 2 ಅವದಿಗಳಿಂದ ಬಿಜೆಪಿ ಅಭ್ಯರ್ಥಿಜನರ ಸಮಸ್ಯೆಗಳಿಗೆ ಸ್ಪಂದಿಸಿಲ್ಲ ಎಂದು ಆರೋಪಿಸಿದ ಅವರು. ಜನರ ಹಾಗೂ ಕಾರ್ಯರ್ತರ ಒತ್ತಾಯದ ಮೇರೆಗೆಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದು ಕಾಂಗ್ರೆಸ್, ಹಾಗೂ ನನ್ನ ನಡುವೆ ನೇರ ಸ್ಪರ್ಧೆಇದ್ದು ಮತದಾರರ ನನ್ನಗೆ ಬೆಂಬಲ ನೀಡಿ ವಿಜಯಶಾಲೆ ಮಾಡುತ್ತಾರೆಎಂದು ನನ್ನಗೆಆ–ತ್ಮವಿಶ್ವಾಸವಿದೆ. ಇಲ್ಲಿಅಧಿಕಾರ ಹಾಗೂ ಹಣದ ಪ್ರಭಾವ ನಡೆಯುದಿಲ್ಲ ಕ್ಷೇತ್ರದಅಭಿವೃದ್ದಿಗೆ ಮತದಾರರು ಪಕ್ಷದಅಭ್ಯರ್ಥಿಗೆ ಮತ ನೀಡಬೇಕೆಂದು ವಿನಂತಿಸಿಕೊಂಡರು.

ಮುತಾಲಿಕಅಭಿವಾನಿಬಳಗದ ರಾಜ್ಯಧ್ಯಕ್ಷ ಹಾಗೂ ನ್ಯಾಯವಾದಿ ಹರೀಶಅಧಿಕಾರಿ, ವಿಜಯ ಹೇಬ್ರಿ, ಸಚೀನ ನಾಯಕ, ಚೇತನ ಪ್ರಭು, ನಾಡಪ್ರಭು ಸತ್ಯರಂಜನ ಶೆಟ್ಟಿ, ಮೀಸಮಿತಾ ಪೂಜಾರಿ, ಪವಿತ್ರ ಪೂಜಾರಿ, ಕಾಂತಾರಗೋಳಿ, ಪ್ರೀಯಾ ಪೂಜಾರಿ, ರೇಣುಕಾ ಪುಜಾರಿ, ಪುರಶೋತವ್ಆಚಾರ್ಯ ಮತ್ತಿತರರು ಉಪಸ್ಥಿತರಿದ್ದರು.

# ರಾಹುಲ್ ಜಾರಕಿಹೊಳಿ ಭರ್ಜರಿ ಪ್ರಚಾರ



ಯಮಕನಮರಡಿ: ಅಭಿವೃದ್ಧಿ ಹರಿಕಾರರು, ಸಾಮಾಜಿಕ ಸೇವೆಗೆ ತಮ್ಮ ಜೀವನ ಮುಡುಪಾಗಿಟ್ಟ ಕೆಪಿಸಿಸಿ ಕಾರ್ಯಾಧ್ಯಕ್ಷ, ಶಾಸಕ ಸತೀಶ್ ಜಾರಕಿಹೊಳಿ ಅವರ ಪರ ಇಂದು ಯುವ ನಾಯಕ ರಾಹುಲ್ ಜಾರಕಿಹೊಳಿ ಅವರು ಯಮಕನಮರಡಿ ಮತಕ್ಷೇತ್ರದ ಮಾವನೂರ, ಪರಕನಹಟ್ಟಿ, ರುಸ್ತುಂಪೂರ, ಬಗರನಾಳ ಹಾಗೂ ಬನ್ನಿಬಾಗಿ ಗ್ರಾಮಗಳಲ್ಲಿ ಭರ್ಜರಿ ಪ್ರಚಾರ ಕೈಗೊಂಡು ಮತಯಾಚಿಸಿದರು.

ನಂತರ ಮಾತನಾಡಿದ ಯುವ ನಾಯಕ ರಾಹುಲ್ ಜಾರಕಿಹೊಳಿ ಅವರು, ತಂದೆ, ಶಾಸಕರೂ ಆದ ಸತೀಶ್ ಜಾರಕಿಹೊಳಿ ಅವರು ಯಮಕನಮರಡಿ ಮತಕ್ಷೇತ್ರದ ಎಲ್ಲಾ ಹಳ್ಳಿಗಳಲ್ಲಿಯೂ ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡಿದ್ದು, ಕ್ಷೇತ್ರದ ಎಲ್ಲಾ ಶಾಲಾ–ಕಾಲೇಜುಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಕ್ಷೇತ್ರದಲ್ಲಿ ಶೈಕ್ಷಣಿಕ ಕ್ರಾಂತಿಯನ್ನು ಕೈಗೊಂಡಿದ್ದಾರೆ. ಕಾರಣ ಕಳೆದ ಮೂರು ಅವಧಿಯಲ್ಲಿ ಆಯ್ಕೆ ಮಾಡಿದ್ದು, ಮತ್ತೊಮ್ಮೆ ಆಶೀರ್ವದಿಸಬೇಕೆಂದು ಮನವಿ ಮಾಡಿದರು. ಇದೇ ವೇಳೆ ಅಪಾರ ಸಂಖ್ಯೆಯ ಹಿರಿಯರು, ಮಹಿಳೆಯರು, ಯುವಕರು ಸೇರಿ ಯುವ ನಾಯಕ ರಾಹುಲ್ ಜಾರಕಿಹೊಳಿ ಅವರನ್ನು ಪ್ರೀತಿಯಿಂದ ಸ್ವಾಗತಿಸಿ, ಮತಯಾಚನೆಯಲ್ಲಿ ಪಾಲ್ಗೊಂಡು ಕ್ಷೇತ್ರದಲ್ಲಿ ಕಾಂಗ್ರೆಸ್ ಬಾವುಟ ಹಾರಿಸುವುದಾಗಿ ಭರವಸೆ ನೀಡಿದರು.



ಹುಕ್ಕೇರಿ : ಹುಕ್ಕೇರಿ ಪಟ್ಟಣದ ಹಳೆ ಬಸ್ ನಿಲ್ದಾಣದಬಳಿ ಶಂಕರಾಚಾರ್ಯ ಜಯಂತಿ ಆಚರಿಸಲಾಯಿತು. ಸರ್ವೆಶಜಕಾತಿ, ರಾಜುಕುಲಕರ್ಣಿ, ಮಿಲಿಂದ ಕುಲಕರ್ಣಿ, ಹನುಮಂತಚಿಪ್ಪಕಟ್ಟಿ, ಶ್ರೀಪಾದ ಜೋಶಿ, ಪ್ರಮೋದ ಹುಕ್ಕೇರಿ, ಪ್ರಸಾದಕುಲಕರ್ಣಿ, ಅಕ್ಷಯಕುಲಕರ್ಣಿ ಮತ್ತಿರರು ಇದ್ದರು.

# ಲಕ್ಷ್ಮೀ ಹೆಬ್ಬಾಳಕರ್ ಚುನಾವಣೆ ಕಾರ್ಯಾಲಯ ಉದ್ಘಾಟನೆ



ಬೆಳಗಾವಿ: ಬೆಳಗಾವಿ ಗ್ರಾಮೀಣ ಕ್ಷೇತ್ರದ ಮುತಗಾ ಗ್ರಾಮದ ಗೋಕುಲ್ ನಗರದಲ್ಲಿ ಕಾಂಗ್ರೆಸ್ ಪಕ್ಷದ ಚುನಾವಣೆ ಕಾರ್ಯಾಲಯವನ್ನು ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಬುಧವಾರ ಉದ್ಘಾಟಿಸಿದರು.

ಕಾರ್ಯಕರ್ತರು ಪಕ್ಷದ ಆಸ್ತಿಯಾಗಿದ್ದು, ಚುನಾವಣೆ ಸಂದರ್ಭದಲ್ಲಿ ಅವಿಶ್ರಾಂತವಾಗಿ ಕೆಲಸ ಮಾಡುವ ಕಾರ್ಯಕರ್ತ–ರಿಗೆ ಅನುಕೂಲವಾಗುವ ದೃಷ್ಟಿಯಿಂದ ಈ ಕಾರ್ಯಾಲಯ ಆರಂಭಿಸಲಾಗಿದೆ. ಸಾರ್ವಜನಿಕರೂ ಸಹ ಇದರ ಸದುಪಯೋಗ ಪಡೆಯಬಹುದು ಎಂದು ಲಕ್ಷ್ಮೀ ಹೆಬ್ಬಾಳಕರ್ ಈ ಸಂದರ್ಭದಲ್ಲಿ ತಿಳಿಸಿದರು.

ಕ್ಷೇತ್ರದೆಲ್ಲೆಡೆ ಕಾಂಗ್ರೆಸ್ ಪರ ಅಭೂತಪೂರ್ವ ಒಲವಿದ್ದು, ಕಾಂಗ್ರೆಸ್ ಸರಕಾರದ ಸಾಧನೆ, ಜನೋಪಯೋಗಿ ಕೆಲಸ ಮತ್ತು ಬಿಜೆಪಿ ಸರಕಾರದ ವೈಫಲ್ಯ, ಬೆಲೆ ಏರಿಕೆ, ಭ್ರಷ್ಟಾಚಾರಗಳ ಕುರಿತು ಕಾರ್ಯಕರ್ತರು ಜನರಿಗೆ ತಿಳಿಸುವ ಕೆಲಸ ಮಾಡಬೇಕು ಎಂದೂ ಅವರು ಕೋರಿದರು.

ಈ ಸಮಯದಲ್ಲಿ ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಶಂಕರಗೌಡ ಪಾಟೀಲ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ನಾಗೇಶ ದೇಸಾಯಿ, ಪಿಂಟು ಮಲ್ಲವ್ವಗೋಳ, ಗಜಾನನ ಕಣಬರ್ಕರ್, ಶ್ಯಾಮ್ ಮುತಗೇಕರ್, ದೀಲಿಪ್ ಬಸರೀಕಟ್ಟಿ, ಮಹೇಶ ಸುಗನನ್ನವರ್, ರುದ್ರಪ್ಪ ಅಮ್ರಾಪುರ, ಪ್ರಕಾಶ ಕಡ್ಯಾಗೋಳ, ರಾಧಿಕಾ ಮುತಗೇಕರ್, ಫಕೀರವ್ವ ಅಮ್ರಾಪುರ, ಲಕ್ಷ್ಮೀ ಪಾಟೀಲ,ಮಂಜುಳಾ ಅಗಸಿಮನಿ, ಶೀಲಾ ಸೈಬಣ್ಣವರ ಹಾಗೂ ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.

# ಮಗುವಿಗೆ ಜೀವದಾನ ನೀಡಿದ ರೋಟರಿ ಕ್ಲಬ್ ಆಫ್ ಬೆಳಗಾವಿ ಸೌತ್




ಬೆಳಗಾವಿ: ರೋಟರಿ ಕ್ಲಬ್ ಆಫ್ ಬೆಳಗಾವಿ ಸೌತ್ 28 ದಿನದ ಮಗುವಿಗೆ ಉಚಿತ ಹೃದಯ ಶಸ್ತ್ರ ಚಿಕಿತ್ಸೆಗೆ ನೆರವು ನೀಡುವ ಮೂಲಕ ಮಾನವೀಯತೆಗೆ ಸಾಕ್ಷಿಯಾಗಿದೆ. ಚಂದಗಡದ ನಡವಾಡೆ ಗ್ರಾಮದ ತನುಜಾ ಕುಂಡೇಕರ್ ಅವರಿಗೆ 28 ದಿನದ ಮಗುವಿಗೆ ಜೀವದಾನದ ಜಾಗತಿಕ ಅನುದಾನ ಯೋಜನೆಯಡಿ ಉಚಿತ ಹೃದಯ ಶಸ್ತ್ರ ಚಿಕಿತ್ಸೆಗೆ ಸಹಾಯ ಮಾಡಿದೆ.

ಹೃದಯಾಘಾತದಿಂದ ಜನಿಸಿದ ಮಗುವಿಗೆ ಬೆಳಗಾವಿಯ ಕೆಎಲ್ಇ ಡಾ. ಪ್ರಭಾಕರ ಕೋರೆ ವೈದ್ಯಕೀಯ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರಯಲ್ಲಿ ವೈದ್ಯಕೀಯ ತಜ್ಞರ ತಂಡ ಹೃದಯ ಶಸ್ತ್ರ ಚಿಕಿತ್ಸೆ ನಡೆಸಿತು. ಮಗು ಚೇತರಿಸಿಕೊಳ್ಳುತ್ತಿದೆ.

ಅಧ್ಯಕ್ಷ ರಮೇಶ ರಾಮಗುರವಾಡಿ, ಕಾರ್ಯದರ್ಶಿ ಡಾ.ಗೋವಿಂದ ಮಿಸಾಳೆ, ಡಾ.ಜಯಸಿಂಹ ಆಸ್ಪತ್ರೆಗೆ ಭೇಟಿ ನೀಡಿ ಆಸ್ಪತ್ರೆಯ ವೈದ್ಯಕೀಯ ತಂಡವನ್ನು ಶ್ಲಾಘಿಸಿದರು. ಕ್ಲಬ್ ನಡೆಸಿದ 9ನೇ ಹೃದಯ ಶಸ್ತ್ರ ಚಿಕಿತ್ಸೆ ಇದಾಗಿದೆ. ಇನ್ನೂ ಒಂದು ಮಗು ಶಸ್ತ್ರ ಚಿಕಿತ್ಸೆಗೆ ಒಳಗಾಗಿದ್ದು, ಆಸ್ಪತ್ರೆಯಲ್ಲಿ ಚೇತರಿಸಿಕೊಳ್ಳುತ್ತಿದೆ.


# ಲೂಟಿ ಹೊಡೆದಿದ್ದೇ ಬಿಜೆಪಿ ಸಾಧನೆ: ಪ್ರಿಯಾಂಕಾ ಗಾಂಧಿ ಟೀಕೆ

}ಮೊದಲನೇ ಪುಟದಿಂದ

ಕಳೆದ ಮೂರುವರೆ ವರ್ಷಗಳಿಂದ ರಾಜ್ಯದಲ್ಲಿರುವ ಸರ್ಕಾರ ಎಲ್ಲಾ ಹಂತಗಳಲ್ಲಿ ನಿಮ್ಮ ವಿಶ್ವಾಸಕ್ಕೆ ಧಕ್ಕೆ ತಂದಿದೆ. ಆರಂಭದಲ್ಲಿ ದುರಾಸೆ ಆಧಾರದ ಮೇಲೆ ಶಾಸಕರುಗಳನ್ನು ಹಣ ಕೊಟ್ಟು ಖರೀದಿ ಮಾಡಿ ಕಾಂಗ್ರೆಸ್ ಹಾಗೂ ಜೆಡಿಎಸ್ ಮೈತ್ರಿ ಸರ್ಕಾರ ಬೀಳಿಸಿ ಸರ್ಕಾರ ರಚನೆ ಮಾಡಿದರು. ಅಲ್ಲಿಂದ ಇಲ್ಲಿಯವರೊ ಅವರು ಪ್ರತಿ ಮಾತನ್ನೂ ತಪ್ಪಿದ್ದಾರೆ ಎಂದು ತಿಳಿಸಿದರು. ಯುವಕರಿಗೆ ಉದ್ಯೋಗ ಸೃಷ್ಟಿಸುವ ಭರವಸೆ ನೀಡಿದ್ದರು, ರೈತರ ಆದಾಯ ಡಬಲ್ ಮಾಡುವುದಾಗಿ ಹೇಳಿದ್ದರು, ಮಹಿಳೆಯರಿಗೆ ಬೆಲೆ ಇಳಿಸುವುದಾಗಿ ಹೇಳಿದ್ದರು. ಆದರೆ ಏನಾಯ್ತು? ಇಲ್ಲಿರುವ ಯುವಕರಲ್ಲಿ ಎಷ್ಟು ಉದ್ಯೋಗ ಸಿಕ್ಕಿದೆ? ಸರ್ಕಾರದಲ್ಲಿ 2.50 ಲಕ್ಷ ಸರ್ಕಾರಿ ಹುದ್ದೆ ಖಾಲಿ ಇದೆ. ಆದರೆ ಆ ಉದ್ಯೋಗ ನಿಮಗೆ ಸಿಗುತ್ತಿಲ್ಲ. ಈ ಸರ್ಕಾರ ಎಲ್ಲಾ ಹುದ್ದೆಗಳಿಗೆ ಬೆಲೆ ನಿಗದಿಯಾಗಿದೆ. ಪ್ರತಿ ನೇಮಕಾತಿಯಲ್ಲೂ ಭ್ರಷ್ಟಾಚಾರ ನಡೆಯುತ್ತಿದೆ. 40% ಕಮಿಷನ್ ಗೆ ಗುತ್ತಿಗೆದಾರರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಗುತ್ತಿಗದಾರರ ಸಂಘ, ರುಪ್ಸಾ ಸಂಸ್ಥೆ ಈ ಸರ್ಕಾರದ 40% ಕಮಿಷನ್ ವಿಚಾರವಾಗಿ ಪ್ರಧಾನಮಂತ್ರಿಗಳಿಗೆ ಪತ್ರ ಬರೆದರೂ ಯಾವುದೇ ಕ್ರಮ ಕೈಗೊಂಡಿಲ್ಲ. ಬಿಜೆಪಿ ಶಾಸಕನ ಪುತ್ರ ಭ್ರಷ್ಟಾಚಾರ ಮಾಡುವಾಗ 8 ಕೋಟಿ ಹಣದ ಸಮೇತ ಸಿಕ್ಕಿಬೀಳುತ್ತಾರೆ. ಆದರೂ ಯಾವುದೇ ಕ್ರಮ ಜರುಗಿಸುವುದಿಲ್ಲ. ಬದಲಿಗೆ ಅವರ ತಂದೆ ಮೆರವಣಿಗೆ ಮಾಡಿದ್ದಾರೆ. ಕರ್ನಾಟಕ ರಾಜ್ಯದಲ್ಲಿ ನಾವು ಏನು ಬೇಕಾದರೂ ಮಾಡಬಹುದು, ಯಾರು ನಮ್ಮನ್ನು ಕೇಳುವವರಿಲ್ಲ ಎಂಬ ಮನಸ್ಥಿತಿಗೆ ಬಿಜೆಪಿಯವರು ಬಂದಿದ್ದಾರೆ ಎಂದು ಲೇವಡಿ ಮಾಡಿದರು. ಕೋವಿಡ್ ಸಮಯದಲ್ಲಿ ಲೂಟಿ ಮಾಡಿದ್ದಾರೆ. ಶಾಲಾ ಮಕ್ಕಳಿಗೆ ನೀಡುವ ಮೊಟ್ಟೆಯಲ್ಲೂ ಹಣ ಮಾಡಿದ್ದಾರೆ. ಈ ಸರ್ಕಾರ ಯಾರನ್ನೂ ಬಿಡದೆ ಲೂಟಿ ಮಾಡಿದ್ದಾರೆ. ಇಲ್ಲಿರುವ ಮಹಿಳೆಯರು ಜಮೀನಿನಲ್ಲಿ, ಮನೆಯಲ್ಲಿ ಕೆಲಸ ಮಾಡಿ ಶ್ರಮವಹಿಸುತ್ತಿದ್ದಾರೆ. ನಿಮ್ಮ ಸಂಕಷ್ಟದಿಂದ ಕೂಡಿದೆ. ನೀವು ಈ ಪರಿಶ್ರಮ ಯಾವುದಕ್ಕಾಗಿ ಪರಿಶ್ರಮ ಹಾಕುತ್ತೀರಿ? ನಿಮ್ಮ ಭವಿಷ್ಯ, ನಿಮ್ಮ ಮಕ್ಕಳ ಭವಿಷ್ಯ ಭದ್ರಪಡಿಸಲು ಅಲ್ಲವೇ? ಮಕ್ಕಳ ಆರೋಗ್ಯ ಕೆಟ್ಟರೆ ಹೆದ–ರಿಕೆ, ನೋವಾಗುತ್ತದೆ. ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಲು ಉತ್ತಮ ಶಾಲೆಗಳು ಸಿಗದಿದ್ದಾಗ ನಮಗೆ ಬೇಸರವಾಗುತ್ತದೆ. ಇಷ್ಟೆಲ್ಲಾ ಪರಿಶ್ರಮಕ್ಕೆ ತಕ್ಕ ಫಲ ನೀಡದಿದ್ದರೆ, ನಿಮಗೆ ಸಹಜವಾಗಿ ಸರ್ಕಾರದ ವಿರುದ್ಧ ಸಿಟ್ಟು ಬರುತ್ತದೆ. ನಿಮ್ಮ ಮಕ್ಕಳಿಗೆ ಉದ್ಯೋಗ ಸಿಕ್ಕರೆ ಬಹಳ ಸಂತೋಷವಾಗುತ್ತದೆ. ಮಗನಾಗಲಿ, ಮಗಳಾಗಲಿ, ಸ್ವಂತ ಕಾಲಿನಲ್ಲಿ ನಿಲ್ಲಲಿ, ಉತ್ತಮ ಕೆಲಸ ಸಿಗಲಿ ಎಂದು ನಾವೆಲ್ಲರೂ ಬಯಸುತ್ತೇವೆ. ಇದಕ್ಕಾಗಿ ನಾವು ಪರಿಶ್ರಮ ಪಡುತ್ತೇವೆ ಅಲ್ಲವೇ ಎಂದು ಪ್ರಶ್ನಿಸಿದರು.

ಬಿಜೆಪಿ ಸರ್ಕಾರ ರಾಜ್ಯದಲ್ಲಿ ಎಷ್ಟು ಹಣ ಲೂಟಿ ಮಾಡಿದ್ದಾರೆ ಗೊತ್ತಾ? ಉದ್ಯೋಗ, ಶಾಲೆ, ಆಸ್ಪತ್ರೆ, ರಸ್ತೆ ವಿಚಾರಗಳನ್ನು ಬಿಡಿ, ಆದರೂ 1.50 ಲಕ್ಷ ಕೋಟಿ ಹಣವನ್ನು ಲೂಟಿ ಮಾಡಿದೆ. ಇಲ್ಲಿ ಅಡಿಕೆ ಬೆಳೆಗಾರರಿಗೆ ಸರಿಯಾದ ಬೆಲೆ ಸಿಗುತ್ತಿಲ್ಲ, ನಿಮ್ಮ ಸಾಲವನ್ನು ಮನ್ನಾ ಮಾಡುವುದಿಲ್ಲ. ನಿಮ್ಮ ಮೇಲೆ ಜಿಎಸ್ ಟಿ ಹಾಕುತ್ತಿದ್ದಾರೆ. ನೀವು ಗ್ಯಾಸ್ ಸಿಲಿಂಡರ್ ಗೆ, ಅಡುಗೆ ಅನಿಲ, ದಿನಸಿ ಪದಾರ್ಥಗಳಿಗೆ ಎಷ್ಟು ಹಣ ನೀಡುತ್ತಿದ್ದೀರಿ ಯೋಚಿಸಿ. ಮತ್ತೊಂದೆಡೆ ಕೇಂದ್ರ ಬಿಜೆಪಿ ಸರ್ಕಾರ ರಾಜ್ಯಕ್ಕೆ ನೀಡಬೇಕಾದ ಹಣ ಹಂತಹಂತವಾಗಿ ಕಡಿಮೆಯಾಗುತ್ತಿದೆ. ಇವರು ಲೂಟಿ ಮಾಡಿರುವ 1.50 ಲಕ್ಷ ಕೋಟಿ ಎಲ್ಲಿ ಹೋಯಿತು? ಇದರಲ್ಲಿ 100 ಏಮ್ಸ್ ಆಸ್ಪತ್ರೆ, 2250 ಎಕ್ಸ್ ಪ್ರೆಸ್ ವೇ ಮಾಡಬಹುದಾಗಿತ್ತು. 187 ಇಎಸ್ಐ ಆಸ್ಪತ್ರೆ ನಿರ್ಮಾಣ ಮಾಡಬಹುದಿತ್ತು, ನಮ್ಮ ಮಕ್ಕಳಿಗೆ 30 ಸಾವಿರ ಸ್ಮಾರ್ಟ್ ತರಗತಿ ನಿರ್ಮಿಸಬಹುದಿತ್ತು. ಬೆಂಗಳೂರು ಮೆಟ್ರೋ ಮಾದರಿಯಲ್ಲಿ 750 ಕಿ.ಮೀ ಮೆಟ್ರೋ ಮಾರ್ಗ ನಿರ್ಮಿಸಬಹುದಿತ್ತು ಎಂದರು.

# ಲಕ್ಷ್ಮಣ ಸವದಿ ಆರೋಪಕ್ಕೆ ಸಿಎಂ ಬೊಮ್ಮಾಯಿ ತಿರುಗೇಟು



ಬೆಳಗಾವಿ: ಯಾವ ನಿರ್ದಿಷ್ಟ ಪ್ರಕರಣದಲ್ಲಿ 40 ಪರ್ಸೆಂಟ್ ಹಣ ಪಡೆದಿದ್ದೇವೆ ಎಂದು ಸ್ಪಷ್ಟವಾಗಿ ಹೇಳಬೇಕು.

ಈ ತರಹ ಗಾಳಿಯಲ್ಲಿ ಗುಂಡು ಹೊಡೆಯುವುದರಿಂದ ಪ್ರಯೋಜನ ಇಲ್ಲ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದರು.

ಕಾಂಗ್ರೆಸ್ ಅಧಿಕಾರಕ್ಕೆ ಬಂದ್ಮೇಲೆ 40 ಪರ್ಸೆಂಟ್ ಕಮಿಷನ್ ತನಿಖೆ ಕೈಗೊಳ್ಳಲಾಗುವುದು ಎಂಬ ಲಕ್ಷ್ಮಣ್ ಸವದಿ ಅವರ ಹೇಳಿಕೆಗೆ ಅವರು ಇಂದು ಬೆಳಗಾವಿಯ ಸಾಂಬ್ರಾ ವಿಮಾನ ನಿಲ್ದಾಣದಲ್ಲಿ ಮಾಧ್ಯಮದವರಿಗೆ .ಪ್ರತಿಕ್ರಿಯೆ ನೀಡಿದರು.

ಅವರು ಇಲ್ಲಿ ಇದ್ದಾಗಲೇ ಹೇಳಬಹುದಿತ್ತಲ್ಲ, ಏಕೆ ಸುಮ್ಮನಿದ್ದರು? ಎಂದು ಮಾಜಿ ಡಿಸಿಎಂ ಲಕ್ಷ್ಮಣ್ ಸವದಿಗೆ ಸಿಎಂ ಬಸವರಾಜ ಬೊಮ್ಮಾಯಿ ಪ್ರಶ್ನೆ ಮಾಡಿದರು.

**ವರ್ಚಸ್ಸು ಕೆಡಿಸುವ ಪ್ರಯತ್ನ**

ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ ಮಾಡಿದ ಮುಖ್ಯಮಂತ್ರಿಗಳು, ರಾಜ್ಯದ ಮುಖ್ಯಮಂತ್ರಿ ಗಳನ್ನು ಗುರಿಯಾಗಿಸಿ ಬಿಜೆಪಿ ಇಮೇಜ್ ಕೆಡಿಸಬೇಕು ಅಂತಿ–ದ್ದಾರೆ, ಆದರೆ ಸಾಧ್ಯವಾಗುತ್ತಿಲ್ಲ. ಕಳೆದ ಒಂದೂವರೆ ವರ್ಷದಿಂದ ಸಿದ್ದರಾಮಯ್ಯ ಅವರು ಪ್ರಯತ್ನ ಮಾಡುತ್ತಿದ್ದಾರೆ.

**ಕಾಂಗ್ರೆಸ್ ನವರು ಭ್ರಷ್ಟಾಚಾರಿಗಳು**

ಆದರೆ ಜನ ನಂಬುತ್ತಿಲ್ಲ, ಏಕೆಂದರೆ ಅವರೇ ದೊಡ್ಡ ಭ್ರಷ್ಟಾಚಾರಿಗಳು ಎಂದರು. ಕಾಂಗ್ರೆಸ್ ಅಂದ್ರೆ ಭ್ರಷ್ಟಾಚಾರ, ಭ್ರಷ್ಟಾಚಾರ ಅಂದ್ರೆ ಕಾಂಗ್ರೆಸ್. ಭ್ರಷ್ಟಾಚಾರ ಕಾಂಗ್ರೆಸ್ ಪಕ್ಷದ ಅವಿಭಾಜ್ಯ ಅಂಗವಾಗಿದೆ. ಹೀಗಿರುವಾಗ ಅವರು ಭ್ರಷ್ಟಾಚಾರ ಬಗ್ಗೆ ಮಾತನಾಡುವ ಅವಶ್ಯಕತೆ ಇಲ್ಲ ಎಂದರು

**ಲಿಂಗಾಯತ ಲಡಾಯಿ ಇಲ್ಲ**

ನಿಮ್ಮ ಹಾಗೂ ಸಿದ್ದರಾಮಯ್ಯ ಮಧ್ಯೆ ಲಿಂಗಾಯತ ಲಡಾಯಿ ಜೋರಾಗಿದೆ ಎಂದು ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿ ಲಡಾಯಿ ಏನಿಲ್ಲ, ಅವರೇ ಮಾಡಿಕೊಂಡಿರೋದು. ಅವರೇ ಮಾಡಿಕೊಂಡು ಬೇರೆ ಬೇರೆ ಸ್ಪಷ್ಟೀಕರಣ ಕೊಡುತ್ತ ತಿರುಗುತ್ತಿದ್ದಾರೆ. ಗ್ರೌಂಡ್‌ನಲ್ಲಿ ಲಿಂಗಾಯತರು ಇದ್ಯಾವುದಕ್ಕೂ ತಲೆಕೆಡಿಸಿಕೊಳ್ಳುವುದಿಲ್ಲ. ಜನ ಬಹಳ ಪ್ರಬುದ್ಧವಾಗಿದ್ದಾರೆ, ಯಾರಿಗೆ ಯಾವಾಗ ಹೇಗೆ ಬೆಂಬಲ ಮಾಡಬೇಕೆಂದು ಗೊತ್ತಿದೆ ಎಂದರು.

**ಬೆಳಗಾವಿ ಜಿಲ್ಲೆಯಲ್ಲಿ ಕನಿಷ್ಠ 15 ಸ್ಥಾನ**

ಇಂದು ಚಿಕ್ಕೋಡಿ ಲೋಕಸಭಾ ವ್ಯಾಪ್ತಿಯಲ್ಲಿ ಪ್ರಚಾರ ಮಾಡುತ್ತಿದ್ದು, ಎಲ್ಲ ಕಡೆ ರೋಡ್ ಷೋ, ಸಭೆಗಳಲ್ಲಿ ಜನರ ಉತ್ಸಾಹ ದೊಡ್ಡ ಪ್ರಮಾಣದಲ್ಲಿ ಇದೆ. ಬೆಳಗಾವಿ ಜಿಲ್ಲೆಯಲ್ಲಿ ಕನಿಷ್ಠ 15 ಸ್ಥಾನ ಗೆಲ್ಲುವ ವಿಶ್ವಾಸವಿದೆ ಎಂದರು.

**ಜನಸ್ಪಂದನೆ:** ಕೆಲವು ಬದಲಾವಣೆ ಮಾಡಿದ್ದಕ್ಕೂ ಜನ ಸ್ಪಂದಿಸಿದ್ದಾರೆ. ನಾನು ರಾಜ್ಯದ ಉದ್ದಗಲಕ್ಕೂ ಸುತ್ತುತ್ತಿದ್ದೇನೆ.

ನಾಮಪತ್ರ ವಾಪಸ್ ಪ್ರಕ್ರಿಯೆ ಆದಮೇಲೆ ಬಿಜೆಪಿ ಸುನಾಮಿ ಇಡೀ ರಾಜ್ಯದಲ್ಲಿ ಇದೆ. ಬಿಜೆಪಿ ಸ್ಪಷ್ಟ ಬಹುಮತದಿಂದ ಬರಲಿದೆ ಎಂದು ಬಸವರಾಜ ಬೊಮ್ಮಾಯಿ ವಿಶ್ವಾಸ ವ್ಯಕ್ತಪಡಿಸಿದರು. ಎಕ್ಸಿಟ್ ಪೋಲ್ ಆಧಾರ ಮೇಲೆ ಚುನಾವಣಾ ರಣನೀತಿ ಮಾಡುವುದಿಲ್ಲ ಎಂದು ತಿಳಿಸಿದರು.

**ಮಾಹಿತಿ ವ್ಯವಸ್ಥೆ ಆಧಾರದ ಮೇಲೆ, ರಣನೀತಿ** ಸಂಖ್ಯೆ ಬಲದಷ್ಟೇ ಉತ್ಸಾಹ ಕೂಡ ದೊಡ್ಡ ಪ್ರಮಾಣದಲ್ಲಿ ಇದೆ. ಈಗ ಬಂದಿರುವುದೆಲ್ಲಾ ಹಳೆಯ ಎಕ್ಸಿಟ್ ಪೋಲ್. ನಮ್ಮದೇ ಆದಂತಹ ಮಾಹಿತಿ ವ್ಯವಸ್ಥೆ ಇದೆ, ಅದರ ಮೇಲೆ ರಣನೀತಿ ಇರುತ್ತದೆ ಎಂದರು.

# ಮೊಳಕಾಲ್ಮುರು: ನಟ ಸುದೀಪ್ ರೋಡ್ ಶೋ

ಚಿತ್ರದುರ್ಗ: ಮೊಳಕಾಲ್ಮುರು ವಿಧಾನಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಎಸ್.ತಿಪ್ಪೇಸ್ವಾಮಿ ಪರವಾಗಿ ನಟ ಸುದೀಪ್ ಬುಧವಾರ ರೋಡ್ ಶೋ ನಡೆಸಿ ಮತಯಾಚನೆ ಮಾಡಿದರು.


ಹೆಲಿಕಾಪ್ಟರ್ ಮೂಲಕ ಬೆಂಗಳೂರಿನಿಂದ ಮೊಳಕಾಲ್ಮುರು ಪಟ್ಟಣಕ್ಕೆ ಆಗಮಿಸಿದ ಸುದೀಪ್ ಅವರಿಗೆ ರೇಷ್ಮೆ ಶಾಲು, ಹೂಹಾರ ಹಾಕಿ ಅದ್ದೂರಿ ಸ್ವಾಗತ ಕೋರಲಾಯಿತು.

ನೆಚ್ಚಿನ ನಟನನ್ನು ಕಣ್ತುಂಬಿಕೊಳ್ಳುವ ಕಾತುರದಿಂದ ಅಪಾರ ಅಭಿಮಾನಿಗಳು ಜಮಾಯಿಸಿದ್ದರು.

ಪಟ್ಟಣದ ತಾಲ್ಲೂಕು ಕಚೇರಿ ಸಮೀಪದಿಂದ ಆರಂಭವಾದ ರೋಡ್ ಶೋ ಬಸ್ ನಿಲ್ದಾಣದ ವರೆಗೆ ನಡೆಯಿತು.

ಅಭಿಮಾಗಳತ್ತ ಕೈಬೀಸುತ್ತಿದ್ದಂತೆ ಜನರು ಜೈಕಾರ ಹಾಕಿ ಸಂಭ್ರಮಿಸಿದರು. ಬಿಜೆಪಿ ಅಭ್ಯರ್ಥಿ ಎಸ್.ತಿಪ್ಪೇಸ್ವಾಮಿ ಇದ್ದರು.

# ಓಟು ಮಾರಾಟಕ್ಕಿದೆ, ಕಿರುಚಿತ್ರದ ಪೋಸ್ಟರ್ ಬಿಡುಗಡೆ




ಬೆಂಗಳೂರ : ಕಿನ್ನಾಳ ಟಾಕೀಸ್ ಲಾಂಛನದಡಿ ನಿರ್ಮಾಣ ಆಗಿರುವ 'ಓಟು ಮಾರಾಟಕ್ಕಿದೆ' ಕಿರುಚಿತ್ರದ ಮೊದಲ ಪೋಸ್ಟರ್ ಅನ್ನು ಕನ್ನಡದ ರ್‍ಯಾಪ್‌ಸ್ಟಾರ್ ಚಂದನ್‌ಶೆಟ್ಟಿ ಅವರು ಬಿಡುಗಡೆ ಮಾಡಿ, ತಂಡಕ್ಕೆ ಶುಭ ಹಾರೈಸಿದರು.

ಎಲೆಕ್ಷನ್ ಬಂದಿರುವ ಈ ಸಂದರ್ಭದಲ್ಲಿ ಟೈಟಲ್ನಿಂದಲೆ ಈ ಕಿರುಚಿತ್ರ ಸದ್ದು ಮಾಡುತ್ತಿದ್ದು. ವಿಶೇಷ ಎಂದರೆ ಪ್ರಜ್ವಲ್ ಕಿನ್ನಾಳ ಎನ್ನುವ 8 ವರ್ಷದ ಬಾಲಕ ನಾಯಕನಾಗಿ ನಟಿಸಿ, ರಚಿಸಿ, ನಿರ್ದೇಶಿಸಿದ್ದಾನೆ.. ಹಾಗೂ ಮಕ್ಕಳೇ ಮುಖ್ಯ ಪಾತ್ರಗಳಲ್ಲಿ ನಟಿಸಿದ್ದಾರೆ. (ದೊಡ್ಡವರಂತೆ ಮೀಸೆ ಅಂಟಿಸಿಕೊಂಡು). ಎನ್ ಎಂ.ವಿಶ್ವ, ಶ್ರೀಧರ ಕಶ್ಯಪ್, ವೈಭವ ನಾಗರಾಜ ಆರತಿ, ರಮೇಶ್ ಪ್ರೇಮ್, ಲಕ್ಷಿತಾ ಕಂಠದಾನ ಮಾಡಿದ್ದಾರೆ.

ಶ್ರೀಮತಿ ಭವಾನಿ ಕಿನ್ನಾಳರಾಜ್ ಅವರು ಈ ಕಿರುಚಿತ್ರ ನಿರ್ಮಿಸಿದ್ದು, ಜಿ ವಿ ನಾಗರಾಜ್ ಛಾಯಾಗ್ರಹಣ, ಆಕಾಶ್ ಪರ್ವ ಸಂಗೀತ, ಕೆಜಿಎಫ್ ಮೊದಲಾದ ಹಲವಾರು ಹಿಟ್ ಚಲನಚಿತ್ರಗಳಿಗೆ ಹಾಡುಗಳನ್ನು ರಚಿಸಿರುವ, ಹಿಟ್ಲರ್ ಚಲನಚಿತ್ರ ನಿರ್ದೇಶಕ ಕಿನ್ನಾಳರಾಜ್ ಚಿತ್ರಕಥೆ, ಸಂಭಾಷಣೆ ಬರೆಯುವದರ ಜೊತೆಗೆ ಸಂಕಲನವನ್ನು ಮಾಡಿದ್ದಾರೆ. ಟೈಟಲ್ ಗ್ರಾಫಿಕ್ಸ್ ಪ್ರಕಾಶ್ ಡಿ .ಜೆ, ಶಿವಶರಣ ಸುಗ್ನಳ್ಳಿ, ಧ್ವನಿಮುದ್ರಣ ಜಯಚಂದ್ರ ಮಾಡಿದ್ದಾರೆ. ಪತ್ರಿಕಾಪ್ರಚಾರ ಆರ್.ಚಂದ್ರಶೇಖರ್, ಡಾ ಪ್ರಭು ಗಂಜಿಹಾಳ. ಡಾ. ವೀರೇಶ್ ಹಂಡಿಗಿ ಅವರದ್ದಾಗಿದೆ.

ಕಿರು ಚಿತ್ರದಲ್ಲಿ ವಿಷ್ಣು, ವಿಜಯಕುಮಾರ್, ಅಗಸ್ತ್ಯ, ಮನೋಜ್, ಸೃಷ್ಟಿ, ಮಾನಸ, ಆರಾಧ್ಯ,ಸಾಹಿತ್ಯ, ಸುಹಾಸ್, ದಿಲೀಪ್, ಅನ್ವಿತಾ, ಕುನಾಲ್, ಯಶವಂತ್,ಶ್ರೀ ನಾಗರ್ನಿಕ, ಆಕಾಶ್. ವಿಕಾಸ್. ಪುಟ್ಟರಾಜು, ಸಹನಾ, ಅನ್ವೀಕಾ, ಅಭಿ , ಆರ್ನವ್ ಇನ್ನೂ ಅನೇಕ ಬಾಲ ಕಲಾವಿದರು ಅಭಿನಯಿಸಿದ್ದಾರೆ. ಈ ಕಿರುಚಿತ್ರವು ಶೀಘ್ರದಲ್ಲೇ ಬಿಡುಗಡೆ ಆಗಲಿದೆ.

# ಎಲ್ಲಾ ಸಮುದಾಯಗಳಿಗೂ ಸಿಎಂ ಮೋಸ: ಡಿ.ಕೆ.ಶಿ ಆಕ್ರೋಶ



ಮೈಸೂರು: ಮೀಸಲಾತಿ ಹೆಚ್ಚಳ ವಿಚಾರದಲ್ಲಿ ಬಿಜೆಪಿ ಸರ್ಕಾರ ಜನರಿಗೆ ವಂಚಿಸಿದೆ. ಬಿಜೆಪಿಯ ಮೋಸದಾಟ ಬಯಲಾಗಿದೆ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಕಿಡಿಕಾರಿದ್ದಾರೆ.

ಮೈಸೂರಿನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಡಿ.ಕೆ.ಶಿವಕುಮಾರ್, ಅಲ್ಪಸಂಖ್ಯಾತರನ್ನು ದೇಶದಿಂದ ಓಡಿಸಿ ಬಿಡ್ತೀರಾ? ಮೀಸಲಾತಿ ಹೆಚ್ಚಳದಲ್ಲಿ 9ನೇ ಶಡ್ಯೂಲ್ ಸೇ–ರಿಸಬೇಕಿತ್ತು. ಯಾಕೆ ಸೇರಿಸಿಲ್ಲ. ಮೀಸಲಾತಿ ವಿಚಾರದಲ್ಲಿ ಅಫಿಡವಿಟ್ ಸಲ್ಲಿಸಲು ಸರ್ಕಾರ ವಿಫಲವಾಗಿದೆ. ಸುಪ್ರೀಂ ಕೋರ್ಟ್ ಗೆ ಯಾಕೆ ಅಫಿಡವಿಟ್ ಸಲ್ಲಿಸಲಾಗಿಲ್ಲ. ಸಿಎಂ ಏಕೆ ಮಿಸಲಾತಿ ವಿಚಾರದಲ್ಲಿ ಮೋಸದಾಟ ಆಡಿದರು? ಎಂದು ಪ್ರಶ್ನಿಸಿದ್ದಾರೆ.

ಮೀಸಲಾತಿ ಪರಿಷ್ಕರಣೆ ಹೆಸರಲ್ಲಿ ಸಿಎಂ ಬೊಮಮಯಿ ರಾಜ್ಯದ ಜನರಿಗೆ ದ್ರೋಹ ಮಾಡಿದ್ದಾರೆ. ಎಲ್ಲಾ ಸಮುದಾಯಗಳಿಗೂ ವಂಚಿಸುವ ಕೆಲಸ ಮಾಡಿದ್ದಾರೆ. ಬಿಜೆಪಿಯವರು ಸುಳ್ಳು ಹೇಳಿಕೊಂಡು ಕಾಲ ಕಳೆಯುವ ಕೆಲಸ ಮಾಡಿದ್ದಾರೆ.

ಈ ಬಾರಿ ಚುನಾವಣೆಯಲ್ಲಿ 40% ಕಮಿಷನ್ ಸರ್ಕಾರದ ಸ್ಥಾನಗಳು 40ಕ್ಕೆ ಕುಸಿಯಲಿದೆ ಎಂದು ಹೇಳಿದರು.

# ಸತೀಶ ಜಾರಕಿಹೊಳಿಯವರಿಂದ ಮತದಾರರಿಗೆ ಮನವಿ



ಬೆಳಗಾವಿ : ಸಮೀಪದ ಉಕ್ಕಡ ಗ್ರಾಮದಲ್ಲಿ ಮಾನ್ಯ ಮತದಾರ ಬಂಧು–ಭಗಿನಿಯರೇ, ನಾನು ಯಮಕನಮರಡಿ ಮತಕ್ಷೇತ್ರದಿಂದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಕರ್ನಾಟಕ ರಾಜ್ಯ ವಿಧಾನಸಭೆ ಚುನಾವಣೆಗೆ ಸ್ಪರ್ಧಿಸಿದ್ದೇನೆ. ಮಾನ್ಯರಾದ ತಾವು "ಹಸ್ತ" ಕಾಂಗ್ರೆಸ್ (ಐ) ಪಕ್ಷದ ಚಿನ್ನೆಗೆ ತಮ್ಮ ಅತ್ಯಮೂಲ್ಯವಾದ ಮತವನ್ನು ನೀಡಿ. ಪ್ರಚಂಡ ಬಹುಮತದಿಂದ ನನ್ನನ್ನು ಆರಸಿ ತರಬೇಕೆಂದು ಸತೀಶ್ ಜಾರಕಿಹೊಳಿಯವರು ಮತದಾರಲ್ಲಿ ವಿನಂತಿಸಿದರು.

ಉಕ್ಕುಡ ಗ್ರಾಮದ ಹಿರಿಯರಾದಂತ ಇವರು ಮನೆ ಮನೆಗೆ ಹೋಗಿ ಮನವಿ ಪತ್ರವನ್ನು ಸಲ್ಲಿಸಿ ಪ್ರಚಾರ ಮಾಡಿದ್ದರು.

ಕೆಂಪನ ಗೌಡ್ರು ಪಾಟೀಲ್ ಲಕ್ಷ್ಮಣ್, ಕಟಾಬಳಿ ಮಣ್ಣೆಪ್ಪ ದೊಡಶಾನಟ್ಟಿ ಹಾಲಪ್ಪಾ ನಾಯ್ಕ್ ಸಿದ್ದಪ್ಪ ಹಂಚಿನಮನಿ, ಮಾರುತಿ ಬಳಿಗಾರ, ದುರ್ಗಪ್ಪ ನಾಯ್ಕ್ ರಾಯಗೌಡ್ರು ನಾಗಪ್ಪ ಪಾಟೀಲ್, ಆನಂದ ಹನುಮಂತ ಪಾಟೀಲ್ ಉಪಸ್ಥಿತರಿದ್ದರು.

# ಮತದಾನ ಜಾಗೃತಿ: ಬೀದಿ ನಾಟಕ ಪ್ರದರ್ಶನಕ್ಕೆ ಚಾಲನೆ



ಬೆಳಗಾವಿ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಸ್ವೀಪ್ ಸಮಿತಿ ಬೆಳಗಾವಿ ಹಾಗೂ ಜಿಲ್ಲೆಯ ಎಲ್ಲ ತಾಲೂಕಿನ ಆಯ್ದ ಗ್ರಾಮ ಪಂಚಾಯತಗಳಲ್ಲಿ ಮತದಾನ ಜಾಗೃತಿಗಾಗಿ ಬೀದಿ ನಾಟಕ ಪ್ರದರ್ಶನಕ್ಕೆ ಜಿಲ್ಲಾ ಪಂಚಾಯತ ಆವರಣದಲ್ಲಿ ಏಪ್ರಿಲ್.25 ಮಂಗಳವಾರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಹರ್ಷಲ್ ಭೊಯರ್ ಅವರು ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು.

ಬೆಳಗಾವಿ ತಾಲ್ಲೂಕಿನ ಹಿಂಡಲಗಾ, ಗಣೇಶಪೂರ ಖಾನಾಪೂರ ತಾಲ್ಲೂಕಿನ ಕಣ–ಕುಂಬಿ, ಚೋರಲಾ ಹಾಗೂ ಜಾಂಬೋಟಿ, ಯಮಕನಮರ್ಡಿ ಕ್ಷೇತ್ರದ ಯಮಕನಮರಡಿ ಮತ್ತು ಹೆಬ್ಬಾಳ,ನಿಪ್ಪಾನಿ ಮತ್ತು ಚಿಕ್ಕೋಡಿ ತಾಲ್ಲೂಕಿನ ಚಾಂದಶಿರವಾಡ ಹಾಗೂ ಹೋಸಪೇಟಿ, ಹುಕ್ಕೇರಿ ತಾಲ್ಲೂಕಿನ ಮದಿಹಳ್ಳಿ ಮತ್ತು ಹೋಸಪೇಟ್, ಚಿಕ್ಕೋಡಿ ತಾಲ್ಲೂಕಿನ ಅಂಕಲಿ ಮತ್ತು ಕಡಕಲಾಟ ಗ್ರಾಮ ಪಂಚಾಯತಗಳಲ್ಲಿ 2023ರ ಸಾರ್ವತ್ರಿಕ ಚುನಾವಣೆಯ ಕುರಿತು ಮತದಾನದ ಜಾಗೃತಿಗಾಗಿ ಬೀದಿ ನಾಟಕಗಳ ಪ್ರದರ್ಶನಗೊಳ್ಳಲಿವೆ.

ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕರಾದ ರವಿ ಬಂಗಾರಪ್ಪನವರ,ಜಿಲ್ಲಾ ಐಇಸಿ ಸಂಯೋಜಕ ಪ್ರಮೋದ ಗೋಡೆಕರ್, ಜಿಲ್ಲಾ ಎಸ್.ಬಿ.ಎಂ ಸಮಾಲೋಚಕ ಬಾಹುಬಲಿ ಮೆಳವಂಕಿ, ತಾಲ್ಲೂಕು ಐಇಸಿ ಸಂಯೋಜಕ ರಮೇಶ ಮಾದರ ಹಾಗೂ ಜಿಲ್ಲಾ ಪಂಚಾಯತನ ಸಿಬ್ಬಂದಿಗಳು ಹಾಜರಿದ್ದರು.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089